ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SP NEWS ಡಿಜಿಟಲ್ ನ್ಯೂಸ್ ಕಹಾನಿ

SURYA PRAGATHI Kannada daily
ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume:05 ಸಂಪುಟ: 05 | Issue:201 ಸಂಚಿಕೆ: 201 | Date:02-09-2026 Wednesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

ಗೃಹಲಕ್ಷ್ಮಿ ಯೋಜನೆಗೆ 3 ವರ್ಷ:"ನಾಚಿಕೆಗೇಡಿನ ಮಹಾ ಹಗರಣ" :ಆರ್. ಅಶೋಕ್ ವಾಗ್ದಾಳಿ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ‘ಗೃಹಲಕ್ಷ್ಮಿ’ ಯೋಜನೆಗೆ ಮೂರು ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಆಡಳಿತ ಮತ್ತು ಪ್ರತಿ ಪಕ್ಷಗಳ ನಡುವೆ ವಾಗ್ವಾದ ತೀವ್ರಗೊಂಡಿದೆ.

ಯೋಜನೆಯ ಮೂರು ವರ್ಷಗಳ ಸಂಭ್ರಮಾಚರಣೆಯನ್ನು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ತೀವ್ರವಾಗಿ ಖಂಡಿಸಿದ್ದು, ಇದನ್ನು "ನಾಚಿಕೆಗೇಡಿನ ಮಹಾ ಹಗರಣ" ಎಂದು ಬಣ್ಣಿಸಿದ್ದಾರೆ.

ಯೋಜನೆಯಲ್ಲಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿದ ಅವರು, ಹಲವು ಲೋಪಗಳ ನಡುವೆಯೂ ಸರ್ಕಾರ ಯೋಜನೆಯ ಮೂರನೇ ವರ್ಷಾಚರಣೆ ಮಾಡುತ್ತಿರುವುದನ್ನು ಪ್ರಶ್ನಿಸಿದ್ದಾರೆ. ಜೂನ್‌ವರೆಗೆ 1,10,562 ಮೃತ ಫಲಾನುಭವಿಗಳ ಖಾತೆಗಳಿಗೆ ರೂ.117.31 ಕೋಟಿ ಜಮೆಯಾಗಿತ್ತು ಎಂದು ಆರೋಪಿಸಿದ ಅವರು, ಜೀವಂತ ಫಲಾನುಭವಿಗಳಿಗೆ ಮಾತ್ರ ಸರ್ಕಾರ ಸಮಯಕ್ಕೆ ಸರಿಯಾಗಿ ಹಣ ಪಾವತಿಸಲು ಸಾಧ್ಯವಾಗುತ್ತಿಲ್ಲ ಎಂದು ಟೀಕಿಸಿದರು.ನೈಜ ಫಲಾನುಭವಿಗಳಿಗೆ ಮಾಸಿಕ ಕಂತುಗಳು ವಿಳಂಬವಾಗುತ್ತಿವೆ ಎಂದು ಆರೋಪಿಸಿದ ಅಶೋಕ್, ಯೋಜನೆಯಲ್ಲಿನ ಅಕ್ರಮಗಳಿಗೆ ಹೊಣೆಗಾರಿಕೆಯನ್ನು ನಿಗದಿಪಡಿಸಿದ ಬಳಿಕವಷ್ಟೇ ಸರ್ಕಾರ ವಾರ್ಷಿಕೋತ್ಸವ ಆಚರಿಸಬೇಕಿತ್ತು ಎಂದು ಒತ್ತಾಯಿಸಿದ್ದಾರೆ.

ಇದು ಮಹಿಳಾ ಸಬಲೀಕರಣವಲ್ಲ, “ದೊಡ್ಡ ಹಗರಣ” ಎಂದು ಆರೋಪಿಸಿದ ಅವರು, ಮಾಸಿಕ ಗೌರವಧನ ಪಡೆಯಲು ಮಹಿಳಾ ಫಲಾನುಭವಿಗಳು ಕಚೇರಿಯಿಂದ ಕಚೇರಿಗೆ ಅಲೆಯುವಂತಾಗಿದೆ ಎಂದರು. ಕಳೆದ ಮೂರು ವರ್ಷಗಳಿಂದ ಗೃಹಲಕ್ಷ್ಮಿ ಯೋಜನೆಯ ಹೆಸರಿನಲ್ಲಿ ಸರ್ಕಾರ ಭ್ರಷ್ಟಾಚಾರ, ಅಕ್ರಮ ಮತ್ತು ಹಣದ ದುರುಪಯೋಗದಲ್ಲಿ



ತೊಡಗಿದೆ. ಇಂತಹ ಪರಿಸ್ಥಿತಿಯಲ್ಲಿ ಮೂರನೇ ವರ್ಷಾಚರಣೆಯನ್ನು ಯಾವ ಆಧಾರದ ಮೇಲೆ ಆಚರಿಸಲಾಗುತ್ತಿದೆ? ಇದು “ನಾಚಿಕೆಗೇಡಿನ ಸಂಗತಿ” ಎಂದು ಕಿಡಿಕಾರಿದ್ದಾರೆ.

ಇದೇ ವೇಳೆ ಸರ್ಕಾರದ ಹಣ ಸೋರಿಕೆಯಾಗುವುದನ್ನು ತಡೆಯಲು ವಿಫಲವಾಗಿರುವ ಸರ್ಕಾರ, ಹೊಸ ಪರಿಶೀಲನಾ ವ್ಯವಸ್ಥೆಗಾಗಿ ಹೆಚ್ಚುವರಿಯಾಗಿ ರೂ.20 ಕೋಟಿ ಸಾರ್ವಜನಿಕ ಹಣ ಖರ್ಚು ಮಾಡಲು ಮುಂದಾಗಿರುವುದನ್ನೂ ಅವರು ಪ್ರಶ್ನಿಸಿದ್ದಾರೆ.

ಏತನ್ಮಧ್ಯೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗೃಹಲಕ್ಷ್ಮಿ ಯೋಜನೆಗೆ ಮೂರು ವರ್ಷ ಪೂರ್ಣಗೊಂಡಿರುವುದಕ್ಕೆ ಭಾನುವಾರ ಮೆಚ್ಚುಗೆ ವ್ಯಕ್ತಪಡಿಸಿದರು. ಈ ಯೋಜನೆಯು ರಾಜ್ಯದ ಕೋಟ್ಯಂತರ ಮಹಿಳೆಯರಿಗೆ ಆರ್ಥಿಕ ನೆರವು, ಆತ್ಮವಿಶ್ವಾಸ ಮತ್ತು ಹೆಚ್ಚಿನ ಸ್ವಾವಲಂಬನೆಯನ್ನು ಒದಗಿಸಿದೆ ಎಂದು ಹೇಳಿದರು.

ಮಹಿಳೆಯರ ಸಬಲೀಕರಣ ಮತ್ತು ಗೌರವಕ್ಕೆ ಸರ್ಕಾರದ ಬದ್ಧತೆಯನ್ನು ಗೃಹಲಕ್ಷ್ಮಿ ಯೋಜನೆ ಪ್ರತಿಬಿಂಬಿಸುತ್ತದೆ ಎಂದು ಸಿದ್ದರಾಮಯ್ಯ ಹೇಳಿದರು.

ರಾಹುಲ್ ಗಾಂಧಿ ವಿರುದ್ಧದ ಎಫ್‌ಐಆರ್ ಬಿಜೆಪಿಯ ಜಾತಿವಾದಿ ಮನಸ್ಥಿತಿಗೆ ಹಿಡಿದ ಕನ್ನಡಿ

ಸೂರ್ಯಪ್ರಗತಿನ್ಯೂಸ್.ಕಾಂ



ಕಾಂಗ್ರೆಸ್ ವರಿಷ್ಠರಾದ ಶ್ರೀ ರಾಹುಲ್ ಗಾಂಧಿ ಅವರ ವಿರುದ್ಧ ಉತ್ತರಾಖಂಡ ಪೊಲೀಸರು ಎಫ್‌ಐಆರ್ ದಾಖಲಿಸಿರುವುದು ಪ್ರಜಾಪ್ರಭುತ್ವ, ಸಂವಿಧಾನ ಮತ್ತು ಸಾಮಾಜಿಕ ನ್ಯಾಯದ ಮೇಲೆ ನಡೆದಿರುವ ಗಂಭೀರ ದಾಳಿ. ಜಾತಿ ತಾರತಮ್ಯ ಮತ್ತು ಅಸ್ಪೃಶ್ಯತೆಯ ವಿರುದ್ಧ ಧ್ವನಿ ಎತ್ತಿದ ನಾಯಕರನ್ನೇ ಪ್ರಕರಣದಲ್ಲಿ ಸಿಲುಕಿಸುವ ಮೂಲಕ ಬಿಜೆಪಿ ಸರ್ಕಾರ ತನ್ನ ನಿಜವಾದ ಮನಸ್ಥಿತಿಯನ್ನು ಬಹಿರಂಗಪಡಿಸಿದೆ. ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರು ಹಲ್ದ್ವಾನಿಯಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಬಳಿಕ, ಅವರು ಭೇಟಿ ನೀಡಿದ ಸ್ಥಳವನ್ನು ‘ಶುದ್ಧೀಕರಣ’ ಮಾಡಲಾಗಿದೆ. ದೇಶದ ಪ್ರಮುಖ ದಲಿತ ನಾಯಕನೊಬ್ಬರು ಭೇಟಿ ನೀಡಿದ ನಂತರ ಇಂತಹ ಕೃತ್ಯ ನಡೆದಿರುವುದು ಸಾಮಾನ್ಯ ಸಂಗತಿಯಲ್ಲ. ಇದು ನಮ್ಮ ಸಮಾಜದಲ್ಲಿ ಇನ್ನೂ ಜೀವಂತವಾಗಿರುವ ಜಾತಿ ತಾರತಮ್ಯದ ಮನೋಭಾವದ ಕುರಿತು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ.

ದಲಿತ ನಾಯಕರೊಬ್ಬರು ಭೇಟಿ ನೀಡಿದ ಸ್ಥಳವನ್ನು ‘ಶುದ್ಧೀಕರಿಸುವುದು’ ದೇಶದ ಸಂವಿಧಾನದಡಿ ಸ್ವೀಕಾರಾರ್ಹವೇ? ಇಲ್ಲದಿದ್ದರೆ ಈ ಕೃತ್ಯ ಎಸಗಿದವರನ್ನು ಶಿಕ್ಷಿಸಬೇಕಲ್ಲವೇ? ಇಂಥದ್ದೊಂದು ಸರಳ ಪ್ರಶ್ನೆಯನ್ನು ಶ್ರೀ ರಾಹುಲ್ ಗಾಂಧಿ ಅವರು ಕೇಳಿದ್ದಾರೆ. ಜಾತಿ ತಾರತಮ್ಯವನ್ನು ಪ್ರಶ್ನಿಸಿದ್ದಾರೆ. ಅಸ್ಪೃಶ್ಯತೆಯಂತಹ ಅನಿಷ್ಟ ಪದ್ಧತಿಗಳ ವಿರುದ್ಧ ಧ್ವನಿ ಎತ್ತಿದ್ದಾರೆ.

ಆದರೆ, ಬಿಜೆಪಿ ಸರ್ಕಾರ ಮಾಡಿದ್ದೇನು? ಜಾತಿ ತಾರತಮ್ಯ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳುವ ಬದಲು, ಅದನ್ನು ಪ್ರಶ್ನಿಸಿದ ಶ್ರೀ ರಾಹುಲ್ ಗಾಂಧಿ ಅವರ ವಿರುದ್ಧವೇ ಎಫ್‌ಐಆರ್ ದಾಖಲಿಸಿದೆ. ಇದಕ್ಕಿಂತ ವಿಪರ್ಯಾಸ ಮತ್ತೇನಿದೆ?

ಇದಕ್ಕಿಂತಲೂ ಆಘಾತಕಾರಿ ಸಂಗತಿಯೆಂದರೆ, ದಲಿತರ ಗೌರವ, ಸಮಾನತೆ ಮತ್ತು ಸಂವಿಧಾನಾತ್ಮಕ ಹಕ್ಕುಗಳ ಪರವಾಗಿ ಮಾತನಾಡಿದ ಶ್ರೀ ರಾಹುಲ್ ಗಾಂಧಿ ಅವರ ವಿರುದ್ಧವೇ ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಪ್ರಕರಣ ದಾಖಲಿಸಿರುವುದು. ದಲಿತರ ರಕ್ಷಣೆಗೆ ರೂಪಿಸಲಾಗಿರುವ ಕಾನೂನನ್ನು ದಲಿತರ ಪರವಾಗಿ ಧ್ವನಿ ಎತ್ತುವವರ ವಿರುದ್ಧ ಬಳಸುತ್ತಿರುವುದು ಕಾನೂನಿನ ದುರುಪಯೋಗವಲ್ಲದೆ ಮತ್ತೇನು? ಅಸ್ಪೃಶ್ಯತೆಯ ವಿರುದ್ಧ ಮಾತನಾಡುವುದು ಅಪರಾಧವೇ? ಜಾತಿ ತಾರತಮ್ಯವನ್ನು ಪ್ರಶ್ನಿಸುವುದು ಅಪರಾಧವೇ? ದಲಿತರ ಸ್ವಾಭಿಮಾನಕ್ಕಾಗಿ ಧ್ವನಿ ಎತ್ತುವುದು ಅಪರಾಧವೇ? ಎನ್ನುವುದು ನನ್ನ ಪ್ರಶ್ನೆ. ಭಾರತದ ಸಂವಿಧಾನವು ಅಸ್ಪೃಶ್ಯತೆಯನ್ನು ನಿಷೇಧಿಸಿದೆ. ಪ್ರತಿಯೊಬ್ಬ ನಾಗರಿಕನಿಗೂ ಸಮಾನತೆ, ಸ್ವಾಭಿಮಾನ ಮತ್ತು ಘನತೆಯಿಂದ ಬದುಕುವ ಹಕ್ಕನ್ನು ನೀಡಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರು ಕಟ್ಟಿಕೊಟ್ಟ ಸಂವಿಧಾನದ ಆಶಯಗಳನ್ನು ರಕ್ಷಿಸುವುದು ಸರ್ಕಾರದ ಕರ್ತವ್ಯ. ಆದರೆ, ಆ ಆಶಯಗಳ ಪರವಾಗಿ ಮಾತನಾಡುವವರನ್ನೇ ಬೆದರಿಸುವುದು ಮತ್ತು ಪ್ರಕರಣಗಳಲ್ಲಿ ಸಿಲುಕಿಸುವುದು ಸಂವಿಧಾನದ ಮೇಲೆ ಬಿಜೆಪಿಗಿರುವ ಅಗೌರವವನ್ನು ತೋರುತ್ತದೆ.

ಪೊಲೀಸ್ ಪ್ರಕರಣಗಳ ಮೂಲಕ ರಾಹುಲ್ ಗಾಂಧಿಯವರ ಧ್ವನಿಯನ್ನು ಅಡಗಿಸಲು ಸಾಧ್ಯವಿಲ್ಲ. ಅವರ ಜೊತೆ ನನ್ನಂತಹ ಕೋಟ್ಯಂತರ ಭಾರತೀಯರಿದ್ದಾರೆ. ದಲಿತ ಸಮುದಾಯದವನಾಗಿ ನನ್ನ ಸಂಪೂರ್ಣ ಬೆಂಬಲ ಅವರಿಗಿದೆ. ಇಂತಹ ಘಟನೆಗಳಿಂದ ಸಾಮಾಜಿಕ ನ್ಯಾಯದ ಪ್ರಶ್ನೆಗಳನ್ನು ಎತ್ತುವುದನ್ನು ನಾವು ನಿಲ್ಲಿಸುವುದಿಲ್ಲ. ಬದಲಿಗೆ ಜಾತಿ ತಾರತಮ್ಯದ ವಿರುದ್ಧದ ಹೋರಾಟವನ್ನು ನಾವು ಮತ್ತಷ್ಟು ತೀವ್ರಗೊಳಿಸುತ್ತೇವೆ. ದಲಿತರ ಸ್ವಾಭಿಮಾನ ಮತ್ತು ಘನತೆಯ ಪರವಾಗಿ ಕಾಂಗ್ರೆಸ್ ಪಕ್ಷದ ಧ್ವನಿ ಇನ್ನಷ್ಟು ಗಟ್ಟಿಯಾಗಲಿದೆ. ಶ್ರೀ ರಾಹುಲ್ ಗಾಂಧಿ ಅವರ ವಿರುದ್ಧ ದಾಖಲಿಸಿರುವ ಎಫ್‌ಐಆರ್ ಅನ್ನು ತಕ್ಷಣವೇ ಹಿಂಪಡೆಯಬೇಕು. ಹಲ್ದ್ವಾನಿಯಲ್ಲಿ ನಡೆದಿರುವ ‘ಶುದ್ಧೀಕರಣ’ದ ಹೆಸರಿನ ಆಚರಣೆಯ ಕುರಿತು ನಿಷ್ಪಕ್ಷಪಾತ ಮತ್ತು ಪಾರದರ್ಶಕ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.

ಸಂವಿಧಾನವನ್ನು ದುರ್ಬಲಗೊಳಿಸುವ, ಜಾತಿ ತಾರತಮ್ಯವನ್ನು ಸಮರ್ಥಿಸುವ ಮತ್ತು ಸಾಮಾಜಿಕ ನ್ಯಾಯದ ಧ್ವನಿಯನ್ನು ಹತ್ತಿಕ್ಕುವ ಯಾವುದೇ ಪ್ರಯತ್ನದ ವಿರುದ್ಧ ಕಾಂಗ್ರೆಸ್ ಪಕ್ಷ ನಿರಂತರವಾಗಿ ಹೋರಾಡಲಿದೆ.

ಫೆರಿಪೆರಲ್ ರಿಂಗ್ ರಸ್ತೆ ಸರ್ವೆಗೆ ರೈತರ ತೀವ್ರ ವಿರೋಧ; ಬಾರುಗೋಲು ಚಳುವಳಿಯ ಎಚ್ಚರಿಕೆ ನೀಡಿದ ಗೌರಿಶಂಕರ್

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ದೇವರ ಹೊಸಹಳ್ಳಿ ಮಲ್ಲಸಂದ್ರ ವಸಂತನರಸಾ ಪುರ ಮಾರ್ಗದಲ್ಲಿ ಪ್ರಸ್ತಾಪಿಸಲಾಗಿರುವ ಫೆರಿಪೆರಲ್ ರಿಂಗ್ ರಸ್ತೆ ಯೋಜನೆಗೆ ಸಂಬಂಧಿಸಿದಂತೆ ಭೂಮಿಯ ಸರ್ವೆ ನಡೆಸಲು ಅಧಿಕಾರಿಗಳು ಮುಂದಾದ ಹಿನ್ನೆಲೆಯಲ್ಲಿ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದ ಘಟನೆ ದೊಡ್ಡಸಾರಂಗಿ ಗ್ರಾಮದ ಬಳಿ ನಡೆದಿದೆ. ರೈತರ ಆಕ್ಷೇಪ ಹಾಗೂ ವಿರೋಧದ ನಡುವೆಯೂ ಸರ್ವೆ ಕಾರ್ಯಕ್ಕೆ ಅಧಿಕಾರಿಗಳು ಮುಂದಾಗಿದ್ದರಿಂದ ಸ್ಥಳದಲ್ಲಿ ಪರಿಸ್ಥಿತಿ ಬಿಗಡಾಯಿಸಿತು. ತಮ್ಮ ಕೃಷಿ ಭೂಮಿ, ಜೀವನಾಧಾರ ಮತ್ತು ಭವಿಷ್ಯದ ಕುರಿತು ಆತಂಕಗೊಂಡ ರೈತರು ಅಧಿಕಾರಿಗಳ ಕ್ರಮವನ್ನು ಪ್ರಶ್ನಿಸಿ ಸರ್ವೆ ಕಾರ್ಯವನ್ನು ತಡೆಯಲು ಪ್ರಯತ್ನಿಸಿದರು.



ಆ ಸಂದರ್ಭದಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಮಾಜಿ ಶಾಸಕ ಡಿ.ಸಿ. ಗೌರಿಶಂಕರ್ ಅವರು ರೈತರೊಂದಿಗೆ ಮಾತುಕತೆ ನಡೆಸಿ, ಅವರ ಸಮಸ್ಯೆಗಳನ್ನು ಆಲಿಸಿದರು. ರೈತರ ಭೂಮಿ ಮತ್ತು ಜೀವನೋಪಾಯಕ್ಕೆ ಧಕ್ಕೆ ಉಂಟಾಗುವ ಯಾವುದೇ ಯೋಜನೆಯಲ್ಲಿಯೂ ರೈತರ ಅಭಿಪ್ರಾಯವನ್ನು ಕಡೆಗಣಿಸಬಾರದು ಎಂದು ಅವರು ಅಧಿಕಾರಿಗಳಿಗೆ ಸ್ಪಷ್ಟಪಡಿಸಿದರು.

“ರೈತರ ವಿರುದ್ಧ ಸರ್ಕಾರಗಳು ನಿಂತರೆ, ನಾನು ರೈತರ ಪರ ನಿಲ್ಲಬೇಕಾಗುತ್ತದೆ. ರೈತರ ಭೂಮಿ ಮತ್ತು ಬದುಕಿನ ಪ್ರಶ್ನೆ ಬಂದಾಗ ರಾಜಕೀಯಕ್ಕಿಂತ ರೈತರ ಹಿತವೇ ನನಗೆ ಮುಖ್ಯ. ರೈತರ ಒಪ್ಪಿಗೆ, ನ್ಯಾಯಸಮ್ಮತ ಪರಿಹಾರ ಹಾಗೂ ಅವರ ಆತಂಕಗಳಿಗೆ ಸೂಕ್ತ ಉತ್ತರ ನೀಡದೆ ಏಕಾಏಕಿ ಸರ್ವೆ ನಡೆಸುವುದು ಸರಿಯಾದ ಕ್ರಮವಲ್ಲ ಎಂದು ಗೌರಿಶಂಕರ್ ಹೇಳಿದರು.

ಅಧಿಕಾರಿಗಳು ರೈತರೊಂದಿಗೆ ಸಮಾಲೋಚನೆ ನಡೆಸದೆ ಸರ್ವೆ ಮುಂದುವರಿಸಿದರೆ, ರೈತರ ಪರವಾಗಿ ಕಾನೂನುಬದ್ಧ ಹಾಗೂ ಪ್ರಜಾಸತ್ತಾತ್ಮಕ ಹೋರಾಟ ನಡೆಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

ರೈತರ ಪ್ರತಿಭಟನೆಯನ್ನು ಪೊಲೀಸ್ ಬಲದ ಮೂಲಕ ಹತ್ತಿಕ್ಕುವ ಪ್ರಯತ್ನ ಮಾಡಬಾರದು. ಪೊಲೀಸರನ್ನು ಬಳಸಿಕೊಂಡು ರೈತರನ್ನು ಒಕ್ಕಲೆಬ್ಬಿಸುವ ಅಥವಾ ಅವರ ಧ್ವನಿಯನ್ನು ಅಡಗಿಸುವ ಪ್ರಯತ್ನ ನಡೆದರೆ, ಅದನ್ನು ಪ್ರಜಾಸತ್ತಾತ್ಮಕವಾಗಿ ವಿರೋಧಿಸಲಾಗುವುದು ಎಂದು ಗೌರಿಶಂಕರ್ ತಿಳಿಸಿದರು.

“ರೈತರ ಮೇಲೆ ಲಾಠಿ ಬೀಸುವ ಪರಿಸ್ಥಿತಿ ನಿರ್ಮಾಣವಾದರೆ, ರೈತರ ಪರವಾಗಿ ಬಾರುಗಾಲು ಚಳುವಳಿ ಸೇರಿದಂತೆ ಶಾಂತಿಯುತ ಹಾಗೂ ಪ್ರಜಾಸತ್ತಾತ್ಮಕ ಹೋರಾಟಕ್ಕೆ ಮುಂದಾಗಬೇಕಾಗುತ್ತದೆ. ಸರ್ಕಾರ ಜನರಿಗಾಗಿ ಇರಬೇಕು ಜನರ ಭೂಮಿಯನ್ನು ಕಸಿದುಕೊಳ್ಳಲು ಅಲ್ಲ. ಅಭಿವೃದ್ಧಿಯ ಹೆಸರಿನಲ್ಲಿ ರೈತರ ಬದುಕು ನಾಶವಾಗಬಾರದು” ಎಂದು ಅವರು ಹೇಳಿದರು.


ಫೆರಿಫೆರಲ್ ರಿಂಗ್ ರಸ್ತೆ ಸೇರಿದಂತೆ ಯಾವುದೇ ಅಭಿವೃದ್ಧಿ ಯೋಜನೆಗೆ ರೈತರು ವಿರೋಧಿಗಳಲ್ಲ. ಆದರೆ ಅಭಿವೃದ್ಧಿಯ ಹೆಸರಿನಲ್ಲಿ ರೈತರ ಕೃಷಿ ಭೂಮಿ, ಜೀವನೋಪಾಯ ಮತ್ತು ಸಾಮಾಜಿಕ ನೆಲೆಯನ್ನು ಬಲಿಕೊಡುವುದನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಯೋಜನೆಯ ಅಗತ್ಯವಿದ್ದರೆ ಪರ್ಯಾಯ ಮಾರ್ಗಗಳ ಪರಿಶೀಲನೆ, ಪಾರದರ್ಶಕ ಸರ್ವೆ, ರೈತರೊಂದಿಗೆ ಸಮಗ್ರ ಚರ್ಚೆ, ಸೂಕ್ತ ಪರಿಹಾರ ಮತ್ತು ಪುನರ್ವಸತಿ ಸೇರಿದಂತೆ ಎಲ್ಲ ಅಂಶಗಳ ಕುರಿತು ಸರ್ಕಾರ ಸ್ಪಷ್ಟ ನಿಲುವು ಪ್ರಕಟಿಸಬೇಕು ಎಂದು ಅವರು ಆಗ್ರಹಿಸಿದರು. ರೈತರ ಭೂಮಿ ಸ್ವಾಧೀನಪಡಿಸಿಕೊಳ್ಳುವ ಮೊದಲು ಪ್ರತಿಯೊಬ್ಬ ರೈತನ ಆತಂಕವನ್ನು ಸರ್ಕಾರ ಆಲಿಸಬೇಕು. ಭೂಮಿ ಕಳೆದುಕೊಳ್ಳುವ ರೈತರಿಗೆ ಕೇವಲ ಹಣದ ಪರಿಹಾರ ನೀಡುವುದರಿಂದ ಸಮಸ್ಯೆ ಬಗೆಹರಿಯುವುದಿಲ್ಲ. ಕೃಷಿ ಭೂಮಿ ಎಂದರೆ ರೈತನಿಗೆ ಕೇವಲ ಆಸ್ತಿ ಅಲ್ಲ ಅದು ಆತನ ಕುಟುಂಬದ ಬದುಕು, ಭವಿಷ್ಯ ಮತ್ತು ಸ್ವಾಭಿಮಾನದ ಆಧಾರ ಎಂಬುದನ್ನು ಸರ್ಕಾರ ಅರ್ಥಮಾಡಿಕೊಳ್ಳಬೇಕು ಎಂದು ಗೌರಿಶಂಕರ್ ಹೇಳಿದರು.ರೈತರ ಹೋರಾಟವನ್ನು ದೌರ್ಜನ್ಯದಿಂದ ಹತ್ತಿಕ್ಕುವ ಬದಲು ಅವರೊಂದಿಗೆ ಮಾತುಕತೆ ನಡೆಸಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು. ಸರ್ಕಾರ ತಕ್ಷಣವೇ ರೈತರ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಫೆರಿಪೆರಲ್ ರಿಂಗ್ ರಸ್ತೆ ಯೋಜನೆಯ ಸಂಪೂರ್ಣ ವಿವರ, ಸರ್ವೆಯ ಉದ್ದೇಶ, ಭೂಸ್ವಾಧೀನದ ವ್ಯಾಪ್ತಿ ಪರಿಹಾರದ ಮಾನದಂಡ ಹಾಗೂ ಪರ್ಯಾಯ ಮಾರ್ಗಗಳ ಬಗ್ಗೆ ಸ್ಪಷ್ಟ ಮಾಹಿತಿ ನೀಡಬೇಕು ಎಂದು ಅವರು ಒತ್ತಾಯಿಸಿದರು.

ದೊಡ್ಡಸಾರಂಗಿ ಬಳಿ ರೈತರ ತೀವ್ರ ವಿರೋಧದ ಹಿನ್ನೆಲೆಯಲ್ಲಿ ಅಧಿಕಾರಿಗಳು ಸರ್ವೆ ಕಾರ್ಯವನ್ನು ಸ್ಥಗಿತಗೊಳಿಸಿ ಸ್ಥಳದಿಂದ ವಾಪಸ್ ತೆರಳಿದರು. “ರೈತರ ಹಿತಕ್ಕೆ ವಿರುದ್ಧವಾಗಿ ಯಾವುದೇ ಕ್ರಮ ಕೈಗೊಂಡರೂ ರೈತರ ಜೊತೆ ನಿಂತು ಹೋರಾಟ ಮಾಡುತ್ತೇವೆ. ರೈತರ ಭೂಮಿ ಉಳಿಸುವ ಹೋರಾಟದಲ್ಲಿ ಅಗತ್ಯವಿದ್ದರೆ ಮುಂದಿನ ಹಂತದ ಪ್ರಜಾಸತ್ತಾತ್ಮಕ ಹೋರಾಟಕ್ಕೂ ಸಿದ್ಧ” ಎಂದು ಮಾಜಿ ಶಾಸಕ ಡಿ.ಸಿ. ಗೌರಿಶಂಕರ್ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ದೋಬಿ ಘಾಟ್ ಬಳಿ ಸುಸಜ್ಜಿತ ಆರೋಗ್ಯ ಕೇಂದ್ರ ಶೀಘ್ರ ಉದ್ಘಾಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ನಗರದ 26ನೇ ವಾರ್ಡಿನ ದೋಬಿ ಘಾಟ್ ಬಳಿ ಸುಸಜ್ಜಿಯ ಪ್ರಾಥಮಿಕ ಆರೋಗ್ಯ ಕೇಂದ್ರ ಉದ್ಘಾಟನೆಗೆ ಸಿದ್ಧವಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ನಿರ್ಮಿಸಲಾಗುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಶಾಸಕ ಜಿ.ಬಿ. ಜ್ಯೋತಿ ಗಣೇಶ್‌ಅವರು ಮಂಗಳವಾರ ಭೇಟಿ ನೀಡಿ, ಆಸ್ಪತ್ರೆ ಕಟ್ಟಡದ ಅಂತಿಮ ಹಂತದ ಕಾಮಗಾರಿ ಹಾಗೂ ಅಲ್ಲಿನ ಸೌಲಭ್ಯಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಜಿ.ಬಿ. ಜ್ಯೋತಿ ಗಣೇಶ್, ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಉತ್ತಮವಾದ ಸ್ಥಳಾವಕಾಶ ದೊರೆತಿದ್ದು, ಒಂದು ಕೋಟಿರೂ. ವೆಚ್ಚದಲ್ಲಿ 260.38 ಚ.ಮೀ



ಅಳತೆಯಲ್ಲಿ ಆಸ್ಪತ್ರೆಕಟ್ಟಡವುಅಚ್ಚುಕಟ್ಟಾಗಿ ಹಾಗೂ ಸುಸಜ್ಜಿತವಾಗಿ ನಿರ್ಮಾಣಗೊಂಡಿದೆ. ನೆಲ ಮಹಡಿಯಲ್ಲಿ ವೈದ್ಯರ ಕೊಠಡಿ, ಡೇ ಕೇರ್ ಕೊಠಡಿ, ಔಷಧಾಲಯ, ಮಹಿಳಾ ಮತ್ತು ಪುರುಷರ ಶೌಚಾಲಯ, ಮೊದಲ ಮಹಡಿಯಲ್ಲಿ ಆರೋಗ್ಯ ಕ್ಷೇಮ ಕೊಠಡಿ, ಪ್ರಯೋಗಾಲಯ ವ್ಯವಸ್ಥೆ ಮಾಡಲಾಗಿದೆ. ಅಲ್ಲದೆ, ನೀರು ಸರಬರಾಜು ಮತ್ತು ಒಳ ಚರಂಡಿ, ವಿದ್ಯುತ್ತೀಕರಣ, ನೀರು ಶೇಖರಣಾ ತೊಟ್ಟಿ, ವಿಶಾಲ ಪಾರ್ಕಿಂಗ್ ಜಾಗ ಇತ್ಯಾದಿ ಸೌಲಭ್ಯಗಳಿವೆ. ಶೀಘ್ರದಲ್ಲಿ ಈ ಆಸ್ಪತ್ರೆ ಉದ್ಘಾಟನೆಯಾಗಿ ಸಾರ್ವಜನಿಕರಿಗೆ ಆರೋಗ್ಯ ಸೇವೆ ದೊರೆಯಲಿದೆ ಎಂದು ಹೇಳಿದರು.

ಆರೋಗ್ಯ ಸೇವೆ ಪ್ರತಿಯೊಬ್ಬ ನಾಗರಿಕನ ಮೂಲಭೂತ ಅಗತ್ಯವಾಗಿದ್ದು, ಜನರು ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳಿಗೂ ದೂರದ ಆಸ್ಪತ್ರೆಗಳಿಗೆ ತೆರಳಬೇಕಾದ ಪರಿಸ್ಥಿತಿಯಲ್ಲಿ ಈ ಆರೋಗ್ಯ ಕೇಂದ್ರ ಅನುಕೂಲವಾಗಲಿದೆ. ನುರಿತ ವೈದ್ಯರಿಂದ ವೈದ್ಯಕೀಯ ತಪಾಸಣೆ ಮತ್ತು ಚಿಕಿತ್ಸೆ ರಕ್ತ ಪರೀಕ್ಷೆ ಸೇರಿದಂತೆ ಅಗತ್ಯ ಆರೋಗ್ಯ ತಪಾಸಣೆ, ಚಿಕಿತ್ಸೆ ಹಾಗೂ ಔಷಧಿ ಸೇವೆಗಳು ದೊರೆಯಲಿವೆ ಜ್ಯೋತಿ ಗಣೇಶ್ ತಿಳಿಸಿದರು. ಮುಂದಿನ ಒಂದು ತಿಂಗಳೊಳಗೆ ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಾರ್ವಜನಿಕರ ಸೇವೆಗೆ ಆರಂಭಿಸುವ ಉದ್ದೇಶವಿದೆ.ಕೇಂದ್ರ ಆರಂಭಗೊಂಡ ನಂತರ 26ನೇ ವಾರ್ಡ್ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳ ವಾರ್ಡುಗಳ ನಾಗರಿಕರು ಆರೋಗ್ಯ ಸೇವೆ ಪಡೆಯಬಹುದು ಎಂದು ಹೇಳಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ವಿವಿಧ ಸರ್ಕಾರಿ ನಿಗಮ–ಮಂಡಳಿಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ತಕ್ಷಣ ರಾಜೀನಾಮೆ ನೀಡಿ



ಬೆಂಗಳೂರು: ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸರ್ಕಾರದ ಸಚಿವ ಸಂಪುಟ ಸರ್ಕಸ್ ಇನ್ನೂ ಮುಗಿದಿಲ್ಲ! ಇದರ ನಡುವೆಯೇ, ಕಾಂಗ್ರೆಸ್ ಪಕ್ಷದಲ್ಲಿ ಮತ್ತೊಂದು ಸುತ್ತಿನ ಸರ್ಕಸ್ ಪ್ರಾರಂಭವಾಗುವ ಮುನ್ಸೂಚನೆ ಸಿಕ್ಕಿದೆ. ಯಾಕಂದ್ರೆ, ಸಿಎಂ ಡಿ.ಕೆ. ಶಿವಕುಮಾರ್ ಅವರು ರಾಜ್ಯದ ವಿವಿಧ ಸರ್ಕಾರಿ ನಿಗಮ–ಮಂಡಳಿಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಲ್ಲಿರುವ ಶಾಸಕರು ಹಾಗೂ ಮುಖಂಡರಿಗೆ ತಕ್ಷಣವೇ ತಮ್ಮ ಸ್ಥಾನಗಳಿಗೆ ರಾಜೀನಾಮೆ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ ಎನ್ನಲಾಗಿದೆ. ಆ ಕುರಿತ ವರದಿ ಇಲ್ಲಿದೆ:

ಹೊಸಬರಿಗೆ ಅವಕಾಶ?

ಇತ್ತೀಚಿನ ಸಚಿವ ಸಂಪುಟ ವಿಸ್ತರಣೆಯ ಸಂದರ್ಭದಲ್ಲಿ ಸಚಿವ ಸ್ಥಾನ ಸಿಗದೆ ವಂಚಿತರಾದ ಮತ್ತು ಅಸಮಾಧಾನಗೊಂಡಿರುವ 8ಕ್ಕೂ ಹೆಚ್ಚು ಪ್ರಮುಖ ಶಾಸಕರಿಗೆ ಹಾಗೂ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ಈ ನಿಗಮ–ಮಂಡಳಿಗಳಲ್ಲಿ ಸೂಕ್ತ ಸ್ಥಾನಮಾನ ನೀಡಿ ಸಮಾಧಾನಪಡಿಸುವುದು ಉದ್ದೇಶದೊಂದಿಗೆ, ಈಗಾಗಲೇ ನಿಗಮ–ಮಂಡಳಿಗಳಲ್ಲಿ ಎರಡೂವರೆ ವರ್ಷಕ್ಕೂ ಹೆಚ್ಚು ಅವಧಿ ಪೂರೈಸಿರುವ ಶಾಸಕರು ಮತ್ತು ನಾಯಕರನ್ನು ಹುದ್ದೆಯಿಂದ ಕೆಳಗಿಳಿಸಿ, ಸರ್ಕಾರದ ಉಳಿದ ಅವಧಿಗೆ ಹೊಸಬರನ್ನು ನೇಮಕ ಮಾಡಲು ಮುಂದಾಗಿದ್ದಾರೆ ಎನ್ನಲಾಗಿದೆ. ಇದಕ್ಕೂ ಮುನ್ನ ಸಚಿವ ಸ್ಥಾನದಿಂದ ವಂಚಿತರಾದ ಹಾಗೂ ನಿಗಮ ಮಂಡಳಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದ ಹಿರಿಯ ಶಾಸಕರ ತಂಡ ಇತ್ತೀಚೆಗೆ ದೆಹಲಿಗೆ ಭೇಟಿ ನೀಡಿತ್ತು. ರಾಜ್ಯ ಕಾಂಗ್ರೆಸ್ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರನ್ನು ಭೇಟಿ ಮಾಡಿ, ಹಳೆಯ ಪದಾಧಿಕಾರಿಗಳನ್ನು ಬದಲಿಸಿ ಹೊಸಬರಿಗೆ ಜವಾಬ್ದಾರಿ ನೀಡುವಂತೆ ಮನವಿ ಸಲ್ಲಿಸಿದ್ದರು. ಈ ಬೆಳವಣಿಗೆಯ ಬೆನ್ನಲ್ಲೇ ಸರ್ಕಾರದ ಕಡೆಯಿಂದ ಈ ಕಠಿಣ ಆದೇಶ ಹೊರಬಿದ್ದಿದೆ. ಅದರಂತೆ, ಅಂದಾಜು ಮೂವತ್ತೈದಕ್ಕೂ ಹೆಚ್ಚು ಶಾಸಕರು ಈಗಾಗಲೇ ನಿಗದಿತ ಅವಧಿ ಪೂರೈಸಿದ್ದು, ಅವರೆಲ್ಲರೂ ಹುದ್ದೆ ತ್ಯಜಿಸುವುದು ಅನಿವಾರ್ಯವಾಗಿದೆ.

ಮುಂದುವರೆದು, ಈ ಬದಲಾವಣೆ ಬಗ್ಗೆ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸೂಚನೆ ನೀಡಿರುವ ಸಿಎಂ, ಎಲ್ಲ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು ತಮ್ಮ ಇಲಾಖಾ ವ್ಯಾಪ್ತಿಯ ನಿಗಮ ಮತ್ತು ಮಂಡಳಿಗಳ ಪದಾಧಿಕಾರಿಗಳಿಂದ ರಾಜೀನಾಮೆ ಪತ್ರಗಳನ್ನು ಪಡೆದುಕೊಳ್ಳುವ ಪ್ರಕ್ರಿಯೆ ಆರಂಭಿಸುವಂತೆ ತಿಳಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಅಂಚೆ ಇಲಾಖೆಯ 10 ಲಕ್ಷರೂ ವಿಮಾ ಪರಿಹಾರ ವಿತರಣೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್‌ನ ನಗರ ಶಾಖೆಯಲ್ಲಿ 9ನೇ ಸಂಸ್ಥಾಪನಾ ದಿನಾಚರಣೆ ಮಂಗಳವಾರ ನಡೆಯಿತು. ಜಿಲ್ಲಾಧಿಕಾರಿ ಶುಭಾಕಲ್ಯಾಣ್ ಕಾರ್ಯಕ್ರಮ ಉದ್ಘಾಟಿಸಿ, ಫಲಾನುಭವಿಗಳಿಗೆ ವಿಮಾ ಯೋಜನೆಯಡಿ ಪರಿಹಾರದ ಚೆಕ್ ವಿತರಿಸಿದರು.



ಅಪಘಾತದಲ್ಲಿ ಮೃತಪಟ್ಟ ತುಮಕೂರು ತಾಲ್ಲೂಕು ಓಬಳಾಪುರ ಗ್ರಾಮದ ಮಲ್ಲೇಶಯ್ಯ ಅವರ ಕುಟುಂಬದವರಿಗೆ ‘ನಿವಾ ಬೂಪಾ’ ಅಪಘಾತ ವಿಮಾ ಯೋಜನೆಯಡಿ 10 ಲಕ್ಷ ರೂಪಾಯಿಗಳ ಚೆಕ್‌ಅನ್ನು ಜಿಲ್ಲಾಧಿಕಾರಿಗಳು ವಿತರಿಸಿದರು.

ಮಲ್ಲೇಶಯ್ಯ ಅವರು ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ಮೂಲಕ ವಾರ್ಷಿಕ ಕೇವಲ 549 ರೂಪಾಯಿ ಪ್ರೀಮಿಯಂ ಪಾವತಿಸಿ ಗ್ರೂಪ್ ಆಕ್ಸಿಡೆಂಟ್ ಇನ್ಶೂರೆನ್ಸ್ ಯೋಜನೆಯಲ್ಲಿ ನೋಂದಾಯಿಸಿ ಕೊಂಡಿದ್ದರು. ದುರಾದೃಷ್ಟವಶಾತ್ ರಸ್ತೆ ಅಪಘಾತದಲ್ಲಿ ಅವರು ಮೃತಪಟ್ಟ ಹಿನ್ನೆಲೆಯಲ್ಲಿ, ಯೋಜನೆಯ ನಿಯಮಾನುಸಾರ ಅವರ ನಾಮಿನಿಯಾಗಿರುವ ಪತ್ನಿ ಪಿ.ಲಲಿತಮ್ಮ ಅವರಿಗೆ 10 ಲಕ್ಷ ರೂಪಾಯಿ ವಿಮಾ ಕ್ಲೈಮ್ ಮಂಜೂರಾಯಿತು. ಈ ವಿಮಾಕ್ಲೈಮ್ ಚೆಕ್ ಅನ್ನು ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ತುಮಕೂರು ಶಾಖೆಯ ಹಿರಿಯ ವ್ಯವಸ್ಥಾಪಕ ಸಿ.ಎಚ್.ಚೈತನ್ಯ ಕುಮಾರ್‌ಅವರು ಫಲಾನುಭವಿಗೆ ಈ ದಿನ ಅಧಿಕೃತವಾಗಿ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಶುಭಾಕಲ್ಯಾಣ್, ಐಪಿಪಿಬಿಯು ಗ್ರಾಮೀಣ ಜನರ ಆರ್ಥಿಕ ಸೇರ್ಪಡೆ, ಅಂಚೆ ಇಲಾಖೆ ಡಿಜಿಟಲೀಕರಣ, ಮನೆ ಬಾಗಿಲಿಗೆ ಅಂಚೆ ಸೇವೆ ನೀಡುತ್ತಿರುವ ಕುರಿತು ಶ್ಲಾಘಿಸಿದರು. ತುಮಕೂರು ವಿಭಾಗದ ಸಹಾಯಕ ಅಂಚೆ ಅಧೀಕ್ಷಕರು, ಎಲ್ಲಾ ಅಂಚೆ ನಿರೀಕ್ಷಕರು, ಸಿಬ್ಬಂದಿ ಭಾಗವಹಿಸಿದ್ದರು.

ವಿಬಿ–ಜಿ ರಾಮ್ ಜಿ ಗ್ಯಾರಂಟಿ ಕಾರ್ಡ್ ಅಭಿಯಾನ ಸ್ವಾವಲಂಬಿ ಬದುಕಿಗೆ ಉದ್ಯೋಗ ಚೀಟಿ ಸಹಕಾರಿ



ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ವಿಬಿ–ಜಿ ರಾಮ್ ಜಿ ಯೋಜನೆಯಡಿ ಜಲ ಸಂರಕ್ಷಣೆ, ಜೀವನೋಪಾಯ, ಗ್ರಾಮೀಣ ಮೂಲ ಸೌಕರ್ಯ, ಬರ ನಿರ್ವಹಣೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಗ್ರಾಮೀಣ ಭಾಗದ ಜನತೆ ವಿಬಿ–ಜಿ ರಾಮ್ ಜಿ ಯೋಜನೆಯಡಿ ಕೃಷಿ ಹೊಂಡ, ಕೆರೆ ಕಟ್ಟೆಗಳ ಸಮಗ್ರ ಅಭಿವೃದ್ಧಿ, ರೇಷ್ಮೆ ಹಾಗೂ ತೋಟಗಾರಿಕಾ ಬೆಳೆಗಳನ್ನು ಕೈಗೊಳ್ಳುವ ಮೂಲಕ ಸ್ವಾವಲಂಬಿ ಬದುಕು ಸಾಗಿಸುವಂತೆ ಕೊರಟಗೆರೆ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ (ಗ್ರಾ.ಉ) ರಾದ ಎಂ.ಬಿ.ಗುರುಮೂರ್ತಿ ಗ್ರಾಮೀಣ ಜನತೆಗೆ ಕರೆ ನೀಡಿದರು.

ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನ ತೀತಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೊರವನಹಳ್ಳಿ ಗ್ರಾಮದಲ್ಲಿ ವಿಕಸಿತ ಭಾರತ–ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ ಜಾಬ್‌ಕಾರ್ಡ್ ಮೇಳದ ಅಂಗವಾಗಿ ಅರಿವು ಹಾಗೂ ಮನೆ ಮನೆ ಭೇಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿಬಿ–ಜಿರಾಮ್‌ಜಿಯೋಜನೆಯಡಿ ಗ್ರಾಮೀಣ ಭಾಗದಪ್ರತಿ ಅರ್ಹ ಕುಟುಂಬಕ್ಕೆ ಜಾಬ್ ಕಾರ್ಡ್ ನೀಡಲಾಗುವುದು. ಒಂದು ವೇಳೆ ಜಾಬ್ ಕಾರ್ಡ್ ಇಲ್ಲದವರು ಕೂಡಲೇ ಹತ್ತಿರದ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ, ಕುಟುಂಬದ ಎಲ್ಲ ಸದಸ್ಯರ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್ ಹಾಗೂ ಇತ್ತೀಚಿನ ಭಾವಚಿತ್ರವನ್ನು ನೀಡುವ ಮೂಲಕ ಉಚಿತವಾಗಿ ಉದ್ಯೋಗ ಚೀಟಿ ಪಡೆಯಬಹುದು. ಇದರಿಂದಾಗಿ ಪ್ರತೀ ಕುಟುಂಬಕ್ಕೆವರ್ಷಕ್ಕೆ 125 ದಿನಗಳ ಗ್ಯಾರಂಟಿ ಸಿಗಲಿದೆ. ಗ್ರಾಮೀಣ ಭಾಗದ ಜನತೆ ಸ್ಥಳೀಯವಾಗಿಯೇ ಕೂಲಿ ಕೆಲಸಕ್ಕೆ ಹೋಗುವ ಮೂಲಕ ಆದಾಯ ಗಳಿಸಬಹುದು. ಇದರಿಂದಾಗಿ ಗ್ರಾಮೀಣ ಜನರ ವಲಸೆ ತಡೆ ಗಟ್ಟಬಹುದು ಎಂದು ಗುರುಮೂರ್ತಿ ಅವರು ತಿಳಿಸಿದರು.

ತೀತಾ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಮಂಜುನಾಥ್ ರವರು ಮಾತನಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರ ಸೂಚನೆಯಂತೆ ತಮ್ಮ ಗ್ರಾಮ ಪಂಚಾಯಿತಿ ವತಿಯಿಂದ ಜಾಬ್ ಕಾರ್ಡ್ ಮೇಳ ಹಮ್ಮಿಕೊಳ್ಳಲಾಗಿದ್ದು, ಅರ್ಹ ಕುಟುಂಬಗಳಿಗೆ ಕೂಡಲೇ ಹೊಸ ಜಾಬ್ ಕಾರ್ಡ್ ಕೊಡಲಾಗುವುದು. ಗ್ರಾಮೀಣ ಭಾಗದ ಜನತೆ ಈಯೋಜನೆಯನ್ನು ಸದುಪಯೋಗಪಡಿಸಿ ಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಐಇಸಿ ಸಂಯೋಜಕರಾದ ಟಿ.ಕೆ.ವಿನುತ್, ತಾಂತ್ರಿಕ ಸಹಾಯಕರಾದ ವೀಣಾ, ಕರ ವಸೂಲಿಗಾರರಾದ ಲಕ್ಷ್ಮೀನರಸಯ್ಯ ಸೇರಿದಂತೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು ಇದೇ ವೇಳೆ ತೀತಾ ಗ್ರಾಮ ಪಂಚಾಯಿತಿ ವತಿಯಿಂದ ತೀತಾ ಗ್ರಾಮದಲ್ಲಿ ಮನೆ ಮನೆಗೆ ಭೇಟಿ ಅಭಿಯಾನ ಕೈಗೊಂಡು ವಿಬಿ–ಜಿ ರಾಮ್ ಜಿ ಯೋಜನೆಯ ಮಾಹಿತಿಯುಳ್ಳ ಕರಪತ್ರಗಳನ್ನು ಗ್ರಾಮೀಣ ಜನರಿಗೆ ಹಂಚಲಾಯಿತು.

ಸಣ್ ಸುದ್ದಿ



ತುಮಕೂರು ನಗರದ ಪಾಂಡುರಂಗನಗರ (ಎಮ್ಮೆಕೇರಿ) ದಲ್ಲಿರುವ ಶ್ರೀ ಕೋಟೆ ಗ್ರಾಮ ದೇವತೆ ಅಮ್ಮನವರ ತಿಂಗಳ ಜಾತ್ರಾಮಹೋತ್ಸವದಂದು ಹಿರೇಮಠಾಧ್ಯಕ್ಷರಾದ ಡಾ.ಶ್ರೀ ಶಿವಾನಂದಶಿವಾಚಾರ್ಯ ಸ್ವಾಮಿಗಳು ಆಗಮಿಸಿ ಅಮ್ಮನವರಿಗೆ ಪೂಜೆ ಸಲ್ಲಿಸಿ ಉತ್ಸವಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಶಾನುಭೋಗರಾದ ಹರಿದಾಸ್, ದೇವಾಲಯದ ಮುಖಂಡರಾದ ಜಗದೀಶ್, ಜೆ.ಸುರೇಶ್, ಕರಾಟೆ ಕೃಷ್ಣಮೂರ್ತಿ, ಕಿರಣ್, ವಾಸು, ಕಾರ್ತೀಕ್ ಹಾಗೂ ದೇವಾಲಯದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಇಂದು ವಿದ್ಯುತ್ ವ್ಯತ್ಯಯ

ತುಮಕೂರು : ಬೆಸ್ಕಾಂ ಗ್ರಾಮೀಣ ಉಪವಿಭಾಗ-2ರ ವ್ಯಾಪ್ತಿಯಲ್ಲಿ ಹೆಚ್.ಟಿ. ಮಾರ್ಗದಲ್ಲಿ ಲಿಂಕ್ ಲೈನ್ ಕಾಮಗಾರಿ ಕೈಗೊಂಡಿರುವುದರಿಂದ ಸೆಪ್ಟೆಂಬರ್ 2ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಹೆಬ್ಬೂರು, ಸಿರಿವರ, ಬಳ್ಳಗೆರೆ, ನಿಡುವಳಲು ಮತ್ತು ಕಣಕುಪ್ಪೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

ಶ್ರೀದೇವಿ ಆಸ್ಪತ್ರೆಯ ವತಿಯಿಂದ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಬಗ್ಗೆ ಜಾಗೃತಿ ಜಾಥಾ

ಪ್ರತಿಯೊಬ್ಬರೂ ನೇತ್ರದಾನ ಬಗ್ಗೆ ಜಾಗೃತಿ ಮೂಡಿಸಬೇಕು : ಅಶ್ವಿಜ



ತುಮಕೂರು: ಪ್ರತಿಯೊಬ್ಬರೂ ಸಾವಿನ ನಂತರ ತಮ್ಮ ಕಣ್ಣುಗಳನ್ನು ದಾನ ಮಾಡುವ ನಿರ್ಧಾರ ಕೈಗೊಳ್ಳಬೇಕು. ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಸಾಕಷ್ಟು ಪ್ರಗತಿ ಸಾಧಿಸಿದರೂ ವಿವಿಧ ಕಾರಣಗಳಿಂದ ಅಂಧತ್ವ ಉಂಟಾಗುತ್ತಿದ್ದು, ನೇತ್ರದಾನದ ಮೂಲಕ ಅವರಿಗೆ ದೃಷ್ಟಿ ನೀಡಬಹುದು. ಆದ್ದರಿಂದ ಪ್ರತಿಯೊಬ್ಬರೂ ನೇತ್ರದಾನದ ಸಂಕಲ್ಪ ಕೈಗೊಂಡು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಆದ್ದರಿಂದ "ನೇತ್ರದಾನ ಮಹಾದಾನ" ಎಂಬ ನುಡಿಗಟ್ಟಿನಂತೆ ಅವರಂತಹವರು ನೇತ್ರದಾನದ ಮೂಲಕ ನಮಗೆ ಮಾರ್ಗದರ್ಶನ ನೀಡಿದ್ದಾರೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಅಶ್ವಿಜ ಬಿ.ವಿ.ರವರು ತಿಳಿಸಿದರು.

ನಗರದ ಶಿರಾರಸ್ತೆಯ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ನೇತ್ರ ಚಿಕಿತ್ಸಾ ವಿಭಾಗದ ಹಾಗೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಂಧತ್ವ ನಿಯಂತ್ರಣ ವಿಭಾಗ ತುಮಕೂರು ನೇತ್ರ ತಜ್ಞರ ಸಂಘ ಇವರುಗಳ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 25 ರಿಂದ ಸೆ.8 ರವರೆಗೆ "41ನೇ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ"ಯ ಬಗ್ಗೆ ಜಾಗೃತಿಯ ಜಾಥಾವನ್ನು ಸೆ.01ರಂದು ಮಂಗಳವಾರ ಬೆಳಿಗ್ಗೆ 9 ಗಂಟೆಗೆ ಟೌನ್‌ಹಾಲ್ ವೃತ್ತದಿಂದ ಅಮಾನಿಕೆರೆಯವರೆಗೆ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಉದ್ಘಾಟಿಸಿದ್ದ ಶ್ರೀದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಎಂ.ಆರ್.ಹುಲಿನಾಯ್ಕರ್ ಮಾತನಾಡಿ, ಅನ್ನದಾನ, ವಿದ್ಯಾದಾನ ಸೇರಿದಂತೆ ವಿವಿಧ ದಾನಗಳಲ್ಲಿ ನೇತ್ರದಾನವೂ ಅತ್ಯಂತ ಶ್ರೇಷ್ಠವಾದ ದಾನವಾಗಿದೆ. ನೇತ್ರದಾನ ಮಾಡಿದ ಬಳಿಕವೂ ಮೃತದೇಹದ ಧಾರ್ಮಿಕ ವಿಧಿ-ವಿಧಾನಗಳನ್ನು ಎಂದಿನಂತೆ ನೆರವೇರಿಸಬಹುದಾಗಿದ್ದು, ನೇತ್ರದಾನದ ಬಗ್ಗೆ ಇರುವ ತಪ್ಪು ಕಲ್ಪನೆಗಳನ್ನು ನಿವಾರಿಸಿ ಪ್ರತಿಯೊಬ್ಬರೂ ಈ ನೇತ್ರದಾನ ಮಹತ್ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ನಿರ್ದೇಶಕ ಡಾ.ರಮಣ್ ಎಂ. ಹುಲಿನಾಯ್ಕರ್ ಮಾತನಾಡಿ, ಮರಣದ ನಂತರ ಸುಮಾರು ಆರು ಗಂಟೆಗಳೊಳಗೆ ನೇತ್ರದಾನ ಮಾಡಬಹುದಾಗಿದ್ದು, ಕಾರ್ನಿಯಾ ಅಂಧತ್ವದಿಂದ ಬಳಲುತ್ತಿರುವ ಸಂಖ್ಯೆ ನಿರಂತರವಾಗಿ ಏರುತ್ತಿದೆ. ನೇತ್ರದಾನದ ಕುರಿತು ಸಾರ್ವಜನಿಕರಲ್ಲಿ ಇರುವ ತಪ್ಪು ಕಲ್ಪನೆಗಳನ್ನು ದೂರ ಮಾಡುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಚಂದ್ರಶೇಖರ್ ಬಿ.ಎಂ. ಮಾತನಾಡಿ, ಮರಣದ ನಂತರ ನೇತ್ರದಾನ ಮಾಡುವುದರಿಂದ ದಾನಿಯ ದೇಹಕ್ಕೆ ಯಾವುದೇ ಹಾನಿಯಾಗುವುದಿಲ್ಲ. ನಮ್ಮ ದೇಶದಲ್ಲಿ ಕಣ್ಣಿನ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ವೈಜ್ಞಾನಿಕ ಅರಿವು ಮೂಡಿಸುವ ಮೂಲಕ ಹೆಚ್ಚಿನ ಜನರನ್ನು ನೇತ್ರದಾನಕ್ಕೆ ಪ್ರೇರೇಪಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ನುಡಿಗಳನ್ನಾಡಿದ ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಡಾ.ರವೀಂದ್ರನಾಯ್ಕ್ ಕೆ. ಮಾತನಾಡಿ, "ಸರ್ವೇಂದ್ರಿಯಾಣಾಂ ನಯನಂ ಪ್ರಧಾನಂ" ಎಂಬಂತೆ ಕಣ್ಣುಗಳಿಗೆ ವಿಶೇಷ ಮಹತ್ವವಿದ್ದು, ಪ್ರತಿಯೊಬ್ಬರೂ ದೃಷ್ಟಿಯ ಮಹತ್ವವನ್ನು ಅರಿತುಕೊಳ್ಳಬೇಕು. ದೇಶದಲ್ಲಿ ಸುಮಾರು 11 ಲಕ್ಷ ಮಂದಿ ಕಾರ್ನಿಯಾ ಅಂಧತ್ವದಿಂದ ಬಳಲುತ್ತಿದ್ದು, ನೇತ್ರದಾನದ ಮೂಲಕ ಅವರಿಗೆ ದೃಷ್ಟಿ ನೀಡಲು ಸಾಧ್ಯವಿದೆ. ಈ ಜಾಗೃತಿ ಜಾಥಾದ ಮೂಲಕ ನೇತ್ರದಾನದ ಸಂದೇಶವನ್ನು ಹೆಚ್ಚಿನ ಜನರಿಗೆ ತಲುಪಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ಅಸ್ಗರ್ ಬೇಗ್‌ರವರು ಮಾತನಾಡುತ್ತಾ ಕಣ್ಣುಗಳನ್ನು ದಾನ ಮಾಡಿದರೆ ಕಣ್ಣಿನ ದೋಷದಿಂದ ಬಳಲುತ್ತಿರುವ ಅನೇಕ ಜನರಿಗೆ ಹೊಸ ಬದುಕು ದೊರಕುತ್ತದೆ, ವರನಟ ಡಾ. ರಾಜ್‌ಕುಮಾರ್ ಹಾಗೂ ನಟ ಪುನೀತ್ ರಾಜ್‌ಕುಮಾರ್ ಅವರ ನೇತ್ರದಾನ ಎಲ್ಲರಿಗೂ ಪ್ರೇರಣೆಯಾಗಿದ್ದು, ಪ್ರತಿಯೊಬ್ಬರೂ ನೇತ್ರದಾನಕ್ಕೆ ಮುಂದಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ತುಮಕೂರು ನೇತ್ರತಜ್ಞರ ಸಂಘದ ಅಧ್ಯಕ್ಷ ಡಾ. ಸಿದ್ದಲಿಂಗಸ್ವಾಮಿರವರು ಮಾತನಾಡುತ್ತಾ ಕಣ್ಣುಗಳು ಅತ್ಯಂತ ಅಮೂಲ್ಯ ಅಂಗಗಳಾಗಿದ್ದು, ಕೈಗಾರಿಕಾ ಹಾಗೂ ಕೃಷಿ ಕ್ಷೇತ್ರಗಳಲ್ಲಿ ಕೆಲಸ ಮಾಡುವವರು ಕಣ್ಣಿನ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಕೆಲಸದ ವೇಳೆ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವ ಮೂಲಕ ಕಣ್ಣಿನ ಗಾಯ ಹಾಗೂ ಅಂಧತ್ವವನ್ನು ತಡೆಗಟ್ಟಬಹುದು ಎಂದರು.

ಇದೇ ಸಂದರ್ಭದಲ್ಲಿ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ನೇತ್ರತಜ್ಞ ಡಾ.ಕಲ್ಲೇಶ್ವರರವರು ಮಾತನಾಡಿ, ರಾಷ್ಟ್ರೀಯ ನೇತ್ರದಾನ ಪಾಕ್ಷಿಕದ ಪ್ರಮುಖ ಉದ್ದೇಶ ಸಾರ್ವಜನಿಕರಲ್ಲಿ ನೇತ್ರದಾನದ ಕುರಿತು ಅರಿವು ಮೂಡಿಸುವುದಾಗಿದೆ. ಕಾರ್ನಿಯಾ ಅಂಧತ್ವದಿಂದ ದೃಷ್ಟಿ ಕಳೆದುಕೊಂಡಿರುವ ಮಕ್ಕಳು ಸೇರಿದಂತೆ ಹಲವರಿಗೆ ನೇತ್ರದಾನದ ಮೂಲಕ ದೃಷ್ಟಿ ನೀಡಲು ಸಾಧ್ಯವಿದೆ. ಕಾರ್ನಿಯಾಗಳ ಕೊರತೆ ನೀಗಿಸಲು ಹೆಚ್ಚಿನ ಸಂಖ್ಯೆಯಲ್ಲಿ ಜನರು ನೇತ್ರದಾನಕ್ಕೆ ಮುಂದಾಗಬೇಕು ಎಂದು ಹೇಳಿದರು. ಜಾಥಾ ಕಾರ್ಯಕ್ರಮದಲ್ಲಿ ವೈದ್ಯ ವಿದ್ಯಾರ್ಥಿಗಳಿಂದ ಕಿರುನಾಟಕವನ್ನು ಏರ್ಪಡಿಸಲಾಗಿತ್ತು. ಇದೇ ಸಂದರ್ಭದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟಿ ಹಾಗೂ ನೇತ್ರತಜ್ಞರಾದ ಡಾ.ಲಾವಣ್ಯ, ತುಮಕೂರಿನ ಹಿರಿಯ ನೇತ್ರತಜ್ಞರಾದ ಡಾ.ಸುರೇಶ್, ಸ್ಥಾನೀಯ ವೈದ್ಯಾಧಿಕಾರಿಯಾದ ಡಾ.ಮಂಜುನಾಥ್, ಶ್ರೀದೇವಿ ವೈದ್ಯಕೀಯ ಪ್ರಾಂಶುಪಾಲರಾದ ಡಾ.ಹರೇಂದ್ರಕುಮಾರ್, ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆಯ ನಿರ್ದೇಶಕ ಡಾ.ನಾಗರಾಜ ಸೂರ್ಯದೇವರ, ಶ್ರೀದೇವಿ ಆಸ್ಪತ್ರೆಯ ಸಿ.ಎ.ಓ. ಡಾ.ಪ್ರದೀಪ್‌ಕುಮಾರ್‌ವೆಗಿ, ಶ್ರೀದೇವಿ ಕಾಲೇಜಿನ ವೈದ್ಯರು, ಆರೋಗ್ಯ ಇಲಾಖೆ ಅಧಿಕಾರಿಗಳು, ಶ್ರೀದೇವಿ ನರ್ಸಿಂಗ್ ಹಾಗೂ ವೈದ್ಯ ವಿದ್ಯಾರ್ಥಿಗಳು ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಸೇವೆಯೇ ನಮ್ಮ ಶಕ್ತಿ ಮಾನವೀಯತೆಯೇ ನಮ್ಮ ಗುರುತು



ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಇತ್ತೀಚಿನ ದಿನಗಳಲ್ಲಿ ರಕ್ತದಾನ ಎಂಬುದು ಒಂದು ಪವಿತ್ರವಾದ ಮಹಾದಾನವಾಗಿದೆ. ರಕ್ತದಾನ ಮಾಡುವುದು ಸಮಾಜಮುಖಿ ಕಾರ್ಯಗಳಲ್ಲಿ ಒಂದಾಗಿದೆ. ಶ್ರೇಷ್ಠ ದಾನಗಳಲ್ಲಿ ರಕ್ತದಾನವು ಬಹಳ ಉಪಯುಕ್ತವಾಗಿದೆ, ಯುವ ಸಮೂಹ ರಕ್ತದಾನ ಮಾಡುವ ಮೂಲಕ ಮತ್ತೊಬ್ಬರ ಜೀವಕ್ಕೆ ನೆರವಾಗಬೇಕು ಹಾಗೂ ರಕ್ತದಾನ ಮಹಾದಾನ, ಒಂದು ರಕ್ತ ಒಂದು ಅಮೂಲ್ಯ ಜೀವ ಉಳಿಯುವಿಕೆಗೆ ನೆರವಾಗಲಿದೆ. ನಾವು ಕೊಡುವ ರಕ್ತದಿಂದ ಒಬ್ಬ ವ್ಯಕ್ತಿಯ ಜೀವ ಉಳಿಯಬಹುದು. ರಕ್ತದಾನ ಮಾಡುವುದರಿಂದ ನಮ್ಮ ಆರೋಗ್ಯದ ಮೇಲೆ ಯಾವುದೇ ಕೆಟ್ಟ ಪರಿಣಾಮ ಬೀರುವುದಿಲ್ಲ. ಬಹಳಷ್ಟು ರೋಗಿಗಳು, ಆಸ್ಪತ್ರೆಯಲ್ಲಿ ರಕ್ತವಿಲ್ಲದೆ ಪ್ರಾಣ ಬಿಡುವುದನ್ನು ನಾವು ಕಂಡಿದ್ದೇವೆ ಹಾಗೂ ಕೇಳಿದ್ದೇವೆ. ರಕ್ತದಾನ ಶಿಬಿರದಿಂದ ಈ ರೀತಿಯ ತೊಂದರೆಗಳು ಆಗುವುದಿಲ್ಲ ಈ ಕಾರಣ ರಕ್ತದಾನವನ್ನು ಮಾಡಲು ಅರ್ಹರಿರುವೆಲ್ಲರೂ ಸಹ ರಕ್ತದಾನವನ್ನು ಮಾಡಬೇಕು ರಕ್ತದಾನದ ಪ್ರಾಮುಖ್ಯತೆ ಮತ್ತು ಅದರ ಮೌಲ್ಯಗಳ ಬಗ್ಗೆ ಸ್ವವಿಸ್ತಾರವಾಗಿ ಜೇಸಿ ತುಮಕೂರು ಮೆಟ್ರೋ ಅಧ್ಯಕ್ಷರಾದ ಜೆಸಿ ಮಮತಾ ರಾಜ್ ಎಚ್.ಎ.ರವರು ತಿಳಿಸಿದರು.

ನಗರದ ಗಾಂಧಿನಗರದ ಬೆಳ್ಳಿ ಬ್ಲಡ್ ಕೇಂದ್ರದಲ್ಲಿ ಜೇಸಿ ತುಮಕೂರು ಮೆಟ್ರೋ ವತಿಯಿಂದ ಸಮಾಜ ಸೇವೆಯ ಮಹತ್ವದ ಹೆಜ್ಜೆಯಾಗಿ ರಕ್ತದಾನ ಶಿಬಿರವನ್ನು ಆ.31 ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಜೇಸಿ ತುಮಕೂರು ಮೆಟ್ರೋ ಪೂರ್ವಾಧ್ಯಕ್ಷರಾದ ಜೆಸಿ ಬೆಳ್ಳಿ ಲೋಕೇಶ್‌ರವರು ಮಾತನಾಡುತ್ತಾ ರಕ್ತದಾನವು ಅತ್ಯಂತ ಮಹತ್ವದ ಮಾನವೀಯ ಸೇವೆಯಾಗಿದೆ. ನಾವು ನೀಡುವ ಒಂದು ಯೂನಿಟ್ ರಕ್ತವು ಅಗತ್ಯವಿರುವ ವ್ಯಕ್ತಿಯ ಜೀವ ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಸಮಾಜದ ಅಭಿವೃದ್ಧಿ ಹಾಗೂ ಮಾನವೀಯ ಸೇವೆಗಾಗಿ ಕಾರ್ಯನಿರ್ವಹಿಸುತ್ತಿರುವ ಸಂಘ-ಸಂಸ್ಥೆಗಳು ಇಂತಹ ಸಮಾಜಮುಖಿ ಕಾರ್ಯಕ್ರಮಗಳನ್ನು ಇನ್ನಷ್ಟು ಆಯೋಜಿಸಬೇಕು. ಸಾರ್ವಜನಿಕರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂಪ್ರೇರಿತರಾಗಿ ಮುಂದೆ ಬಂದು ರಕ್ತದಾನ ಮಾಡುವ ಮೂಲಕ ಸಮಾಜ ಸೇವೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಜೆಕಾಮ್ ವಲಯದ ಅಧ್ಯಕ್ಷರಾದ ಜೆಸಿ ಶ್ರೀನಿವಾಸಮೂರ್ತಿರವರು ಮಾತನಾಡುತ್ತಾ ರಕ್ತದಾನಕ್ಕಿಂತ ಮಿಗಿಲಾದ ದಾನವಿಲ್ಲ, ಮಾನವೀಯತೆಯೇ ಮತ್ತೊಂದು ಜೀವ ಉಳಿಸುವುದು. ಈ ಮುಂಚೆ ಅಪಘಾತ, ಶಸ್ತ್ರಚಿಕಿತ್ಸೆ, ಹೆರಿಗೆ ಇನ್ನಿತರೆ ಅನೇಕ ತುರ್ತು ಸಂದರ್ಭಗಳಲ್ಲಿ ರಕ್ತದಾನ ಅಲಭ್ಯತೆ ಇಂದ ಸಾಕಷ್ಟು ಮಂದಿ ಮೃತಪಡುತ್ತಿದ್ದರು, ಇತ್ತೀಚಿನ ದಿನಗಳಲ್ಲಿ ರಕ್ತ ಲಭ್ಯವಾಗುವುದರಿಂದ ಸಾಯುವವರ ಸಂಖ್ಯೆ ಕಡಿಮೆಯಾಗಿದೆ. ರಕ್ತದಾನ ಮಾಡುವ ಮೂಲಕ ನೀವು ಆರೋಗ್ಯ ಕಾಪಾಡಿಕೊಳ್ಳಿ ಇತರರಿಗೆ ಜೀವದಾನ ಮಾಡಿ ಎಂದು ತಿಳಿಸಿದರು.

ತಿಪಟೂರು ತಾಲೂಕನ್ನು ಎರಡನೇ ಹಂತದಲ್ಲಿ ಬರಪೀಡಿತ ಎಂದು ಘೋಷಣೆ

ಸೂರ್ಯಪ್ರಗತಿನ್ಯೂಸ್.ಕಾಂ



ತಿಪಟೂರು: ತಾಲೂಕನ್ನು ಎರಡನೇ ಹಂತದ ಪಟ್ಟಿಯಲ್ಲಿ ಬರಪೀಡಿತ ಪ್ರದೇಶವೆಂದು ಘೋಷಿಸಲಾಗುವುದು. ಹಾಗೂ ತಿಪಟೂರು ನಗರಕ್ಕೆ ಕುಡಿಯುವ ನೀರನ್ನು ಪೂರೈಸುತ್ತಿರುವ ತಾಲೂಕಿನ ಈಚನೂರು ಕೆರೆಗೆ ಯಾವುದೇ ಕಲುಷಿತ ನೀರು ಸೇರ್ಪಡೆಯಾಗುತ್ತಿಲ್ಲ ಸೆಪ್ಟಂಬರ್ 5 ರಂದು ಪ್ರಜಾಸೇವಾ ಅಭಿಯಾನಕ್ಕೆ ಚಾಲನೆ ನೀಡಲಾಗುವುದು ಎಂದು ಶಾಸಕ ಕೆ. ಷಡಕ್ಷರಿ ತಿಳಿಸಿದರು.

ನಗರದ ನಗರಸಭೆಯ ಶಾಸಕರ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲನ್ನು ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಡ್ರಾಟ್ ಮ್ಯಾನುಯಲ್-2026 ಪ್ರಕಾರ ಬರಪೀಡಿತ ತಾಲೂಕು ಎಂದು ಘೋಷಿಸಲು ಹಲವು ಟ್ರಿಗರ್ ಪಾಯಿಂಟ್ ಗಳು ಅವಶ್ಯಕ. ಮೂರು ಅಥವಾ ಅದಕ್ಕಿಂತ ಹೆಚ್ಚಿನ ವಾರ ಮಳೆ ಆಗದಿರುವುದು, ಬಿತ್ತನೆ ಪ್ರಮಾಣ, ಬೆಳೆಗಳ ಸ್ಥಿತಿಗತಿ, ಉಪಗ್ರಹ ಆಧಾರಿತ ಮಣ್ಣಿನ ತೇವಾಂಶ, ಅಂತರ್ಜಲದ ಪ್ರಮಾಣ, ಕೆರೆಕಟ್ಟೆಗಳ ನೀರಿನ ಪ್ರಮಾಣವನ್ನು ಪರಿಗಣಿಸಲಾಗುತ್ತದೆ. ಈ ಕಾರಣದಿಂದ ಮೊದಲ ಪಟ್ಟಿಯಲ್ಲಿ ಪರಿಗಣಿಸಿಲ್ಲ. ಟ್ರಿಗರ್-1 ಮತ್ತು ಟ್ರಿಗರ್-2 ಆಧರಿಸಿ, ಗ್ರೌಂಡ್ ಟ್ರೂಥಿಂಗ್ ಮಾಡಿ ಸದ್ಯದಲ್ಲೇ ಬರಪೀಡಿತ ಎಂದು ಘೋಷಿಸಲಾಗುವುದು ಎಂದರು.

ನಗರಕ್ಕೆ ಕುಡಿಯುವ ನೀರು ಪೂರೈಸುವ ಈಚನೂರು ಕೆರೆಯ ಕಲುಷಿತ ನೀರನ್ನು ಈ ಬಾರಿ ಸಂಪೂರ್ಣವಾಗಿ ಖಾಲಿ ಮಾಡಲಾಗಿದೆ. ಈ ಬಾರಿ ಹೊಸದಾಗಿ ಹೇಮಾವತಿ ನೀರನ್ನು ಕೆರೆಗೆ ತುಂಬಿಸಿ ನಗರಕ್ಕೆ ಪಂಪ್ ಮಾಡಿ ಸರಬರಾಜು ಮಾಡಲಾಗುತ್ತಿದೆ. ನಗರಸಭೆ ಪೌರಾಯುಕ್ತರು ಸಂಬಂಧಪಟ್ಟ ಇಲಾಖೆಯಲ್ಲಿ ನೀರಿನ ಪರೀಕ್ಷೆ ಮಾಡಿ, ಆರೋಗ್ಯದ ಮೇಲೆ ಯಾವುದೇ ದುಷ್ಪರಿಣಾಮ ಬೀರುವುದಿಲ್ಲ ಎಂದು ಪ್ರಮಾಣ ಪತ್ರ ನೀಡಿದ ನಂತರವೇ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಯಾವುದೇ ಕಲುಷಿತ ನೀರು ಸೇರ್ಪಡೆಯಾಗುತ್ತಿಲ್ಲ .ಹಾಗೂ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಜಾಸೇವಾ ಅಭಿಯಾನವು ಸೆ. 5 ರಂದು ಹೊನ್ನವಳ್ಳಿ ಹೋಬಳಿ ಮಟ್ಟದಲ್ಲಿ ಚಾಲನೆ ನೀಡಲಾಗುವುದು. ನಾಗರಿಕರ ಸಮಸ್ಯೆಗಳ ಅಹವಾಲುಗಳನ್ನು ದೂರಿನ ಫಾರಂನಲ್ಲಿ ಪಡೆದು ಪರಿಹಾರ ಒದಗಿಸಲಾಗುವುದು. ಮೊದಲು ಹೋಬಳಿ ಮಟ್ಟ, ನಂತರ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಭಿಯಾನ ಹಮ್ಮಿಕೊಳ್ಳಲಾಗುವುದು ಹಾಗೂ ಇತ್ತೀಚಿಗೆ ನಡೆದ

ಖಖಖ ಪ್ರಕ್ರಿಯೆ ಪೂರ್ಣಗೊಂಡಿದ್ದು ತಾಲೂಕಿನಲ್ಲಿ ಸುಮಾರು 9,000 ಮತಗಳು ಡಿಲೀಟ್ ಆಗಲಿವೆ. ಈ ವಿಚಾರವಾಗಿ ರಾಜಕೀಯ ಪಕ್ಷದವರ ಸಭೆ ಕರೆದು ಒಪ್ಪಿಗೆ ಪಡೆಯಲಾಗಿದೆ. ಜಾನುವಾರುಗಳಿಗೆ ತಾಲೂಕಿನಲ್ಲಿ 4 ಕಡೆ ಮೇವು ಬ್ಯಾಂಕ್ ತೆರೆಯಲು ಕ್ರಮ ಕೈಗೊಳ್ಳಲಾಗಿದೆ . ಇಲಾಖೆಗೆ 25 ಕೋಟಿ ಹಣ ಬಿಡುಗಡೆಯಾಗಿದೆ. ತಾಲೂಕಿನಲ್ಲಿ ಹಸುಗಳಿಗೆ ಕುರಿಗಳಿಗೆ ಮೇಕೆಗಳಿಗೆ ಮೇವಿನ ತೊಂದರೆಯಾಗದಂತೆ ಕ್ರಮ ವಹಿಸಲಾಗುವುದು ಎಂದರು. ತಹಶೀಲ್ದಾರ್ ಮೋಹನ್‌ಕುಮಾರ್ ಮಾತನಾಡಿ, ವಿಶೇಷವಾಗಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಮತದಾನದ ಹಕ್ಕಿನಿಂದ ವಂಚಿತರಾದವರು ಅಗತ್ಯ ದಾಖಲೆಗಳೊಂದಿಗೆ ಹಾಜರಾಗಿ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಸಬಹುದು. ವಿಧವಾ ವೇತನ, ಅಂಗವಿಕಲ ಮಾಸಾಶನ, ಸಂಧ್ಯಾ ಸುರಕ್ಷಾ ಯೋಜನೆ, ಖಾತೆ, ಪಹಣಿ, ವಿವಿಧ ಪಿಂಚಣಿ ಸೇರಿದಂತೆ ಹಲವು ಸರ್ಕಾರಿ

ಸೌಲಭ್ಯಗಳಿಗೆ ಅರ್ಹರು ಒಂದೇ ಸ್ಥಳದಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿದೆ. ನಂತರ ಸಂಬಂಧಿಸಿದ ಅಧಿಕಾರಿಗಳು ಅರ್ಜಿಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಿದ್ದಾರೆ ಎಂದರು

ಪತ್ರಿಕಾಗೋಷ್ಠಿಯಲ್ಲಿ , ತಾ.ಪಂ ಇಓ ಸುದರ್ಶನ್, ಪೌರಾಯುಕ್ತ ವಿಶ್ವೇಶ್ವರ ಬದರಗಡೆ, ಕೃಷಿ ಇಲಾಖೆಯ ಡಾ. ಪವನ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ನಾಗೇಂದ್ರ, ಲೋಕೋಪಯೋಗಿ ಇಲಾಖೆಯ ನಟರಾಜು, ಬೆಸ್ಕಾಂ ಮನೋಹರ್, ಪಶು ಇಲಾಖೆಯ ನಂದೀಶ್, ತಾರಾಮಣಿ, ಜಲಜಾಕ್ಷಮ್ಮ, ರವಿಕುಮಾರ್ ಹಾಜರಿದ್ದರು"

'ಪ್ರಜಾಸೇವೆ ಆಂದೋಲನ': ಸಾರ್ವಜನಿಕರ ಅರ್ಜಿ ಸ್ವೀಕಾರ

ಸೂರ್ಯಪ್ರಗತಿನ್ಯೂಸ್.ಕಾಂ



ಚಿಕ್ಕನಾಯಕನಹಳ್ಳಿ:ತಾಲೂಕಿನ ಸಾರ್ವಜನಿಕರ ಕುಂದು ಕೊರತೆಗಳನ್ನು ನೇರವಾಗಿ ಆಲಿಸಿ, ಮನೆಬಾಗಿಲಲ್ಲಿಯೇ ಸಕಾಲದಲ್ಲಿ ಪರಿಹಾರ ಕಲ್ಪಿಸುವ ಉದ್ದೇಶದಿಂದ ಕಂದಿಕೆರೆ ಹೋಬಳಿ ಕೇಂದ್ರದ ಗ್ರಾಮ ಪಂಚಾಯಿತಿ ಆವರಣದಲ್ಲಿ ಬರುವ ಸೆಪ್ಟೆಂಬರ್ 05, 2026ರ ಶನಿವಾರದಂದು 'ಪ್ರಜಾಸೇವೆ ಆಂದೋಲನ' ಸಭೆಯನ್ನು ಆಯೋಜಿಸಲಾಗಿದೆ ಎಂದು ತಾಲೂಕು ತಹಸೀಲ್ದಾರ್ ಮಮತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಸಕರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಬೃಹತ್ ಸಭೆಯಲ್ಲಿ ತಾಲೂಕು ಮಟ್ಟದ ಎಲ್ಲಾ ಇಲಾಖೆಯ ಮುಖ್ಯಸ್ಥರು ಮತ್ತು ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಲಿದ್ದಾರೆ. ಸಾರ್ವಜನಿಕರು ಸಲ್ಲಿಸುವ ಕುಂದುಕೊರತೆ ಅರ್ಜಿಗಳಿಗೆ ಸ್ಥಳದಲ್ಲೇ ಕ್ರಮ ಕೈಗೊಳ್ಳುವುದು ಹಾಗೂ ಸರ್ಕಾರದ ವಿವಿಧ ಜನಕಲ್ಯಾಣ ಯೋಜನೆಗಳ ಫಲಾನುಭವಿಗಳನ್ನು ನೇರವಾಗಿ ನೋಂದಾಯಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

ಯಾವ ಯಾವ ಕೆಲಸಗಳಿಗೆ ಅರ್ಜಿ ಸಲ್ಲಿಸಬಹುದು?

ಕಂದಾಯ ಇಲಾಖೆ: ಪಹಣಿ ತಿದ್ದುಪಡಿ, ಖಾತೆ ಬದಲಾವಣೆ, ಪೋಡಿ ಮತ್ತು ನಿವೇಶನ/ವಸತಿ ಹಂಚಿಕೆ ಅರ್ಜಿಗಳು. ಸಾಮಾಜಿಕ ಭದ್ರತಾ ಪಿಂಚಣಿ: ಸಂಧ್ಯಾ ಸುರಕ್ಷಾ, ವಿಧವಾ ವೇತನ, ಅಂಗವಿಕಲರ ಮಾಸಾಶನ.

ಗ್ಯಾರಂಟಿ ಯೋಜನೆಗಳು: ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ ಹಾಗೂ ಯುವನಿಧಿ ಯೋಜನೆಗಳ ಕುರಿತ ಸಮಸ್ಯೆಗಳು. ಇತರ ಇಲಾಖೆಗಳು: ಹೊಸ ಪಡಿತರ ಚೀಟಿ, ಕುಡಿಯುವ ನೀರು, ರಸ್ತೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ, ಉದ್ಯೋಗ ಖಾತರಿ ಮತ್ತು ಪೊಲೀಸ್ ಇಲಾಖೆಗೆ ಸಂಬಂಧಿಸಿದ ಮನವಿಗಳು.

ಸ್ಥಳದಲ್ಲೇ ಆನ್‌ಲೈನ್ ಸ್ವೀಕೃತಿ ಪತ್ರ:

ಸಭೆಗೆ ಆಗಮಿಸುವ ಸಾರ್ವಜನಿಕರಿಗಾಗಿ ಪ್ರತ್ಯೇಕ ಇಲಾಖಾವಾರು ಕೌಂಟರ್‌ಗಳನ್ನು ಸ್ಥಾಪಿಸಲಾಗುತ್ತಿದ್ದು, ಸಲ್ಲಿಸಿದ ಪ್ರತಿಯೊಂದು ಅರ್ಜಿಗೂ ಸ್ಥಳದಲ್ಲೇ ಖಕಉಖಖ ಪೋರ್ಟಲ್ ಮೂಲಕ 'ವಿಶಿಷ್ಟ ಸಂಖ್ಯೆ' ಹೊಂದಿರುವ ಆನ್‌ಲೈನ್ ಸ್ವೀಕೃತಿ ಪತ್ರವನ್ನು ನೀಡಲಾಗುತ್ತದೆ. ಅರ್ಜಿಗಳ ಪ್ರಗತಿಯನ್ನು ಸಾರ್ವಜನಿಕರು ಆನ್‌ಲೈನ್ ಮೂಲಕವೇ ಪರಿಶೀಲಿಸಬಹುದಾಗಿದೆ.

ಸಾರ್ವಜನಿಕರಿಗೆ ಕುಡಿಯುವ ನೀರು ಮತ್ತು ವೈದ್ಯಕೀಯ ಸೌಲಭ್ಯಗಳನ್ನೂ ಕಲ್ಪಿಸಲಾಗುತ್ತಿದ್ದು, ಕಂದಿಕೆರೆ ಹೋಬಳಿ ವ್ಯಾಪ್ತಿಯ ಸಾರ್ವಜನಿಕರು ತಮ್ಮ ಅಗತ್ಯ ದಾಖಲೆಗಳೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಸೌಲಭ್ಯದ ಸದ್ಬಳಕೆ ಮಾಡಿಕೊಳ್ಳಬೇಕಾಗಿ ತಹಸೀಲ್ದಾರ್ ಮಮತಾ ಅವರು ವಿನಂತಿಸಿದ್ದಾರೆ.

ಸಾರ್ವಜನಿಕರ ಅಹವಾಲುಗಳ ತ್ವರಿತ ಪರಿಹಾರಕ್ಕಾಗಿ ಪ್ರಜಾಸೇವೆ ಅಭಿಯಾನ :

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಸಾರ್ವಜನಿಕರು ತಮ್ಮ ಅಹವಾಲುಗಳಿಗೆ ತ್ವರಿತವಾಗಿ ಪರಿಹಾರ ಕಂಡುಕೊಳ್ಳಲು ಸರ್ಕಾರದ ನಿರ್ದೇಶನದನ್ವಯ ಜಿಲ್ಲಾದ್ಯಂತ ಸೆಪ್ಟೆಂಬರ್ 5ರಂದು ಪ್ರಜಾಸೇವೆ ಅಭಿಯಾನಕ್ಕೆ ಚಾಲನೆ ನೀಡಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುಬ್ಬಿ ತಾಲ್ಲೂಕು ಕಚೇರಿಯಲ್ಲಿ ಮಂಗಳವಾರ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದ ಅವರು, ಪ್ರಜಾಸೇವಾ ಅಭಿಯಾನವು ಸಾರ್ವಜನಿಕರ ಕುಂದು-ಕೊರತೆಗಳನ್ನು ನೇರವಾಗಿ ಆಲಿಸಿ, ಸ್ಥಳದಲ್ಲೇ ಅಥವಾ ನಿರ್ದಿಷ್ಟ ಅವಧಿಯಲ್ಲಿ ಪರಿಹಾರ ಒದಗಿಸುವ ಏಕೀಕೃತ ವ್ಯವಸ್ಥೆಯಾಗಿದೆ. ಈ ವ್ಯವಸ್ಥೆಯಡಿ ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರದಂದು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಆಯ್ದ ತಾಲ್ಲೂಕು ಕೇಂದ್ರದಲ್ಲಿ ಅಭಿಯಾನ ನಡೆಯಲಿದೆ. ಎರಡನೇ ಮತ್ತು ನಾಲ್ಕನೇ ಶನಿವಾರದಂದು ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ತಾಲ್ಲೂಕು/ಹೋಬಳಿ ಮಟ್ಟದಲ್ಲಿ ಅಭಿಯಾನವನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ಜಿಲ್ಲೆಯ ಗುಬ್ಬಿ ಪಟ್ಟಣದ ಡಾ: ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಪ್ರಜಾಸೇವಾ ಅಭಿಯಾನಕ್ಕೆ ಸೆಪ್ಟೆಂಬರ್ 5ರಂದು ಉಪ ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ಚಾಲನೆ ನೀಡಲಿದ್ದಾರೆ. ಅಭಿಯಾನವನ್ನು ಯಾವುದೇ ಲೋಪದೋಷವಿಲ್ಲದಂತೆ ಅಚ್ಚುಕಟ್ಟಾಗಿ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯತತ್ಪರರಾಗಬೇಕೆಂದು ನಿರ್ದೇಶನ ನೀಡಿದರು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಅಭಿಯಾನದ ಪ್ರಯೋಜನ ಪಡೆಯುವಂತೆ ವ್ಯಾಪಕವಾಗಿ ಪ್ರಚಾರ ನೀಡಬೇಕು. ಪ್ರಜಾಸೇವಾ ಅಭಿಯಾನ ಸಭೆಯಲ್ಲಿ ಸಾರ್ವಜನಿಕರು ಅಹವಾಲುಗಳನ್ನು ಸಲ್ಲಿಸಲು ಹೊಸ ಅಹವಾಲುಗಳ ಸರತಿ ಹಾಗೂ ಪರಿಹಾರವಾಗದ ಅಥವಾ ಅಸಮಾಧಾನಕರವಾಗಿ ಪರಿಹರಿಸಲಾದ ಅಹವಾಲುಗಳ ಸರತಿ ಎಂಬ ಎರಡು ಪ್ರತ್ಯೇಕ ಸರತಿಗಳನ್ನು ನಿರ್ವಹಿಸಬೇಕು ಎಂದು ಸೂಚಿಸಿದರು. ಅಹವಾಲುಗಳನ್ನು ಸಲ್ಲಿಸಲು ಬರುವ ಸಾರ್ವಜನಿಕರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಬೇಕು. ಗಲಭೆ-ಗದ್ದಲಗಳು ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ವ್ಯವಸ್ಥೆಗೆ ಕ್ರಮವಹಿಸಬೇಕು ಎಂದು ತಿಳಿಸಿದರಲ್ಲದೆ, ಸಾರ್ವಜನಿಕರ ಮಾಹಿತಿಗಾಗಿ ಅಭಿಯಾನ ಸ್ಥಳದಲ್ಲಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆ ಹಾಗೂ ಕಂದಾಯ ಇಲಾಖೆಯ ಸೌಲಭ್ಯಗಳ ಕುರಿತು ಮಳಿಗೆಗಳನ್ನು ಸ್ಥಾಪಿಸಬೇಕು ಎಂದು ಸೂಚಿಸಿದರು.

ಸಭೆಯ ಬಳಿಕ ಅಭಿಯಾನ ನಡೆಯಲಿರುವ ಡಾ: ಗುಬ್ಬಿ ವೀರಣ್ಣ ರಂಗಮಂದಿರಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಉಪ ವಿಭಾಗಾಧಿಕಾರಿ ನಹೀದಾ ಜಂ ಜಂ, ಭೂ ದಾಖಲೆಗಳ ಉಪನಿರ್ದೇಶಕ ಭಾವನ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಸಂಜೀವಪ್ಪ ಹಾಗೂ ಈಶ್ವರಪ್ಪ, ತಹಶೀಲ್ದಾರ್ ಆರತಿ ಬಿ., ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ರಂಗನಾಥ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

ಸಾಹಿತ್ಯದಲ್ಲಿ ಮನೋರೋಗಿಗಳ ವಿವರಣೆ



ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ: ಮನೋವೈಜ್ಞಾನಿಕ ಸಮಸ್ಯೆ ಸುತ್ತ ಕಥೆ, ಕಾದಂಬರಿ ಕಟ್ಟಿಕೊಡುವುದು ತ್ರಿವೇಣಿಯವರ ವೈಶಿಷ್ಟ್ಯ ಎಂದು ಸಾಹಿತಿ ಮ.ಲ.ನ.ಮೂರ್ತಿ ಅಭಿಪ್ರಾಯ ಪಟ್ಟರು. ಪಟ್ಟಣದ 'ಸಹೃದಯ ಬಳಗ' ಟಿವಿವಿ .ಪ.ಪೂ.ಕಾಲೇಜನಲ್ಲಿ ಏರ್ಪಡಿಸಿದ್ದ 'ತ್ರಿವೇಣಿ (ಭಾಗೀರಥಿ,/ಅನಸೂಯ)ರವರ ಜನ್ಮದಿನಾಚರಣೆ'ಯಲ್ಲಿ ಮಾತನಾಡಿ,ಅವರ ಸಾಹಿತ್ಯದಲ್ಲಿ ಮನೋರೋಗಿಗಳ ವಿವರಣೆ, ಅವುಗಳ ಕಾರಣ,ಸ್ವರೂಪ, ವರ್ತನೆ,ಸಮಾಜ ನಡೆದು ಕೊಳ್ಳುವ ರೀತಿ,ಅದರ

ಪರಿಣಾಮ ಅವರ ಸ್ಥಾನಮಾನ,ಅವರಿಗೆ ನೀಡಬೇಕಾದ ಚಿಕಿತ್ಸೆ,ಆರೈಕೆ ಬಗ್ಗೆ ಜನಸಾಮಾನ್ಯರ ಕಣ್ಣು ತೆರೆಸುವಂಥ ತಿಳಿವಳಿಕೆ ನೀಡುವ ಮಾನವೀಯ ದೃಷ್ಟಿಸಹಾನುಭೂತಿ. ಕಂಡುಬರುತ್ತದೆ. ಎಂದರು.ಇವರು ಬಿ.ಎಂ.ಶ್ರೀ. ಅವರ ತಮ್ಮನ ಮಗಳು,ಪತಿ ಪ್ರಾಧ್ಯಾಪಕ ಶಂಕರ್. ಅವರು ಪಟ್ಟಣದ ವಿವಿಧ ವರ್ಗದ ಕುಟುಂಬಗಳ ಬಗ್ಗೆ ಮನಮುಟ್ಟುವ ರೀತಿಯಲ್ಲಿ ಬರೆದು ವೈಚಾರಿಕ,ವೈಜ್ಞಾನಿಕ ಮನೋಧರ್ಮ ತಿಳಿಸಿದ್ದಾರೆ ಎಂದರು. ಷ ಇತಿಹಾಸ ಉಪನ್ಯಾಸಕ ಗೋಪಾಲ್ ಮಾತನಾಡಿ, ಅವರ ' ಶರಪಂಜರ' 'ಬೆಳ್ಳಿ ಮೋಡ' ತೆರೆ ಕಂಡು ಯಶಸ್ವಿಯಾಗಿವೆ ಎಂದರು. ಬಳಗದ ಕಾರ್ಯದರ್ಶಿ ಜಿ.ಎಸ್ ನಾಗಭೂಷಣ ಮಾತನಾಡಿ,ಕನ್ನಡ ಸಾಹಿತ್ಯಕ್ಕೆ ಮಹಿಳೆಯರ ಕೊಡುಗೆ ಅನನ್ಯ ಎಂದರು. ವೈಷ್ಣವಿ ಸ್ವಾಗತಿಸಿದರು ಭೂಮಿಕಾ,ಅನಿಸಿಕೆ ಪ್ರಾರ್ಥಿಸಿ,ಕಾವ್ಯ ನಿರೂಪಿಸಿ,

ಕನ್ನಡದ ನಾಟಕ ಜಗತ್ತಿಗೆ ದೊಡ್ಡ ಇತಿಹಾಸವಿದೆ ಜಿಲ್ಲಾ ನಾಟಕೋತ್ಸವಕ್ಕೆ

ಸೂರ್ಯಪ್ರಗತಿನ್ಯೂಸ್.ಕಾಂ



ಕನ್ನಡದ ನಾಟಕ ಜಗತ್ತಿಗೆ ದೊಡ್ಡ ಇತಿಹಾಸವಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ವ್ಯಾಖ್ಯಾನಿಸಿದರು.

ಅವರು ತುಮಕೂರಿನ ಕರ್ನಾಟಕ ನಾಟಕ ಅಕಾಡೆಮಿ, ಝೇನ್ ಟೀಮ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜಿಲ್ಲಾ ನಾಟಕೋತ್ಸವದ ಅಂಗವಾಗಿ ನಡೆದ ನಿರ್ದಿಗಂತ ತಂಡ ಪ್ರಸ್ತುತಪಡಿಸಿದ ಪ್ರಾಜೆಕ್ಟ್ ಪಂಚ ತಂತ್ರ ನಾಟಕ ಉದ್ಘಾಟಿಸಿ ಮಾತನಾಡಿದರು.

ಕಥೆ, ಕಥೆಗೊಂದು ಉಪಕಥೆ, ಉಪಕಥೆಗೊಂದು ವ್ಯಾಖ್ಯಾನ ಹೀಗೆ ಕಥಾ ಜಗತ್ತನ್ನು ಲೇಖಕರು ಹಿಗ್ಗಿಸುತ್ತಲೇ ಇರುತ್ತಾರೆ. ಅವೆಲ್ಲಾ ನಾಟಕಕ್ಕೆ ದ್ರವ್ಯವಾಗಿ ಬಳಕೆಯಾಗುತ್ತಿರುವ ಶ್ಲಾಘನೀಯ ಎಂದು ತಿಳಿಸಿದರು. ನಾಟಕಗಳ ಕಥಾ ವಸ್ತುಗಳು ಮುಂದಿನ ತಲೆಮಾರನ್ನು ಪ್ರಭಾವಿಸುವಂತಿರಬೇಕು. ನಟರ ಆಂಗಿಕ ಅಭಿನಯ, ಪರಿಕರ, ಧ್ವನಿ ಬೆಳಕು ಹೀಗೆ ಎಲ್ಲಾ ಆಯಾಮಗಳಲ್ಲೂ ವೃತ್ತಿಪರತೆ ಮೆರೆಯುವಂತಾಗಬೇಕು. ಅಂತಹ ಪ್ರಯತ್ನವನ್ನು ಕನ್ನಡ ರಂಗಭೂಮಿ ಮಾಡುತ್ತಲೇ ಇದೆ ಎಂದರು. ನಾಟಕಗಳು ಹೊಸತನದಿಂದ ಕೂಡಿದ್ದು ಪ್ರತಿ ಪ್ರದರ್ಶನವೂ ಒಂದೊಂದು ಅರ್ಥ ಮೂಡುವಂತೆ ಮಾಡುವ ಕೆಲಸವನ್ನು ನಿರ್ದೇಶಕರು ಮಾಡಬೇಕು. ಆಗ ನಾಟಕ ಸೇರಿದಂತೆ ಯಾವುದೇ ಕೃತಿ ತಲೆಮಾರುಗಳನ್ನು ಪ್ರಭಾವಿಸುತ್ತದೆ ಎಂದು ತಿಳಿಸಿದರು. ಜಾನಪದ ಕಲಾವಿದ ಕಂಟಲಗೆರೆ ಸಣ್ಣ ಹೊನ್ನಯ್ಯ ಮಾತನಾಡಿ ರಂಗಭೂಮಿ ಎಲ್ಲಾ ಪ್ರಾಕಾರಗಳನ್ನು ಒಳಗೊಂಡ ಒಂದು ಕ್ರಿಯೆ. ಪುರಾಣ ರಂಗಭೂಮಿ, ಇತಿಹಾಸ ಹಾಗೂ ಜಾನಪದ ರಂಗಭೂಮಿ ಹೀಗೆ ಬಹು ಆಯಾಮಗಳಲ್ಲಿ ಚಲಿಸುವ ಒಂದು ಮಾಧ್ಯಮ ಎಂದು ಬಣ್ಣಿಸಿದರು. ತುಮಕೂರು ಜಿಲ್ಲೆಯ ನಾಟಕ ಪರಂಪರೆಗೆ ದೊಡ್ಡ ಇತಿಹಾಸವಿದೆ. ಅದರಲ್ಲೂ ಪೌರಾಣಿಕ ರಂಗಭೂಮಿ ವಿಶೇಷ ಸ್ಥಾನ ಸಿಕ್ಕಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಶಿಲ್ಪಾ ಅವರು ಮಾತನಾಡಿ ತುಮಕೂರಿನಲ್ಲಿ ನಾಟಕ ಅಕಾಡೆಮಿ, ಝೇನ್ ಟೀಮ್ ವತಿಯಿಂದ ನಡೆಯುತ್ತಿರುವ ಈ ನಾಟಕ ಯಶಸ್ವಿಯಾಗಲಿ ಎಂದು ಆಶಿಸಿದರು.

ಪತ್ರಕರ್ತ ಎಸ್. ನಾಗಣ್ಣ ಮಾತನಾಡಿ ತುಮಕೂರಿನ ಗುಬ್ಬಿ ವೀರಣ್ಣ ಕಲಾಕ್ಷೇತ್ರವನ್ನು ಪುನರುಜ್ಜೀವನಗೊಳಿಸುವ ಪ್ರಕ್ರಿಯೆಗೆ ಚಾಲನೆ ಸಿಗಲಿದೆ. ಈಗಾಗಲೇ ಸರ್ಕಾರ ಅನುದಾನ ನೀಡಿದೆ. ಶೀಘ್ರದಲ್ಲಿ ಸುಸಜ್ಜಿತ ರಂಗಮಂದಿರ ನಿರ್ಮಾಣವಾಗುವ ಕೆಲಸ ಆರಂಭವಾಗಲಿದೆ ಎಂದು ತಿಳಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು ಮಿರ್ಜಿ ಮಾತನಾಡಿ ತುಮಕೂರಿನಲ್ಲಿ ರಂಗ ಚಟುವಟಿಕೆಗಳು ಬಹಳ ಯಶಸ್ವಿಯಾಗಿ ನಡೆಯುತ್ತಿದೆ. ಕರ್ನಾಟಕ ನಾಟಕ ಅಕಾಡೆಮಿ, ಝೇನ್ ಟೀಮ್ ವತಿಯಿಂದ ನಡೆಯುತ್ತಿರುವ ಜಿಲ್ಲಾ ನಾಟಕೋತ್ಸವದಲ್ಲಿ ಹೊಸ ಅಲೆಯ ನಾಟಕ ಪ್ರದರ್ಶನಗೊಳ್ಳುತ್ತಿರುವುದು ಶ್ಲಾಘನೀಯ ಎಂದು ತಿಳಿಸಿದರು. ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ಹಾಗೂ ಝೇನ್ ಟೀಮ್ ಮುಖ್ಯಸ್ಥ ಉಗಮ ಶ್ರೀನಿವಾಸ್ ಮಾತನಾಡಿ ಕರ್ನಾಟಕ ನಾಟಕ ಅಕಾಡೆಮಿ ವತಿಯಿಂದ ಈಗಾಗಲೇ ತುಮಕೂರಿನಲ್ಲಿ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕಳೆದ ವರ್ಷ ಕೂಡ ಜಿಲ್ಲಾ ನಾಟಕೋತ್ಸವ ನಡೆಸಲಾಗಿತ್ತು. ಅಲ್ಲದೇ ಗುಬ್ಬಿಯಲ್ಲಿ ದಿವಂಗತ ನರಸಿಂಹರಾಜು ನೆನಪಿನ ನಾಟಕೋತ್ಸವವನ್ನು ಆಯೋಜಿಸಲಾಗಿತ್ತು. ಹಾಗೆಯೇ ತುಮಕೂರಿನ ಸಿದ್ಧಗಂಗಾ ಮಠದಲ್ಲಿ ಶರಣರ ನಾಟಕಗಳನ್ನು ಪ್ರದರ್ಶಿಸಲಾಗಿತ್ತು. ವಿಶ್ವ ರಂಗಭೂಮಿ ದಿನ ಸೇರಿದಂತೆ ಈ ವರ್ಷವೂ ಜಿಲ್ಲಾ ನಾಟಕೋತ್ಸವವನ್ನು ಯಶಸ್ವಿಯಾಗಿ ನಡೆಸಲಾಗಿದೆ ಎಂದರು. ಶೀಘ್ರದಲ್ಲಿ ಪೌರಾಣಿಕ ನಾಟಕೋತ್ಸವನ್ನು ಆಯೋಜಿಸುವ ಕೆಲಸವನ್ನು ಅಕಾಡೆಮಿ ವತಿಯಿಂದ ಮಾಡಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದ ಬಳಿಕ ಪ್ರಕಾಶ್ ರಾಜ್ ಅವರ ನಿರ್ದಿಗಂತ ತಂಡ ಪ್ರಾಜೆಕ್ಟ್ ಪಂಚತಂತ್ರ ಎಂಬ ನಾಟಕವನ್ನು ಪ್ರದರ್ಶಿಸಿದರು.

ಸಚಿವ ಎಚ್.ಸಿ.ಬಾಲಕೃಷ್ಣ ಅವರಿಗೆ ಕುಮಾರಸ್ವಾಮಿ ಅವರ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ಜೆಡಿಎಸ್ ಶಾಸಕರಾಗಿ ಗೆದ್ದು 10 ಕೋಟಿ ರೂ.ಗಳಿಗೆ ಕಾಂಗ್ರೆಸ್ ಪಕ್ಷಕ್ಕೆ ಮಾರಿಕೊಂಡ ಸಚಿವ ಎಚ್.ಸಿ.ಬಾಲಕೃಷ್ಣ ಅವರಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ದೇವೇಗೌಡರ ಕುಟುಂಬದ ಬಗ್ಗೆ ಹಗುರವಾಗಿ ಮಾತನಾಡುವುದನ್ನು ತಕ್ಷಣ ನಿಲ್ಲಿಸದಿದ್ದರೆ ನಮ್ಮ ಪಕ್ಷದ ಕಾರ್ಯಕರ್ತರು ಪಾಠ ಕಲಿಸುತ್ತಾರೆ ಎಂದು ಮಾಜಿ ಶಾಸಕ ಎ.ಮಂಜುನಾಥ್ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ಈ ಸಂಬಂಧ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕುಮಾರಸ್ವಾಮಿ ಅವರನ್ನು ಬೈಯ್ದರೆ ನಾನು ದೊಡ್ಡನಾಯಕನಾಗಬಹುದು ಎಂಬ ಭ್ರಮೆಯಲ್ಲಿ ಬಾಲಕೃಷ್ಣ ಈ ರೀತಿ ಮಾತನಾಡುತ್ತಿದ್ದಾರೆ. ಕೂಡಲೇ ಇದನ್ನು ನಿಲ್ಲಿಸದೇ ಹೋದರೆ ಚಿಕ್ಕಬಳ್ಳಾಪುರದಲ್ಲಿ ಪ್ರದೀಪ್ ಈಶ್ವರ್‌ಗಾದ ಗತಿಯೇ ನಿಮಗೂ ಆಗುತ್ತದೆ. ನಮ್ಮದು ಕಾರ್ಯಕರ್ತರ ಪಕ್ಷ, ನೀವು ಬೇಕಾಬಿಟ್ಟಿ ಮಾತನಾಡಿದರೆ, ನಮ್ಮ ಪಕ್ಷದ ಕಾರ್ಯಕರ್ತರು ಬೀದಿಯಲ್ಲಿ ನಿಮ್ಮನ್ನು ಹಿಡಿದು ನಿಲ್ಲಿಸಿ ಮಾತನಾಡುತ್ತಾರೆ ಎಂದು ಎಚ್ಚರಿಸಿದರು.

ಹೆಚ್‌ಡಿಕೆ ದೂಷಣೆಗೆ ಕಿರೀಟ ಸಿಗಲ್ಲ : ನಿಮ್ಮ ಪೊಳ್ಳು ಹೇಳಿಕೆಗೆ ಯಾರೂ ಸೊಪ್ಪುಹಾಕಲ್ಲ. ಕುಮಾರಸ್ವಾಮಿ ಕುಟುಂಬ ದೂಷಿಸಿದರೆ ನಿನಗೆ ಕಿರೀಟ ಸಿಗಲ್ಲ. ಕುಮಾರಸ್ವಾಮಿ ಮನೆಯಲ್ಲಿ ಉಂಡು, ತಿಂದು ಅಧಿಕಾರ ಅನುಭವಿಸಿದ್ದೀರಿ. ಈಗ ಅವರ ಕುಟುಂಬದ ಬಗ್ಗೆ



ಮಾತನಾಡುತ್ತಿದ್ದೀರಿ. 1994ರಲ್ಲಿ ನಿಮ್ಮ ತಂದೆ ಸತ್ತರು ಎಂಬ ಅನುಕಂಪದಿಂದ ನಿಮ್ಮನ್ನು ಮಾಗಡಿಯ ಜನತೆ ಬಿಜೆಪಿಯಿಂದ ಗೆಲ್ಲಿಸಿದರು. ಬಳಿಕ ಮೂರು ಬಾರಿ ನೀವು ಜೆಡಿಎಸ್‌ನಿಂದ ಗೆದಿದ್ದೀರಾ, ನಿಮ್ಮನ್ನು ರಾಜಕೀಯವಾಗಿ ಬೆಳೆಸಿದ ಬಿಜೆಪಿ ಮತ್ತು ಜೆಡಿಎಸ್ ಈ ಎರಡೂ ಪಕ್ಷಗಳ ಬೆನ್ನಿಗೆ ಚೂರಿ ಹಾಕಿದ್ದಾರಾ ಎಂದು ವಾಗ್ದಾಳಿ ನಡೆಸಿದರು.

ಸೇಬಿನ ಹಾರ ಹಾಕಿಸಿಕೊಂಡು ಬರ ಅಧ್ಯಯನ: ಜಿಲ್ಲಾ ಉಸ್ತುವಾರಿ ಸಚಿವರಾಗಿ ಬರ ಅಧ್ಯಯನ ಮಾಡೋಕೆ ಜಿಲ್ಲೆಗೆ ಬಂದ ನೀವು, ಬೃಹತ್ ಸೇಬಿನ ಹಾರಹಾಕಿಸಿಕೊಂಡು ಸಂಭ್ರಮಾಚರಣೆ ಮಾಡಿದ್ದೀರಾ, ಇದು ಬರ ಅಧ್ಯಯನ ಮಾಡುವ ರೀತಿಯ, ಸಂಕಷ್ಟದಲ್ಲಿರುವ ಜನತೆಯ ನೋವಿಗೆ ಸ್ಪಂದಿಸದೆ ಹಾರ ಹಾಕಿಸಿಕೊಂಡು ಮೆರೆಯು ನಿಮ್ಮ ನಡವಳಿಗೆ ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು.

ಚಾಮುಂಡೇಶ್ವರಿ ಮುಂದೆ ಪ್ರಮಾಣ ಮಾಡಿ: ಮಾಗಡಿಯಲ್ಲಿ ನೀನು 600 ಕೋಟಿ ರೂ. ಹಗರಣ ಮಾಡಿದ್ದೀಯ, ಈ ಹಣವನ್ನು ನೀನು ಮತ್ತು ನಿನ್ನ ಕುಟುಂಬ ತಿಂದಿದೆ. ಈ ಪ್ರಕರಣದಲ್ಲಿ ಯಾರ್‍ಯಾರು ಜೈಲಿಗೆ ಹೋಗಿದ್ದಾರೆ, ಅಧಿಕಾರಿಗಳ ಕಥೆ ಏನಾಯ್ತು, ನೀನು ಹಣ ತಿಂದು ಗುತ್ತಿಗೆದಾರನ್ನು ಬಲಿಕೊಟ್ಟಿಲ್ಲವೇ, ಈ ಬಗ್ಗೆ ಬಹಿರಂಗ ಚರ್ಚೆಗೆ ನಾನು ಸಿದ್ದವಿದ್ದೇನೆ ಧೈರ್ಯವಿದ್ದರೆ ಬಾ, ಇದು ಸುಳ್ಳು ಎನ್ನುವುದಾದರೆ ಚಾಮುಂಡೇಶ್ವರಿ ದೇವ ಸ್ಥಾನಕ್ಕೆ ಬಂದು ಪ್ರಮಾಣ ಮಾಡು ಎಂದು ಬಾಲಕೃಷ್ಣ ವಿರುದ್ಧ ಏಕವಚನದಲ್ಲಿ ವಾಗ್ದಾಳಿ ನಡೆಸಿದರು.

ನೆಲಮಂಗಲದ ವ್ಯಕ್ತಿಗೆ ಗನ್ ತೋರಿಸಲಿಲ್ಲವಾ? ನೆಲಮಂಗಲದಲ್ಲಿ ಮಾಗಡಿ ರಂಗಯ್ಯ ಎಂಬ ದಲಿತ ವ್ಯಕ್ತಿಯ ಭೂಮಿ ಲೂಟಿ ಹೊಡೆದಿದ್ದೀಯಾ. ನೆಲಮಂಗಲದಲ್ಲಿ ವ್ಯಕ್ತಿ ಮೇಲೆ ಗನ್ ಇಟ್ಟು ಬೆದರಿಸಿದ್ದೀರಿ. ಒಬ್ಬ ರೌಡಿಶೀಟರ್ ಇಟ್ಟುಕೊಂಡು ಬೆದರಿಸಿಲ್ವಾ, ನಿಮ್ಮ ಪತ್ನಿ ಮೇಲೆ ಕೇಸ್ ದಾಖಲಾಗಿಲ್ವಾ, ಪರಮೇಶ್ವರ್ ಹೋಂ ಮಿನಿಸ್ಟರ್ ಆಗಿದ್ದಾಗ ಅವರ ಕಾಲು ಹಿಡಿದು ಕೇಸ್ ವಜಾ ಮಾಡಿಸಿದ್ದೀರಿ ಎಂದು ಗನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಸಿದರು.

ಪೋನ್ ಕದ್ದಾಲಿಕೆ ದಾಖಲೆ ನೀಡಿ: ಕೇಂದ್ರ ಸಚಿವ ಹೆಚ್. ಡಿ.ಕುಮಾರಸ್ವಾಮಿ ಅವರು ತಮ್ಮ ಪತ್ನಿಯ ಪೋನ್ ಕದ್ದಾಲಿಕೆ ಮಾಡಿದ್ದಾರೆ ಎಂಬ ಸಚಿವ ಬಾಲಕೃಷ್ಣ ಆರೋಪಕ್ಕೆ ತಿರುಗೇಟು ನೀಡಿದ ಮಾಜಿ ಶಾಸಕ ಎ.ಮಂಜುನಾಥ್, ಈ ಬಗ್ಗೆ ಕುಮಾರಸ್ವಾಮಿ ಸ್ಪಷ್ಟನೆ ನೀಡಿದ್ದಾರೆ. ಕುಮಾರಸ್ವಾಮಿ ಅವರು ಎಂದಿಗೂ ಇವರಂತೆ ಸಹಿಯನ್ನು ಮಾರಿಕೊಂಡಿಲ್ಲ. ಬಾಲಕೃಷ್ಣಗೆ ತಾಕತ್ತು ಇದ್ದರೆ ದಾಖಲೆ ಬಿಡುಗಡೆ ಮಾಡಲಿ ಎಂದು ಸವಾಲು ಹಾಕಿದರು.

ಉತ್ತರ ಕುಮಾರನಂತೆ ವರ್ತಿಸದಿರಿ : ಚಕ್ರಬಾವಿಯಲ್ಲಿ ಚರ್ಚೆಗೆ ಬಾರದೆ ಓಡಿಹೋದ ನೀವು 'ಉತ್ತರಕುಮಾರ'ನಂತೆ ವರ್ತಿಸುತ್ತಿದ್ದೀರಿ. ರಾಮನಗರದಲ್ಲಿ ವೇದಿಕೆ ಸಿದ್ಧಪಡಿಸಿ, ನಾನು ಬಹಿರಂಗ ಚರ್ಚೆಗೆ ಸಿದ್ಧನಿದ್ದೇನೆ ಎಂದು ಸವಾಲು ಹಾಕಿದ ಎ. ಮಂಜುನಾಥ್, ಕೂಡಲೇ ನಿಮ್ಮ ಧಾಟಿಯನ್ನು ಬದಲಾಯಿಸದಿದ್ದರೆ ಮುಂದಿನ ದಿನಗಳಲ್ಲಿ ತಕ್ಕ ತಿರುಗೇಟು ಎದುರಿಸಬೇಕಾಗುತ್ತದೆ ಎಂದು ಹರಿಹಾಯ್ದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು, ತಾಲೂಕು ಅಧ್ಯಕ್ಷ ಸಬ್ಬಕೆರೆ ಶಿವಲಿಂಗಪ್ಪ, ಹಾರೋಹಳ್ಳಿ ತಾಲ್ಲೂಕು ಅಧ್ಯಕ್ಷ ಕೊಳ್ಳಿಗಾನಹಳ್ಳಿ ರಾಮು, ನಗರಸಭೆ ಸದಸ್ಯ ಮಂಜುನಾಥ್, ಮುಖಂಡರಾದ ಬಿ. ಉಮೇಶ್, ಗೋವಿಂದಳ್ಳಿ ನಾಗರಾಜ್, ನರಸಿಂಹಮೂರ್ತಿ, ರಾಮಕೃಷ್ಣಯ್ಯ , ಶೋಭಾ, ರವಿ, ಜಿ.ಟಿ.ಕೃಷ್ಣೇಗೌಡ, ಗೋವಿಂದರಾಜು, ಸರಸ್ವತಿ, ಕೆಂಪರಾಜು, ಜಯಮ್ಮ, ಪೂರ್ಣಿಮಾ, ನಂದೀಶ್ ಗೌಡ, ಜಯಕುಮಾರ್, ನವೀನ್, ಜಯರಾಮ್, ಯೋಗೇಶ್, ನರೇಂದ್ರ, ಸುರೇಶ್, ಲಕ್ಷ್ಮಣ, ಕುಮಾರ್, ರಾಜಣ್ಣ, ಕೃಷ್ಣ ಮತ್ತಿತರರು ಇದ್ದರು.

2 ಅಪರಿಚಿತ ಶವ ಪತ್ತೆ : ಪ್ರತ್ಯೇಕ ಪ್ರಕರಣ ದಾಖಲು

ತುಮಕೂರು: ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 2 ಅಪರಿಚಿತ ಶವ ಪತ್ತೆಯಾಗಿರುವ ಬಗ್ಗೆ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

ಪ್ರಕರಣ–1: ನಗರದ ಬಾವಿಕಟ್ಟೆ ಪೆಟ್ರೋಲ್ ಬಂಕ್ ಹಿಂಭಾಗ ಶಿರಾ ಗೇಟ್ ರಸ್ತೆಯಿಂದ ಗಾರ್ಡನ್ ರಸ್ತೆಯ ಶನಿಮಹಾತ್ಮ ದೇವಸ್ಥಾನಕ್ಕೆ ಹೋಗುವ ರಸ್ತೆ ಪಕ್ಕದ ಕಲ್ಪತರು ಬಡಾವಣೆಯ 2ನೇ ಮುಖ್ಯರಸ್ತೆಯಲ್ಲಿ ಆಗಸ್ಟ್ 14ರಂದು ಸುಮಾರು 50 ವರ್ಷದ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದೆ.

ಮೃತನು 168 ಸೆಂ.ಮೀ. ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಕೋಲು ಮುಖ ಹೊಂದಿದ್ದು, ಮೃತನ ಮೈಮೇಲೆ ಕಾಫಿ ಬಣ್ಣದ ಟೀ–ಷರ್ಟ್ ಹಾಗೂ ನೀಲಿ ಬಣ್ಣದ ಪ್ಯಾಂಟ್ ಇರುತ್ತದೆ.

ಪ್ರಕರಣ–2: ನಗರದ ಅಶೋಕ ರಸ್ತೆ ಪ್ರಶಾಂತ ಥಿಯೇಟರ್ ಮುಂಭಾಗದ ರಸ್ತೆಯ ಮೇಲೆ ಆಗಸ್ಟ್ 24ರಂದು ಸುಮಾರು 35 ವರ್ಷದ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದೆ. ಮೃತನು ಸುಮಾರು 168 ಸೆಂ.ಮೀ. ಎತ್ತರವಿದ್ದು, ಬಲ ಕಣಕೈಯಲ್ಲಿ ಅಮ್ಮ ಎಂದು ಕನ್ನಡದಲ್ಲಿ ಅಚ್ಚೆ ಇರುತ್ತದೆ. ಮೃತನ ಮೈಮೇಲೆ ಬಿಳಿ ಬಣ್ಣದ ಗೆರೆಗಳುಳ್ಳ ಅರ್ಧ ತೋಳಿನ ಅಂಗಿ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಇರುತ್ತದೆ. ಮೃತರ ವಾರಸುದಾರರು ಯಾರಾದರೂ ಇದ್ದಲ್ಲಿ ಕೂಡಲೇ ದೂ.ವಾ.ಸಂ. 0816–2278388, ಮೊ.ಸಂ. 9480802945–30–00ಯನ್ನು ಸಂಪರ್ಕಿಸಬೇಕೆಂದು ಅವರು

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆ ಸಹಕಾರಿ : ಇಕ್ಬಾಲ್ ಹುಸೇನ್

ರಾಮನಗರ: ವಿದ್ಯಾರ್ಥಿಗಳ ದೈಹಿಕ ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆಗಳು ಸಹಕಾರಿಯಾಗಿವೆ. ಆರೋಗ್ಯಕರ ದೇಹದಲ್ಲಿ ಆರೋಗ್ಯಕರ ಮನಸ್ಸು ಇರುತ್ತದೆ. ಆರೋಗ್ಯಕರ ಮನಸ್ಸು ಹೊಂದಿದ್ದರೆ ಮಾತ್ರ ಶೈಕ್ಷಣಿಕವಾಗಿ ಉನ್ನತ ಸಾಧನೆ ಸಾಧ್ಯ ಎಂದು ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ, ಯೂನಿವರ್ಸಲ್ ಪಿಯು ಕಾಲೇಜು ಹಾಗೂ ರೋಟರಿ ಸಂಸ್ಥೆ ಸಹಯೋಗದಲ್ಲಿ ಮಂಗಳವಾರ ನಡೆದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯೋಗ, ವ್ಯಾಯಾಮ, ಆಟೋಟ ಸ್ಪರ್ಧೆಗಳಲ್ಲಿ ಭಾಗವಹಿಸುವುದನ್ನು ವಿದ್ಯಾರ್ಥಿ ಜೀವನದಿಂದಲೇ ಮೈಗೂಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ಶಿಕ್ಷಣ ಜತೆಜತೆಗೆ ಕ್ರೀಡೆಗೂ ಸಮಾನ ಆದ್ಯತೆ ನೀಡಬೇಕು. ಮಾನವನಿಗೆ ಎರಡು ಕಣ್ಣು, ಎರಡು ಕೈ, ಎರಡು ಕಾಲು ಹೇಗೆ ಮುಖ್ಯವೋ ಹಾಗೆ ಆಟ ಮತ್ತು ಪಾಠ ಮುಖ್ಯವಾಗಿವೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆ ಶಿಕ್ಷಣದ ಜತೆಗೆ ಕ್ರೀಡೆಗಳಿಗೂ ಆದ್ಯತೆ ನೀಡುತ್ತಿದೆ. ಪ್ರತಿ ವರ್ಷ ಕ್ರೀಡಾಕೂಟಗಳನ್ನು ಆಯೋಜಿಸುವ ಮೂಲಕ ಕ್ರೀಡೆಗೆ ಉತ್ತೇಜನ ನೀಡುತ್ತಿದೆ. ವಿದ್ಯಾರ್ಥಿಗಳು ಕ್ರೀಡಾಕೂಟಗಳಲ್ಲಿ ತಪ್ಪದೇ ಭಾಗವಹಿಸಬೇಕು



ಎಂದು ಸಲಹೆ ನೀಡಿದರು ಜಿಲ್ಲೆಯವರೇ ಆದ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಆದ ನಂತರ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡುವ ಯೋಜನೆ ಜಾರಿಗೊಳಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಈ ಎಲ್ಲಾ ಯೋಜನೆಗಳನ್ನು ಸದುಪಯೋಗ ಪಡಿಸಿಕೊಂಡು ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಹಾಗೂ ಕ್ರೀಡೆಗಳಲ್ಲೂ ಉತ್ತಮ ಸಾಧನೆ ತೋರಬೇಕು ಎಂದರು.

ಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಯುವಕರಿಗಾಗಿ ಭಾರತ್ ಜೋಡೋ ಎಂಬ ಯೋಜನೆ ಆರಂಭಿಸಿದೆ. 16 ರಿಂದ 35 ವರ್ಷದೊಳಗಿನ ಯುವಕ–ಯುವತಿಯರಿಗೆ ಭಾರತ್ ಜೋಡೋ ಸಂಘಗಳನ್ನು ಕಟ್ಟಿಕೊಳ್ಳಬೇಕು. ಸರ್ಕಾರ ಪ್ರತಿ ಸಂಘಕ್ಕೆ ಪ್ರತಿ ವರ್ಷಕ್ಕೆ 10 ಲಕ್ಷ ರೂಗಳ ಸಹಾಯಧನ ನೀಡಲಿದೆ ಎಂದರು. ಒಂದು ಸಂಘದಲ್ಲಿ 150 ರಿಂದ 250 ಮಂದಿಗೆ ಅವಕಾಶವಿದೆ. ಯುವಕರು ಈ ಸಂಘದ ಸದಸ್ಯತ್ವ ಪಡೆದುಕೊಳ್ಳಬೇಕು. ಆ ಪೈಕಿ ಒಬ್ಬರನ್ನು ಅಧ್ಯಕ್ಷರನ್ನಾಗಿ ಆರಿಸಿಕೊಂಡು ಯುವಕರೇ ಸಂಘವನ್ನು ಮುನ್ನಡೆಸಬೇಕು. ಒಬ್ಬರು ಸರ್ಕಾರಿ ಅಧಿಕಾರಿಗಳು ಈ ಸಂಘದ ಮೇಲ್ವಿಚಾರಕರಾಗಿರುತ್ತಾರೆ. ಸಂಘಕ್ಕೆ ಬರುವ 10 ಲಕ್ಷ ಅನುದಾನದಲ್ಲಿ ಈ ಹಣವನ್ನು ಕ್ರೀಡೆಗಳು, ಸಾಂಸ್ಕೃತಿಕ ಚಟುವಟಿಕೆಗಳಿಗೆ ಬಳಸಿಕೊಳ್ಳಬಹುದಾಗಿದೆ. ಗ್ರಾಮೀಣ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವ ಸಲುವಾಗಿ ಕಾಂಗ್ರೆಸ್ ಸರ್ಕಾರ ಈ ಯೋಜನೆ ಜಾರಿಗೆ ತಂದಿದೆ. ಯುವಕರು ಈ ಯೋಜನೆಯ ಲಾಭ ಪಡೆದುಕೊಳ್ಳಬೇಕು ಎಂದರು.

ಸ್ಟುಡೆಂಟ್ ಲೈಫ್, ಗೋಲ್ಡನ್ ಲೈಫ್ ಶೈಕ್ಷಣಿಕ ಜೀವನದ ಬಹು ಮುಖ್ಯ ಹಂತ ದ್ವಿತೀಯ ಪಿಯು, ಹಸಿ ಗೋಡೆ ಹೇಗೆ ಎಲ್ಲವನ್ನೂ ತನ್ನತ್ತ ಆಕರ್ಷಿಸುತ್ತದೆಯೋ ಹಾಗೆ ಪಿಯುಸಿ ಮಕ್ಕಳಿಗೆ ಅಂತಹ ಸಾಮರ್ಥ್ಯ ಇರುತ್ತದೆ. ಪಾಠ ಹಾಗೂ ಆಟ ಎರಡೂ ವಿಷಯಗಳ ಕಡೆಗೂ ಗಮನ ನೀಡಬೇಕು ಎಂದು ಕಿವಿಮಾತು ಹೇಳಿದರು.

ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ ಮಾತನಾಡಿ, ಯಾವುದೇ ಸ್ಪರ್ಧೆಯಾಗಲಿ ಸೋಲು–ಗೆಲುವಿಗಿಂತ ಪಾಲ್ಗೊಳ್ಳುವಿಕೆ ಮುಖ್ಯ. ಕ್ರೀಡೆಗಳು ನಾಯಕತ್ವ, ಶಿಸ್ತು, ಅರ್ಪಣಾ ಮನೋಭಾವವನ್ನು ಬೆಳೆಸುತ್ತವೆ. ವಿದ್ಯಾರ್ಥಿಗಳು ಕ್ರೀಡಾ ಸ್ಫೂರ್ತಿಯನ್ನು ಬೆಳೆಸಿಕೊಳ್ಳಬೇಕು. ಕ್ರೀಡಾಕೂಟಗಳು ಮಕ್ಕಳಲ್ಲಿ ಈ ಎಲ್ಲಾ ಗುಣಗಳನ್ನು ಬೆಳೆಸಲು ಸಹಕಾರಿಯಾಗಿವೆ. ವಿದ್ಯಾರ್ಥಿಗಳು ತಪ್ಪದೇ ಕ್ರೀಡಾಕೂಟಗಳಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಕ್ರೀಡಾ ಜ್ಯೋತಿಯನ್ನು ಸ್ವೀಕರಿಸಿದರು. ಶಾಸಕ ಇಕ್ಬಾಲ್ ಹುಸೇನ್ ಧ್ವಜಾರೋಹಣ ನೆರವೇರಿಸಿದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಕೆ.ರಾಜು, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಮರಿಸ್ವಾಮಿ, ಪ್ರಾಂಶುಪಾಲರ ಸಂಘದ ಜಿಲ್ಲಾಧ್ಯಕ್ಷ ಡಾ.ದೊಡ್ಡಬೋರಯ್ಯ ನಿಕಟಪೂರ್ವ ಅಧ್ಯಕ್ಷ ಜಿ.ಶಿವಣ್ಣ, ಉಪಾಧ್ಯಕ್ಷ ಕೆ.ಜಿ.ಸತೀಶ್, ಖಜಾಂಚಿ ಬಿ.ಮಹೇಶ್, ಉಪನ್ಯಾಸಕರ ಸಂಘದ ಅಧ್ಯಕ್ಷ ಎಂ.ಎನ್.ಪ್ರದೀಪ್, ಯೂನಿವರ್ಸಲ್ ಕಾಲೇಜು ಪ್ರಾಂಶುಪಾಲ ಕೆ.ಎಲ್.ಚೇತನ್ ಸುಹಾಸ್, ಸದಸ್ಯರಾದ ಶಿವರಾಜು, ಮೂರ್ತಿ, ಧನರಾಜ್ ಸೇರಿದಂತೆ ಹಲವರು ಇದ್ದರು.

ಚಾಲಕರ ಸಮಸ್ಯೆಗಳಿಗೆ ರಾಜ್ಯ ಸರ್ಕಾರ ಸ್ಪಂದಿಸಬೇಕು



ಸೂರ್ಯಪ್ರಗತಿನ್ಯೂಸ್.ಕಾಂ

ಆನೇಕಲ್ :– ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಬನ್ನೇರುಘಟ್ಟ ಗ್ರಾಮದ ಶ್ರೀ ರಂಗನಾಥ ಕಲ್ಯಾಣ ಮಂಟಪದ ಆವರಣದಲ್ಲಿ ಕರುನಾಡ ಶ್ರಮಿಕ ಟ್ಯಾಕ್ಸಿ ಚಾಲಕರ ವೇದಿಕೆ ವತಿಯಿಂದ ಮೊದಲನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ನಡೆಯಿತು. ಕಾರ್ಯಕ್ರಮಕ್ಕೆ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಎಂ. ಕೃಷ್ಣಪ್ಪ ಚಾಲನೆ ನೀಡಿ ಶುಭ ಹಾರೈಸಿದರು. ಕಾರ್ಯಕ್ರಮದ ನೇತೃತ್ವವನ್ನು ವೇದಿಕೆಯ ಅಧ್ಯಕ್ಷ ರಾಜು ಹಾಲಹಳ್ಳಿ ವಹಿಸಿದ್ದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗಣ್ಯರು ಹಾಗೂ ಅತಿಥಿಗಳನ್ನು ಸನ್ಮಾನಿಸಲಾಯಿತು. ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಪುದುಚೇರಿ, ತಮಿಳುನಾಡು, ಕೇರಳ, ಕರ್ನಾಟಕ ಹಾಗೂ ಗೋವಾ ಸೇರಿದಂತೆ ವಿವಿಧ ರಾಜ್ಯಗಳ ಚಾಲಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು ಎಂದು ಅಧ್ಯಕ್ಷ ರಾಜು ಹಾಲಹಳ್ಳಿ ತಿಳಿಸಿದರು. ಇದೇ ವೇಳೆ ಮಾತನಾಡಿದ ಅವರು, ಚಾಲಕರ ಸಮಸ್ಯೆಗಳಿಗೆ ರಾಜ್ಯ ಸರ್ಕಾರ ಸ್ಪಂದಿಸಬೇಕು ಎಂದು ಮನವಿ ಮಾಡಿದರು. ಎಫ್‌ಸಿ ಸೇರಿದಂತೆ ವಾಹನ ನಿರ್ವಹಣೆಯ ಹಲವು ವೆಚ್ಚಗಳು ದುಬಾರಿಯಾಗುತ್ತಿದ್ದು, ಚಾಲಕರಿಗೆ ಆರ್ಥಿಕ ಹೊರೆ ಹೆಚ್ಚಾಗಿದೆ. ಹೀಗಾಗಿ ಸರ್ಕಾರ ಸಬ್ಸಿಡಿ ರೂಪದಲ್ಲಿ ವೆಚ್ಚ ಕಡಿಮೆ ಮಾಡಬೇಕು ಹಾಗೂ ಚಾಲಕರಿಗೆ ಸೂಕ್ತ ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಿದರು. ಕಾರ್ಯಕ್ರಮದಲ್ಲಿ ಸಂಘದ ಗೌರವಾಧ್ಯಕ್ಷ ರಮೇಶ್ ಎ.ಎಸ್. ಉಪಾಧ್ಯಕ್ಷರಾದ ಅಶೋಕ್ ಕುಮಾರ್ ವೈ. ಹಾಗೂ ಕೃಷ್ಣ ಬೋವಿ, ಪ್ರಧಾನ ಕಾರ್ಯದರ್ಶಿ ರಾಜೇಂದ್ರಕುಮಾರ್ ಪಿ., ಸಹ ಕಾರ್ಯದರ್ಶಿ ಯೋಗೇಶ್ ರಾವ್, ಖಜಾಂಚಿ ಮೆಹಬೂಬ್ , ಆರ್. ಶಂಕರ್, ಆನಂದ ಬಾಬು ಆರ್., ವಡಿವೇಲನ್ ಪಿ., ವೇಲ್ಮುರುಗನ್, ದಾಮೋದರನ್, ಅನುರಾಗ್, ಮಣಿಕಂಠನ್, ಅರವಿಂದನ್, ಮುರುಗೇಶ್, ಜಿ. ಚಕ್ರವರ್ತಿ ಸೇರಿದಂತೆ ಹಲವು ಗಣ್ಯರು ಸೇರಿದಂತೆ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಿದ್ದರು.

ದಂಪತಿಗಳಿಬ್ಬರೂ ಪರಸ್ಪರ ತ್ಯಾಗ, ಸಹನೆ ಹಾಗೂ ಹೊಂದಾಣಿಕೆಯ ಗುಣಗಳನ್ನು ಬೆಳೆಸಿಕೊಳ್ಳಬೇಕು

ಆನೇಕಲ್ :– ಕುಟುಂಬದಲ್ಲಿ ಶಾಂತಿ, ನೆಮ್ಮದಿ ಹಾಗೂ ಸಹಬಾಳ್ವೆ ನೆಲೆಸಬೇಕಾದರೆ ದಂಪತಿಗಳಿಬ್ಬರೂ ಪರಸ್ಪರ ತ್ಯಾಗ, ಸಹನೆ ಹಾಗೂ ಹೊಂದಾಣಿಕೆಯ ಗುಣಗಳನ್ನು ಬೆಳೆಸಿಕೊಳ್ಳಬೇಕು. ಕುಟುಂಬದ ಸದಸ್ಯರ ನಡುವೆ ಪ್ರೀತಿ, ವಿಶ್ವಾಸ ಹಾಗೂ ಪರಸ್ಪರ ಗೌರವ ಇದ್ದಾಗ ಮಾತ್ರ ಉತ್ತಮ ವಾತಾವರಣ ನಿರ್ಮಾಣವಾಗುತ್ತದೆ ಎಂದು ಡಾ. ವಿಜಯ ಧನಪತಿ ಹೇಳಿದರು.

ಆನೇಕಲ್‌ನ ಅರವಿಂದ ಶ್ರೀ ಮಂದಿರದಲ್ಲಿ ವಿಶಾಲ ಕರ್ನಾಟಕ ಸ್ಕೈ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಪತ್ನಿ ಪ್ರಶಂಸಾ ದಿನದ ಸಮಾರಂಭದಲ್ಲಿ ಅವರು ಮಾತನಾಡಿದರು.

ಇಂದಿನ ಆಧುನಿಕ ಜೀವನಶೈಲಿ ಹಾಗೂ ಒತ್ತಡದ ಬದುಕಿನಲ್ಲಿ ಕುಟುಂಬ ಸದಸ್ಯರು ಪರಸ್ಪರ ಸಮಯ ನೀಡುವುದು ಕಡಿಮೆಯಾಗುತ್ತಿದೆ. ಇದರಿಂದಾಗಿ ಸಣ್ಣಪುಟ್ಟ ವಿಚಾರಗಳಿಗೂ ಭಿನ್ನಾಭಿಪ್ರಾಯಗಳು ಉಂಟಾಗುತ್ತಿವೆ. ಇಂತಹ ಸಂದರ್ಭದಲ್ಲಿ ಪರಸ್ಪರರನ್ನು ಅರ್ಥಮಾಡಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳುವುದು ಅಗತ್ಯ. ದಂಪತಿಗಳು ತಮ್ಮ ವೈಯಕ್ತಿಕ ಹಿತಾಸಕ್ತಿಗಿಂತ ಕುಟುಂಬದ



ಹಿತವನ್ನು ಮುಖ್ಯವಾಗಿಟ್ಟುಕೊಂಡು ಜೀವನ ನಡೆಸಬೇಕು ಎಂದರು.

ಕುಟುಂಬದಲ್ಲಿ ಸುಖ–ಶಾಂತಿ ನೆಲೆಸಲು ಕೇವಲ ಆರ್ಥಿಕ ಸಂಪತ್ತು ಸಾಕಾಗುವುದಿಲ್ಲ. ಉತ್ತಮ ಆರೋಗ್ಯ, ನೆಮ್ಮದಿಯ ಮನಸ್ಸು, ಪರಸ್ಪರ ಪ್ರೀತಿ ಮತ್ತು ಸಹಕಾರವೂ ಅಗತ್ಯ. ಯೋಗ ಹಾಗೂ ಧ್ಯಾನದ ಮೂಲಕ ಮನಸ್ಸನ್ನು ನಿಯಂತ್ರಣದಲ್ಲಿಟ್ಟುಕೊಂಡು, ಜೀವನದಲ್ಲಿ ತಾಳ್ಮೆ ಮತ್ತು ಸಕಾರಾತ್ಮಕ ಚಿಂತನೆ ಬೆಳೆಸಿಕೊಳ್ಳಬೇಕು. ಕುಟುಂಬದಲ್ಲಿ ಪ್ರತಿಯೊಬ್ಬರೂ ಒಬ್ಬರನ್ನೊಬ್ಬರು ಗೌರವಿಸಿ, ತಪ್ಪುಗಳನ್ನು ಕ್ಷಮಿಸುವ ಮನೋಭಾವ ಹೊಂದಿದಾಗ ಸಂಬಂಧಗಳು ಮತ್ತಷ್ಟು ಗಟ್ಟಿಯಾಗುತ್ತವೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ನಿರ್ಮಲ ರಾಮಚಂದ್ರ ಪ್ರಸಾದ್ ಹಾಗೂ ಶಿವಗಾಮಿ ನಿಯಮ ಪದ್ಮನಾಭಯ್ಯ ಅವರು ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು. ವಿಶಾಲ ಕರ್ನಾಟಕ ಸ್ಕೈ ಸಂಸ್ಥೆಯ ಕಾರ್ಯದರ್ಶಿ ಎಂ. ಗೋವಿಂದರಾಜು ಸ್ವಾಗತಿಸಿ, ಕಾರ್ಯಕ್ರಮದ ಉದ್ದೇಶ ಹಾಗೂ ಸಂಸ್ಥೆಯ ಚಟುವಟಿಕೆಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ವಿ. ಉಮಾಪತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಡಾ. ಧನಪತಿ, ಡಾ. ವಿಜಯ ಧನಪತಿ ಸೇರಿದಂತೆ ಗಣ್ಯರು ಭಾಗವಹಿಸಿ, ಕುಟುಂಬ ವ್ಯವಸ್ಥೆ, ಯೋಗಾಭ್ಯಾಸ ಹಾಗೂ ಉತ್ತಮ ಜೀವನಶೈಲಿಯ ಮಹತ್ವದ ಕುರಿತು ಮಾತನಾಡಿದರು.

ಸಮಾರಂಭದಲ್ಲಿ ಸಂಸ್ಥೆಯ ಖಜಾಂಚಿ ಬೈರೇಗೌಡ, ಟ್ರಸ್ಟಿಗಳಾದ ವಿಜಯ, ನಾಗರಾಜು, ಭ್ರಮರಾಂಬ, ಸತೀಶ್, ಸುಬ್ರಮಣಿ ಹಾಗೂ ರಮೇಶ್ ಸೇರಿದಂತೆ ವಿವಿಧ ಕೇಂದ್ರಗಳಿಂದ ಆಗಮಿಸಿದ್ದ ಪ್ರಾಧ್ಯಾಪಕರು, ಮಾಸ್ಟರ್‌ಗಳು ಹಾಗೂ ಯೋಗ ಬಂಧುಗಳು ಭಾಗವಹಿಸಿದ್ದರು. ಪತ್ನಿಯರ ಕೊಡುಗೆ ಹಾಗೂ ಕುಟುಂಬದ ಅಭಿವೃದ್ಧಿಯಲ್ಲಿ ಅವರ ಪಾತ್ರವನ್ನು ಗುರುತಿಸುವುದು ಮತ್ತು ಗೌರವಿಸುವ ಉದ್ದೇಶದಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ದಂಪತಿಗಳು ಹಾಗೂ ಯೋಗ ಬಂಧುಗಳು ಉತ್ಸಾಹದಿಂದ ಪಾಲ್ಗೊಂಡಿದ್ದರು. ಕುಟುಂಬ ಜೀವನದಲ್ಲಿ ಪರಸ್ಪರ ಪ್ರೀತಿ, ಗೌರವ, ಸಹನೆ ಮತ್ತು ಹೊಂದಾಣಿಕೆಯ ಮಹತ್ವವನ್ನು ಸಾರುವ ಮೂಲಕ ಕಾರ್ಯಕ್ರಮ ಗಮನ ಸೆಳೆಯಿತು. ಕಾರ್ಯಕ್ರಮದಲ್ಲಿ ದಂಪತಿಗಳು ಹಾರ ಬದಲಾಯಿಸಿಕೊಂಡು ಮರು ಮದುವೆ ಆಗುವ ಸಂಪ್ರದಾಯ ಆಯೋಜನೆ ಮಾಡಲಾಗಿತ್ತು

ಆಯುಕ್ತರಿಲ್ಲದೆ ಸಾರ್ವಜನಿಕರು ಕೆಲಸಗಳಿಗಾಗಿ ಅಲೆದಾಟ



ಸೂರ್ಯಪ್ರಗತಿನ್ಯೂಸ್.ಕಾಂ

ಕನಕಪುರ : ನಗರಸಭೆ ಆಯುಕ್ತ ಸ್ಥಾನ ಖಾಲಿಯಾಗಿ ವರ್ಷ ಕಳೆದರೂ ಆಯುಕ್ತರಿಲ್ಲದೆ ಸಾರ್ವಜನಿಕರು ತಮ್ಮ ಕೆಲಸಗಳಿಗಾಗಿ ಕಚೇರಿಗೆ ಅಲೆದಾಡುತ್ತಿರುವುದಾಗಿ ರಾಜ್ಯ ಜೆಡಿಎಸ್ ಯುವ ಉಪಾಧ್ಯಕ್ಷ ಚಿನ್ನಸ್ವಾಮಿ ಆರೋಪಿಸಿದರು. ಮಂಗಳವಾರ ನಗರದ ಕೋಟೆ ಗಣೇಶ ದೇವಾಲಯ ದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಗರಸಭೆ 31 ವಾರ್ಡ್‌ಗಳಿದ್ದು ನಗರ ವ್ಯಾಪಕವಾಗಿ ಬೆಳೆಯುತ್ತಿದೆ, ನಗರದ ನಾಗರಿಕರು ನಗರದ ಸ್ವಚ್ಛತೆ ಹಾಗೂ ನಾನಾ ಕೆಲಸಗಳಿಗೆ ಕಚೇರಿಗೆ ಆಗಮಿಸುತ್ತಾರೆ, ನಗರಸಭೆಯ ಆಯುಕ್ತ ಹುದ್ದೆ ಬಹುತೇಕ ದಿನಗಳಿಂದ ಖಾಲಿಯಾಗಿದೆ. ಜೊತೆಗೆ ಈ ಕಚೇರಿಯಲ್ಲಿ ಬಹಳಷ್ಟು ಸಿಬ್ಬಂದಿ ಕೊರತೆಯಿಂದಾಗಿ ಸಾರ್ವಜನಿಕ ಕೆಲಸಗಳು ಕುಂಠಿತವಾಗಿ ಜನಸಾಮಾನ್ಯರು ತಮ್ಮ ಕೆಲಸಗಳಿಗಾಗಿ ನಿತ್ಯ ಅಲೆದಾಡುವಂತಾಗಿದೆ, ದೀಪದ ಕೆಳಗೆ ಕತ್ತಲು ಎಂಬಂತೆ ನಗರಸಭೆ ಆಡಳಿತ ನಡೆಯುತ್ತಿದೆ, ಈ ಕ್ಷೇತ್ರವನ್ನು ಪ್ರತಿನಿಧಿಸುತ್ತಿರುವ ಡಿ.ಕೆ. ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿಯಾಗಿದ್ದು ಕೂಡಲೇ ಸಾರ್ವಜನಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ತೆರವಾಗಿರುವ ಸ್ಥಾನಕ್ಕೆ ಕೂಡಲೇ ಅಧಿಕಾರಿಯನ್ನು ನೇಮಿಸದಿದ್ದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್ ಅಥವಾ ದೆಹಲಿಯ ಜಂತರ್ ಮಂತರ್ ನಲ್ಲಿ ಜೆಡಿಎಸ್ ಪಕ್ಷದ ಕಾರ್ಯಕರ್ತರು ಮುಖಂಡರು ಪ್ರತಿಭಟನೆ ಮಾಡುವುದಾಗಿ ತಿಳಿಸಿದರು. ಜೆಡಿಎಸ್ ಮುಖಂಡರುಗಳಾದ ಕಬ್ಬಾಳೇಗೌಡ, ಜಯರಾಮೇಗೌಡ, ನಗರಸಭಾ ಮಾಜಿ ಸದಸ್ಯರುಗಳಾದ ಕುರು ಪೇಟೆ ಲೋಕೇಶ್, ಸ್ಟುಡಿಯೋ ಚಂದ್ರು ನಗರಸಭೆಗೆ ಸರ್ಕಾರ ಕೂಡಲೇ ಆಯುಕ್ತರನ್ನು ನೇಮಿಸುವಂತೆ ಆಗ್ರಹಿಸಿದರು. ಜೆಡಿಎಸ್ ಹಿರಿಯ ಮುಖಂಡ ಸಿದ್ದಮರಿಗೌಡ, ಯುವ ಮುಖಂಡರುಗಳಾದ ತಿಮ್ಮೇಗೌಡ, ತಾಲೂಕು ಜೆಡಿಎಸ್ ಮಹಿಳಾ ಅಧ್ಯಕ್ಷೆ ಪವಿತ್ರ ಸೇರಿದಂತೆ ಹಲವರು ಹಾಜರಿದ್ದರು.

ನೂತನ ಸಾರ್ವಜನಿಕ ಆಸ್ಪತ್ರೆ ಹೈಟೆಕ್ ಖಾಸಗಿ ಬಸ್ ನಿಲ್ದಾಣ ನಿರ್ಮಾಣ

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ : ಪಟ್ಟಣದ ನೃಪತುಂಗ ವೃತ್ತದಿಂದ ಹೈ ಸ್ಕೂಲ್ ವೃತ್ತದವರೆಗೂ ರಸ್ತೆ ಅಗಲೀಕರಣ ಕಾಮಗಾರಿಗೆ 32 ಕೋಟಿ ರೂ ಮಂಜೂರಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ತಿಳಿಸಿದರು.

ಪಟ್ಟಣದ ಸ್ವಗೃಹದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 32 ಕೋಟಿ ರೂಗಳಲ್ಲಿ 5 ಕೋಟಿ ರೂಗಳನ್ನು ರಸ್ತೆ ಅಗಲೀಕರಣ ಕಾಮಗಾರಿಗೆ ಬಳಸಿಕೊಳ್ಳಲಾಗುವುದು ಉಳಿದ 27 ಕೋಟಿ ರೂಗಳನ್ನು ಕಟ್ಟಡದ ಮಾಲೀಕರಿಗೆ ಭೂ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಪಟ್ಟಣದ ಹೊರವಲಯದಲ್ಲಿ 50 ಕೋಟಿ ರೂಗಳ ವೆಚ್ಚದಲ್ಲಿ ನೂತನ ಸಾರ್ವಜನಿಕ ಆಸ್ಪತ್ರೆಯ ನಿರ್ಮಿಸಲಾಗುವುದು. ಹೈಟೆಕ್ ಖಾಸಗಿ ಬಸ್ ನಿಲ್ದಾಣ ನಿರ್ಮಿಸಲಾಗುವುದು. ಕೆ ಎಸ್ ಆರ್ ಟಿ ಸಿ ರಿಸರ್ವೇಶನ್ ಕೌಂಟರ್ ತೆರೆಯಲಾಗುವುದು. ಏಕಶಿಲಾ ಬೆಟ್ಟಕ್ಕೆ ಚಾರಣ ನಡೆಸುವವರಿಗೆ ಅನುಕೂಲವಾಗುವ ಉದ್ದೇಶದಿಂದ ಕೋಟೆ ಆವರಣದಲ್ಲಿ ಶೌಚಾಲಯ ಮತ್ತು ಕ್ಯಾಂಟೀನ್ ನಿರ್ಮಿಸಲಾಗುವುದು. ಪಾವಗಡ ಗೇಟ್ ನಿಂದ ಬೈಪಾಸ್ ವರೆಗೂ 7.50 ಕೋಟಿ ವೆಚ್ಚದಲ್ಲಿ ದ್ವಿಪಥ ರಸ್ತೆ ನಿರ್ಮಾಣ ಮಾಡಲಾಗುವುದು. ತುಮಕೂರು ವೃತ್ತದಲ್ಲಿ ಮಾಸ್ತಿ ವೆಂಕಟೇಶ ಅಯ್ಯಂಗಾರ್ ವೃತ್ತ ಎಂದು ನಾಮಕರಣ ಮಾಡಿ ಟವರ್ ಕ್ಲಾಕ್



ನಿರ್ಮಿಸಿ, ಸಿಸಿ ಕ್ಯಾಮೆರಾ ಮತ್ತು ಸಿಗ್ನಲ್ ಲೈಟ್ ಅಳವಡಿಸಲಾಗುವುದು. ಸಮೀಪದಲ್ಲಿರುವ ಹಳೆಯ ಈಜುಕೊಳ ಸ್ಥಳಗಳಲ್ಲಿ ಹೈಟೆಕ್ ತಂಗುದಾಣ ನಿರ್ಮಿಸಲಾಗುವುದು ಎಂದರು.

ಈಗಾಗಲೇ 5 ಕೋಟಿ ವೆಚ್ಚದಲ್ಲಿ ರಾಜೀವ್ ಗಾಂಧೀ ಕ್ರೀಡಾಂಗಣದಲ್ಲಿ ಕಾಮಗಾರಿ ನಡೆಯುತ್ತಿದ್ದು, ಈ ಕ್ರೀಡಾಂಗಣ ಮೇಲ್ದರ್ಜೆಗೇರಿಸಲು ಇನ್ನೂ 7 ಕೋಟಿ ರೂಗಳು ಬಿಡುಗಡೆಯಾಗಿದ್ದು, ಹೈಟೆಕ್ ಮಾದರಿಯಲ್ಲಿ ಕ್ರೀಡಾಂಗಣ ನಿರ್ಮಾಣ, ಹಳೆ ಸಂತೆ ಮೈದಾನದಲ್ಲಿ ಸುಸಜ್ಜಿತ ಒಳಾಂಗಣ ಕ್ರೀಡಾಂಗಣವನ್ನು ನಿರ್ಮಿಸಲಾಗುವುದು. ಪಟ್ಟಣದ ನಾಲ್ಕು ದಿಕ್ಕಿನಲ್ಲಿ ಸ್ವಾಗತ ಕಮಾನು ಅಳವಡಿಸಲಾಗುವುದು. ನ. 1 ರಂದು ಬೃಹತ್ ನಾಡ ಧ್ವಜ ಉದ್ಘಾಟನೆಗೆ ಕ್ರಮ ಕೈಗೊಳ್ಳಲಾಗಿದೆ. ಅಮೃತ್ 2 ಯೋಜನೆಯಲ್ಲಿ ರಸ್ತೆಗಳನ್ನು ಬೇಕಾಬಿಟ್ಟಿ ಅಗೆಯಲಾಗಿದೆ ಎಂದ ದೂರುಗಳಿದ್ದು, ಶೀಘ್ರದಲ್ಲೇ ದಿಡೀರ್ ಭೇಟಿ ನೀಡಿ ತೊಂದರೆ ನಿವಾರಿಸುವ ಪ್ರಯತ್ನ ಮಾಡಲಾಗುವುದು. ವಾರ್ತಾ ಇಲಾಖೆಯನ್ನು ಮಧುಗಿರಿಯಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಡಿವಿ ಹಳ್ಳಿಯಿಂದ ಕೆ ಎಸ್ ಆರ್ ಟಿ ಸಿ ಡಿಪೋವರೆಗೂ ರಿಂಗ್ ರಸ್ತೆ ಪ್ರಾರಂಭವಾಗಲಿದ್ದು, ಇದರಿಂದ ಪಟ್ಟಣದ ಜನತೆಗೆ ಅನುಕೂಲವಾಗಲಿದೆ. ಕೆ ಎಸ್ ಆರ್ ಟಿ ಸಿ ನೂತನ ಬಸ್ ನಿಲ್ದಾಣ ಪ್ರಾರಂಭಿಸಲು ಕ್ರಿಯಾಯೋಜನೆ ಸಿದ್ದಪಡಿಸಲಾಗಿದೆ. ಈಗಾಗಲೇ ಅಂಗನವಾಡಿ ಮಕ್ಕಳಿಗೆ ಉಚಿತ ಸಮವಸ್ತ್ರ ನೀಡಲಾಗಿದ್ದು, ಸರ್ಕಾರಿ ಶಾಲೆಯ ಎಲ್ ಕೆ ಜಿ, ಯು ಕೆ ಜಿಯ ಒಂದು ಸಾವಿರ ವಿದ್ಯಾರ್ಥಿಗಳಿಗೂ ಸಮವಸ್ತ್ರ ನೀಡಲಾಗುವುದು. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅಕ್ಷರ ಅಮೃತ ಯೋಜನೆ ಪ್ರಾರಂಭದಿಂದಾಗಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಳವಾಗಿರುವುದು ಸಂತಸ ತಂದಿದೆ ಎಂದರು.

ಈಗಾಗಲೇ ಮಧುಗಿರಿಯಿಂದ ಸಿಗಂದೂರು, ಮಲೆ ಮಹದೇಶ್ವರ ಬೆಟ್ಟ, ಧರ್ಮಸ್ಥಳಕ್ಕೆ ನೇರ ಬಸ್ ವ್ಯವಸ್ಥೆ ಕಲ್ಪಿಸಲು ಕ್ರಮ ವಹಿಸಲಾಗಿದ್ದು, ಶೀಘ್ರದಲ್ಲೇ ಮಧುಗಿರಿಯಿಂದ ಮಂತ್ರಾಲಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸಲು ಕಲ್ಪಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷರಾದ ಎಂ ಕೆ ನಂಜುಂಡಯ್ಯ, ಎನ್ ಗಂಗಣ್ಣ ಹಾಜರಿದ್ದರು.

ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ತುಮಕೂರು: ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯು ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನ ಯೋಜನೆ(ಪಿ.ಎಂ.ಇ.ಜಿ.ಪಿ) ಯಡಿ ಬ್ಯಾಂಕಿನಿಂದ ಸಾಲ–ಸೌಲಭ್ಯ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.ಸಾಲ–ಸೌಲಭ್ಯ ಬಯಸುವ ಅರ್ಹ ಫಲಾನುಭವಿಗಳು ಖಾದಿ ಗ್ರಾಮೋದ್ಯೋಗದ ಅಧಿಕೃತ ವೆಬ್‌ಸೈಟ್: https://pmegp.msme.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ಅಥವಾ ಜಿಲ್ಲಾ ಕಚೇರಿ, ಖಾದಿ ಗ್ರಾಮೋದ್ಯೋಗ ಮಂಡಳಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಮೊದಲನೇ ಮಹಡಿ, ಕೈಗಾರಿಕಾ ಪ್ರದೇಶ, ಬಿ.ಹೆಚ್. ರಸ್ತೆ, ತುಮಕೂರು ಅಥವಾ ಮೊಬೈಲ್ ಸಂಖ್ಯೆ: 9480825638ನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಇಂದು ಭಾರತರತ್ನ ಡಾ: ಬಿ.ಆರ್. ಅಂಬೇಡ್ಕರ್ ಓದು ಮತ್ತು ಪ್ರಬಂಧ ಸ್ಪರ್ಧೆ

ತುಮಕೂರು: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೆಎಸ್‌ಇಎಫ್ ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ ಸೆಪ್ಟೆಂಬರ್ 2ರಂದು ಬೆಳಗ್ಗೆ 11 ಗಂಟೆಗೆ ಉತ್ತರ ಬಡಾವಣೆ ಶಿರಾ ರಸ್ತೆಯಲ್ಲಿರುವ ಕೆ.ಎಸ್.ಇ.ಎಫ್. ಶಿಕ್ಷಣ ಮಹಾವಿದ್ಯಾಲಯದ ಆವರಣದಲ್ಲಿ ಭಾರತರತ್ನ ಡಾ: ಬಿ.ಆರ್. ಅಂಬೇಡ್ಕರ್ ಓದು ಮತ್ತು ಪ್ರಬಂಧ ಸ್ಪರ್ಧೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ವಿಭಾಗದ ಜಂಟಿ ನಿರ್ದೇಶಕ ಅಶೋಕ್ ಎನ್. ಛಲವಾದಿ ಉದ್ಘಾಟಿಸುವರು. ಕೆ.ಎಸ್.ಇ.ಎಫ್. ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ: ಹರೀಶ್ ಆರ್. ಅಧ್ಯಕ್ಷತೆವಹಿಸುವರು. ವಿವಿಧ ಕಲಾವಿದರು, ಪ್ರಾಧ್ಯಾಪಕರು ಸೇರಿದಂತೆ ಇತರೆ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು, ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ನೂತನ ಎಸ್ಪಿಗೆ ಪತ್ರಕರ್ತರ ಸಂಘದಿಂದ ಸ್ವಾಗತ



ಬೆಂಗಳೂರು ದಕ್ಷಿಣ ಜಿಲ್ಲೆಯ (ರಾಮನಗರ) ನೂತನ ಎಸ್ಪಿಯಾಗಿ ಬಂದಿರುವ ರೋಹನ್ ಜಗದೀಶ್ ಅವರನ್ನು ಅವರ ಕಛೇರಿಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಸ್ವಾಗತಿಸಲಾಯಿತು.

ಜಿಲ್ಲಾಧ್ಯಕ್ಷ ವಿಭೂತಿಕೆರೆ ಶಿವಲಿಂಗಯ್ಯ, ಪ್ರಧಾನ ಕಾರ್ಯದರ್ಶಿ ಮಂಜುನಾಥ್, ಖಜಾಂಚಿ ಅರುಣ್ ಮತ್ತು ಜಿಲ್ಲಾ ಪದಾಧಿಕಾರಿಗಳು ಸದಸ್ಯರುಗಳು ಇದ್ದರು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯು ವಾಧ್ಯಮ ಪಟ್ಟಿಗೆ ಸೇರಿ ಪ್ರತಿ ನಿತ್ಯ ಸ್ಥಳೀಯ ಸುದ್ದಿಗಳ ಜೀವಾಳವಾಗಿದ್ದು ಕ್ಷಣ ಕ್ಷಣದ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಸೆ.5 ರಿಂದ ಜಿಲ್ಲಾದ್ಯಂತ "ಪ್ರಜಾಸೇವೆ ಆಂದೋಲನ"– ಜಿಲ್ಲಾಧಿಕಾರಿ ಶುಭ ಕಲ್ಯಾಣ್

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಸಾರ್ವಜನಿಕರ ಕುಂದು–ಕೊರತೆಗಳನ್ನು ಆಲಿಸಿ, ಅವುಗಳಿಗೆ ಸಕಾಲದಲ್ಲಿ ಸೂಕ್ತ ಪರಿಹಾರ ಒದಗಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾದ್ಯಂತ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸ್ಥಳೀಯ ಶಾಸಕರ ನೇತೃತ್ವದಲ್ಲಿ ಪ್ರತಿ ತಿಂಗಳು ಎಲ್ಲಾ ಶನಿವಾರಗಳಂದು "ಪ್ರಜಾಸೇವೆ ಆಂದೋಲನ" ಸಭೆಗಳನ್ನು ಆಯೋಜಿಸಲು ಸರ್ಕಾರ ನಿರ್ಧರಿಸಿದ್ದು, ಸೆಪ್ಟೆಂಬರ್ 5 ರಿಂದ ಅಭಿಯಾನಕ್ಕೆ ಚಾಲನೆ ದೊರೆಯಲಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಉಪ ಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ ಅವರ ಅಧ್ಯಕ್ಷತೆಯಲ್ಲಿ ಹಾಗೂ ಗುಬ್ಬಿ ವಿಧಾನಸಭಾ ಕ್ಷೇತ್ರದ ಶಾಸಕರ ಉಪಸ್ಥಿತಿಯಲ್ಲಿ ಗುಬ್ಬಿ ಪಟ್ಟಣದ ಡಾ: ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಸೆಪ್ಟೆಂಬರ್ 5ರಂದು ಬೆಳಗ್ಗೆ 10 ಗಂಟೆಗೆ ಪ್ರಜಾಸೇವಾ ಆಂದೋಲನ ಸಭೆಯನ್ನು ನಡೆಸಲಾಗುವುದು.

ಅದೇ ದಿನ ಜಿಲ್ಲೆಯ ಉಳಿದ 9 ತಾಲ್ಲೂಕುಗಳಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಪ್ರಜಾಸೇವೆ ಆಂದೋಲನ ಸಭೆ ನಡೆಯಲಿದ್ದು, ಸೆಪ್ಟೆಂಬರ್ 12ರಂದು ಬೆಳಗ್ಗೆ 10



ಗಂಟೆಗೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಪ್ರಜಾಸೇವೆ ಆಂದೋಲನ ಸಭೆ ನಡೆಯಲಿದೆ.

ಜಿಲ್ಲೆಯ ಸಾರ್ವಜನಿಕರು ಅಹವಾಲುಗಳೇನಾದರೂ ಇದ್ದಲ್ಲಿ ಸೆಪ್ಟೆಂಬರ್ 5 ಹಾಗೂ 12ರಂದು ನಡೆಯುವ ಪ್ರಜಾಸೇವೆ ಆಂದೋಲನ ಸಭೆಗೆ ಖುದ್ದಾಗಿ ಹಾಜರಾಗಿ ಅಹವಾಲು ಸಲ್ಲಿಸಬಹುದಾಗಿದೆ. ಅಲ್ಲದೇ ಸಭಾ ಸ್ಥಳಗಳಲ್ಲಿ ತೆರೆಯಲಾಗುವ ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳ ಮೂಲಕ ನಾಗರಿಕರು ತಮ್ಮ ಅಹವಾಲು / ದೂರುಗಳನ್ನು ಸಲ್ಲಿಸಿ ಪರಿಹಾರ ಕಂಡುಕೊಳ್ಳಬಹುದಾಗಿದೆ.

ಸಾರ್ವಜನಿಕರು ಈ ಆಂದೋಲನದ ಸದುಪಯೋಗ ಪಡೆದುಕೊಳ್ಳಲು ಅವರು ಮನವಿ ಮಾಡಿದ್ದಾರೆ.

ಪ್ರಜಾಸೇವೆ ಆಂದೋಲನ ಸಭೆಯನ್ನು ಸೆಪ್ಟೆಂಬರ್ 5ರಂದು ತುಮಕೂರು ಉಪವಿಭಾಗ ವ್ಯಾಪ್ತಿ ತುಮಕೂರು ತಾಲ್ಲೂಕು ಹೆಬ್ಬೂರು ಹೋಬಳಿ ಅಂಬೇಡ್ಕರ್ ಭವನದಲ್ಲಿ, ಕುಣಿಗಲ್ ತಾಲ್ಲೂಕು ಹುತ್ರಿದುರ್ಗ ಹೋಬಳಿ ಸಂತೇಪೇಟೆ ಗ್ರಾಮ ಪಂಚಾಯತಿ ಪಕ್ಕದ ಆವರಣ, ಗುಬ್ಬಿ ಪಟ್ಟಣ ಡಾ: ಗುಬ್ಬಿ ವೀರಣ್ಣ ರಂಗಮಂದಿರ; ಮಧುಗಿರಿ ಉಪವಿಭಾಗ ವ್ಯಾಪ್ತಿ ಮಧುಗಿರಿ ತಾಲ್ಲೂಕು ಕಚೇರಿ ಆವರಣ, ಶಿರಾ ತಾಲ್ಲೂಕು ಗೌಡಗೆರೆ ಗ್ರಾಮ ಪಂಚಾಯತಿ ಆವರಣ, ಕೊರಟಗೆರೆ ತಾಲ್ಲೂಕು ಹೊಳವನಹಳ್ಳಿ ಹೋಬಳಿ ಸಮುದಾಯ ಭವನ, ಪಾವಗಡ ತಾಲ್ಲೂಕು ವೈ.ಎನ್. ಹೊಸಕೋಟೆ ಗ್ರಾಮ ಪಂಚಾಯತಿ ಆವರಣ; ತಿಪಟೂರು ಉಪವಿಭಾಗ ತಿಪಟೂರು ತಾಲ್ಲೂಕು ಹೊನ್ನವಳ್ಳಿ ಹೋಬಳಿ ಹುಡಿಸಲಮ್ಮ ದೇವಸ್ಥಾನ ಆವರಣ, ಚಿಕ್ಕನಾಯಕನಹಳ್ಳಿ ತಾಲ್ಲೂಕು ಕಂದಿಕೆರೆ ಗ್ರಾಮ ಪಂಚಾಯತಿ ಆವರಣ ಹಾಗೂ ತುರುವೇಕೆರೆ ತಾಲ್ಲೂಕು ಮಾಯಸಂದ್ರ ಹೋಬಳಿಯ ರಂಗಮಂದಿರ ಸಭಾಂಗಣದಲ್ಲಿ ನಡೆಸಲಾಗುವುದು.

ಸೆಪ್ಟೆಂಬರ್ 12ರಂದು ತುಮಕೂರು ಉಪವಿಭಾಗ ವ್ಯಾಪ್ತಿ ತುಮಕೂರು ತಾಲ್ಲೂಕು ಬೆಳ್ಳಾವಿ ಗ್ರಾಮ ಪಂಚಾಯತಿ ಆವರಣ, ಕುಣಿಗಲ್ ತಾಲ್ಲೂಕು ಎಡೆಯೂರು ಗ್ರಾಮ ಪಂಚಾಯತಿ ಆವರಣ, ಗುಬ್ಬಿ ತಾಲ್ಲೂಕು ಚೇಳೂರು ನಾಡಕಚೇರಿ ಆವರಣ; ಮಧುಗಿರಿ ಉಪವಿಭಾಗ ವ್ಯಾಪ್ತಿ ಮಧುಗಿರಿ ತಾಲ್ಲೂಕು ದೊಡ್ಡೇರಿ ಹೋಬಳಿ ಬಾಬು ಜಗಜೀವನ್ ರಾಂ ಸಮುದಾಯ ಭವನ, ಶಿರಾ ತಾಲ್ಲೂಕು ಹುಲಿಕುಂಟೆ ನಾಡ ಕಚೇರಿ ಆವರಣ, ಕೊರಟಗೆರೆ ತಾಲ್ಲೂಕು ಕೋಳಾಲ ಹೋಬಳಿ ಗ್ರಾಮ ಪಂಚಾಯತಿ ಆವರಣ, ಪಾವಗಡ ತಾಲ್ಲೂಕು ನಾಗಲಮಡಿಕೆ ಶ್ರೀ ಸುಬ್ರಮಣ್ಯ ಸ್ವಾಮಿ ದೇವಸ್ಥಾನದ ಸಮುದಾಯ ಭವನ ಆವರಣ; ತಿಪಟೂರು ಉಪವಿಭಾಗ ತಿಪಟೂರು ತಾಲ್ಲೂಕು ಕಿಬ್ಬನಹಳ್ಳಿ ಎಪಿಎಂಸಿ ಕಚೇರಿ ಆವರಣ, ಚಿಕ್ಕನಾಯಕನಹಳ್ಳಿ ತಾಲ್ಲೂಕು ಶೆಟ್ಟಿಕೆರೆ ನಾಡ ಕಚೇರಿ ಆವರಣ ಹಾಗೂ ತುರುವೇಕೆರೆ ತಾಲ್ಲೂಕು ದಬ್ಬೇಘಟ್ಟ ಹೋಬಳಿಯ ಸರ್ಕಾರಿ ಪ್ರೌಢಶಾಲೆ ಸಭಾಂಗಣದಲ್ಲಿ ನಡೆಸಲಾಗುವುದು ಎಂದು ಅವರು ತಿಳಿಸಿದ್ದಾರೆ.

18 ಸಾವಿರಕ್ಕೂ ಹೆಚ್ಚು ಪೌತಿಖಾತೆ ಕೇಸ್‌ಗಳು ಬಾಕಿ

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ : ತಾಲೂಕಿನಲ್ಲಿ 18 ಸಾವಿರಕ್ಕೂ ಹೆಚ್ಚು ಪೌತಿ ಖಾತೆ ಕೇಸ್ ಗಳು ಬಾಕಿ ಇದ್ದು, ಇವೆಲ್ಲವನ್ನೂ ಪೌತಿ ಖಾತೆ ಆಂದೋಲನದ ಮೂಲಕ ಹಂತ ಹಂತವಾಗಿ ಬಗೆಹರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಹಶೀಲ್ದಾರ್ ನಂದಿನಿ ತಿಳಿಸಿದರು. ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮೊದಲ ಹಂತದಲ್ಲಿ 6 ಹೋಬಳಿಗಳ 6 ಗ್ರಾಪಂ ವ್ಯಾಪ್ತಿಯಲ್ಲಿ ಪೌತಿ ಖಾತೆ ಆಂದೋಲನ ಹಮ್ಮಿಕೊಳ್ಳಲಾಗಿದೆ. ಪಂಚಾಯ್ತಿ ಸೆ.
3 ರಟವಳಲು, ಸೆ. 7 ಬಿಜವರ, ಸೆ. 10 ಗೊಂದಿಹಳ್ಳಿ ಸೆ. 15 ಬ್ರಹಸಮುದ್ರ, ಸೆ. 17 ರಂದು ಹೊಸಕೆರೆ ಗ್ರಾಮದಲ್ಲಿ ಪೌತಿ ಖಾತೆ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದ ಅವರು ವಿಎ ಗಳಿಗೆ ದಿನಕ್ಕೆ ಎರಡು ಪೌತಿ ಖಾತೆ ಮಾಡಲು ನಿರ್ದೇಶನ ನೀಡಲಾಗಿದೆ ಎಂದರು.
ಪ್ರತೀ ತಿಂಗಳು ಮೊದಲನೇ ಶನಿವಾರ ಜಿಲ್ಲಾ ಮಟ್ಟದ ಜನಸ್ಪಂದನ ಕಾರ್ಯಕ್ರಮ ನಡೆಸಲು ಸರ್ಕಾರದ ವತಿಯಿಂದ ಸೂಚನೆ ನೀಡಲಾಗಿದ್ದು, ಜಿಲ್ಲಾ ಹಂತದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜನಸ್ಪಂದನ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ಮಧುಗಿರಿ ತಾಲೂಕಿನಲ್ಲೂ ಸೆ. 5 ರಂದು ಶಾಸಕ ಕೆ.ಎನ್. ರಾಜಣ್ಣನವರ ಅಧ್ಯಕ್ಷತೆಯಲ್ಲಿ ತಾಲೂಕು ಕಚೇರಿ ಆವರಣದಲ್ಲಿ ಜನಸ್ಪಂದನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಇಂದು ಸಂಭ್ರಮ 2026–27

ತುಮಕೂರು: ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತೆರೆದ ಆಡಿಟೋರಿಯಂನಲ್ಲಿ ಸೆಪ್ಟೆಂಬರ್ 2ರಂದು ಬೆಳಗ್ಗೆ 10.30 ಗಂಟೆಗೆ "ಸಂಭ್ರಮ : 2026–27" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.
ಕಾರ್ಯಕ್ರಮವನ್ನು ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಉದ್ಘಾಟಿಸುವರು. ತುಮಕೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಹೆಚ್. ನಾಗಭೂಷಣ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ರಾಷ್ಟ್ರೀಯ ಅಥ್ಲೇಟ್ ಕ್ರೀಡಾಪಟು ಶ್ರೀನಿವಾಸ ಬಿ. ಹಾಗೂ ಜನಪದ ಕಲಾವಿದ ಕಡಬಗೆರೆ ಮುನಿರಾಜು ಆಗಮಿಸುವರು. ಪ್ರಾಂಶುಪಾಲ ಪ್ರೊ. ವಸಂತ ಟಿ.ಡಿ. ಅಧ್ಯಕ್ಷತೆವಹಿಸುವರು.

ಬೀದಿಬದಿ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆಗೆ ಒತ್ತಾಯ; ಇಲ್ಲವಾದರೆ ತಮಟೆ ಚಳವಳಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು:ಸುಪ್ರೀಂಕೋರ್ಟ್ ಆದೇಶದಂತೆ ನಗರಪಾಲಿಕೆ ಅಧಿಕಾರಿಗಳು ನಗರದೆಲ್ಲೆಡೆ ಫುಟ್‌ಪಾತ್ ಅಂಗಡಿಗಳನ್ನು ತೆರವು ಮಾಡಿಸಿದ್ದಾರೆ. ಈ ಕ್ರಮದಿಂದ ನಗರದ ಎರಡೂವರೆ ಸಾವಿರಕ್ಕೂ ಹೆಚ್ಚು ಬೀದಿಬದಿ ವ್ಯಾಪಾರ ಮಾಡುತ್ತಿದ್ದ ಕುಟುಂಬಗಳು ಬದುಕು ಕಳೆದು ಕೊಂಡು ಬೀದಿಪಾಲಾಗಿದ್ದಾರೆ. ಬೀದಿಬದಿ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡದೆತೆರವು ಮಾಡಿರುವುದು ಅಮಾನವೀಯ ಎಂದು ಕನ್ನಡ ಸೇನೆ ಜಿಲ್ಲಾಧ್ಯಕ್ಷ ಡಾ.ಧನಿಯಾಕುಮಾರ್ ಹೇಳಿದರು.
ಮಂಗಳವಾರ ನಗರದಲ್ಲಿ ಸಮೃದ್ಧಿ ಬೀದಿಬದಿ ವ್ಯಾಪಾರಿಗಳ ಸಂಘದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಕಷ್ಟದಲ್ಲಿರುವ ಬೀದಿಬದಿ ವ್ಯಾಪಾರಿಗಳ ಹೋರಾಟಕ್ಕೆ ಕನ್ನಡ ಸೇನೆ ಹಾಗೂ ವಿವಿಧ ಸಂಘಟನೆಗಳು ಬೆಂಬಲ ನೀಡಿವೆ. ತಮ್ಮ ವ್ಯಾಪಾರ ಕಳೆದು ಕೊಂಡಿರುವ ಬೀದಿಬದಿ ವ್ಯಾಪಾರಿಗಳಿಗೆ ಪರ್ಯಾಯಜಾಗದ ವ್ಯವಸ್ಥೆ



ಮಾಡದಿದ್ದರೆ ಬರುವ ಸೋಮವಾರ ನಗರ ಪಾಲಿಕೆ ಕಚೇರಿ ಎದುರು ತಮಟೆ ಚಳವಳಿ ನಡೆಸಲಾಗುವುದು. ನಂತರ ಜಿಲ್ಲಾಧಿಕಾರಿಗಳ ಕಚೇರಿಗೆ ಪಾದಯಾತ್ರೆ ತೆರಳಿ ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ನೀಡಲಾಗುವುದು ಎಂದರು.
ನಗರದ ವಿವಿಧ ರಸ್ತೆಗಳ ಫುಟ್ ಪಾತ್‌ಗಳಲ್ಲಿ ಪಾದಚಾರಿಗಳ ಓಡಾಟಕ್ಕೆ ತೊಂದರೆಆಗದಂತೆ ಹಲವಾರು ವರ್ಷಗಳಿಂದ ಸಣ್ಣ ಪ್ರಮಾಣದ ವ್ಯಾಪಾರ ಮಾಡಿ ಕೊಂಡು ಬದುಕು ಕಟ್ಟಿಕೊಂಡಿದ್ದರು. ನಗರಪಾಲಿಕೆಯಿಂದ ಪರವಾನಗಿ, ಗುರುತಿನ ಚೀಟಿ ಪಡೆದಿದ್ದರು. ಬ್ಯಾಂಕ್ ಹಾಗೂ ಖಾಸಗಿಯವರಲ್ಲಿ ಸಾಲ ಪಡೆದು ವ್ಯವಹಾರ ಮಾಡಿ ಕೊಂಡಿದ್ದರು.
ಇದರಲ್ಲೇ ತಮ್ಮ ಮಕ್ಕಳ ವಿದ್ಯಾಭ್ಯಾಸ, ಕುಟುಂಬ ನಿರ್ವಹಣೆ ಮಾಡುತ್ತಿದ್ದರು.ಈಗ ಏಕಾಏಕಿ ಫುಟ್ ಪಾತ್ ವ್ಯಾಪಾರಿಗಳ ಅಂಗಡಿಗಳನ್ನು ಎತ್ತಂಗಡಿ ಮಾಡಿದ್ದು ಅವರು ಬದುಕು ಬೀದಿಗೆ ಬಂದು ಆತಂಕಕ್ಕೀಡಾಗಿದ್ದಾರೆ. ಕಾನೂನು ಪಾಲನೆ ಜೊತೆಗೆ ಮಾನವೀಯತೆಯನ್ನೂ ಅಧಿಕಾರಿಗಳು ಮೆರೆಯಬೇಕು.ಇವರ ವ್ಯಾಪಾರಕ್ಕೆ ಪ್ರತ್ಯೇಕ ಜಾಗದ ವ್ಯವಸ್ಥೆ ಮಾಡಿ ಬದುಕಿಗೆ ಪುನರ್ ವ್ಯವಸ್ಥೆ ಕಲ್ಪಿಸಬೇಕು ಎಂದು ಡಾ.ಧನಿಯಾಕುಮಾರ್ ಹೇಳಿದರು.
ಸಾಮಾನ್ಯವಾಗಿ ಅಧಿಕಾರಿಗಳು ಬಡವರ ಮೇಲೆ ಕಾನೂನಿನ ಅಧಿಕಾರ ಚಲಾಯಿಸುತ್ತಾರೆ.ಅನೇಕ ಶ್ರೀಮಂತರು ರಾಯಗಾಲುವೆ, ಫುಟ್‌ಪಾತ್ ಒತ್ತುವರಿ ಮಾಡಿ ಕಟ್ಟಡ ಕಟ್ಟಿದ್ದಾರೆ .ಪ್ರಮುಖ ರಸ್ತೆಗಳಲ್ಲಿ ವಾಣಿಜ್ಯ ಮಳಿಗೆಗಳಲ್ಲಿ ಪಾರ್ಕಿಂಗ್ ಜಾಗ ಬಿಡದೆ ನಿಯಮ ಉಲ್ಲಂಘಿಸಿದ್ದಾರೆ. ಅಂತಹವರ ವಿರುದ್ಧ ಅಧಿಕಾರಿಗಳು ಯಾವುದೇಕ್ರಮ ತೆಗೆದು ಕೊಳ್ಳದೇ ಬೀದಿಬದಿ ವ್ಯಾಪಾರಿಗಳ ವಿರುದ್ಧ ಗುಬ್ಬಿ ಮೇಲೆ ಬ್ರಹ್ಮಾಸ್ತ್ರ ಪ್ರಯೋಗಿಸಿದ್ದಾರೆ ಎಂದರು.
ಕನ್ನಡ ಸೇನೆ ರಾಜ್ಯ ಕಾರ್ಯದರ್ಶಿ ಮೀಸೆ ಸತೀಶ್, ಸಮೃದ್ಧಿ ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಟಿ.ಕೆ.ಮಂಜುನಾಥ್, ಉಪಾಧ್ಯಕ್ಷ ಗಂಗಸಂದ್ರ ರಾಜು, ಮುಖಂಡರಾದ ಪ್ರಭಾಕರ್, ಸಿ.ಲೋಕೇಶ್, ಸೈಯದ್, ಮಂಜುಳಾ, ಪಾರ್ವತಮ್ಮ ಮತ್ತಿತರ ವ್ಯಾಪಾರಿಗಳು ಹಾಜರಿದ್ದರು.

ಹೋಬಳಿ ಮಟ್ಟದ ಕ್ರೀಡಾಕೂಟ: ಕರ್ನಾಟಕ ಪಬ್ಲಿಕ್ ಶಾಲೆಯ ಸಾಧನೆ



ಸೂರ್ಯಪ್ರಗತಿನ್ಯೂಸ್.ಕಾಂ

ವೈ.ಎನ್.ಹೊಸಕೋಟೆ ಪಾವಗಡ: ತಾಲೂಕಿನ ವೈ.ಎನ್.ಹೊಸಕೋಟೆ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು 2026–27ನೇ ಸಾಲಿನ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ಮಾಡಿ ಶಾಲೆಗೆ ಕೀರ್ತಿ ತಂದಿದ್ದಾರೆ.
ಬಾಲಕರ ವಾಲಿಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಬಾಲಕಿಯರ ವಿಭಾಗದಲ್ಲಿ 200 ಮೀಟರ್ ಹಾಗೂ 800 ಮೀಟರ್ ಓಟದ ಸ್ಪರ್ಧೆಯಲ್ಲಿ ವಿದ್ಯಾರ್ಥಿನಿ ತ್ರಿಶಾ ಪ್ರಥಮ ಸ್ಥಾನ ಪಡೆದರೆ, 3000 ಮೀಟರ್ ಓಟದ ಸ್ಪರ್ಧೆಯಲ್ಲಿ ಮೌನಿಕ ಪ್ರಥಮ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಮುಖ್ಯ ಶಿಕ್ಷಕರಾದ ನಾಗರಾಜ ಎಸ್.ವಿ, ಸಹ ಶಿಕ್ಷಕರಾದ ಹನುಮಂತರಾಯ.ಎ, ನಾಗ ಪುಷ್ಪ, ಹರೀಶ್.ಎನ್, ಗೋಪಾಲ್ ಟಿ.ಜಿ, ಅತಿಥಿ ಶಿಕ್ಷಕರಾದ ರೇಣುಕಾದೇವಿ, ಶಿಲ್ಪಾ ಹಾಗೂ ಶಾಲಾ ಅಭಿವೃದ್ಧಿ ಸಮಿತಿಯವರು ಅಭಿನಂದನೆ ಸಲ್ಲಿಸಿದ್ದಾರೆ.

ಕೃಷಿಯೊಂದಿಗೆ ಸಣ್ಣಪುಟ್ಟ ಗುಡಿ ಕೈಗಾರಿಕೆಗಳಿಂದ ಆರ್ಥಿಕಮಟ್ಟ ಸುಧಾರಣೆಯಾಗುತ್ತದೆ

ಸೂರ್ಯಪ್ರಗತಿನ್ಯೂಸ್.ಕಾಂ

ಚಿಕ್ಕನಾಯಕನಹಳ್ಳಿ:–ರೈತರು ಮಹಿಳೆಯರು ತಮ್ಮ ಕೃಷಿ ಚಟುವಟಿಕೆಗಳ ನಡುವೆ ಬಿಡುವಿನ ವೇಳೆಯಲ್ಲಿ ಮನೆಯಲ್ಲಿ ತಮಗೆ ಮಾಡಬಹುದಾದಂತಹ ಚಿಕ್ಕ ಚಿಕ್ಕ ಗುಡಿಕೈಗಾರಿಕೆಗಳನ್ನು ಮಾಡಿಕೊಂಡರೆ ಅದರ ಮೂಲಕ ಕುಟುಂಬದ ಆರ್ಥಿಕಮಟ್ಟ ಸುಧಾರಿಸುತ್ತದೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.
ಪಟ್ಟಣದ ಸ್ತ್ರೀಶಕ್ತಿ ಭವನದಲ್ಲಿ ಪರಿವರ್ತನ ಇಕೋ ರೈತ ಉತ್ಪಾದಕರ ಕಂಪನಿ ವತಿಯಿಂದ ಏರ್ಪಡಿಸಲಾಗಿದ್ದ ಸಣ್ಣ ಮತ್ತು ಗುಡಿಕೈಗಾರಿಕೆಗಳ ಸಬಲೀಕರಣ ಹಾಗೂ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಕುರಿತಂತೆ ಏರ್ಪಡಿಸಲಾಗಿದ್ದ ವಿಚಾರಸಂಕಿರಣವನ್ನು ಉದ್ಘಾಟನೆ ಮಾಡಿ ಮಾತನಾಡಿದ ಅವರು ಇಂದು ಕೇವಲ ಕೃಷಿಯನ್ನು ನಂಬಿ ಬದುಕುವುದು ಕಷ್ಟಕರವಾಗಿದೆ ಅದರಲ್ಲೂ ತಾವು ಉತ್ಪಾದನೆ ಮಾಡಿದಂತಹ ವಸ್ತುಗಳಿಗೆ , ಬೆಳೆಗಳಿಗೆ



ಸರಿಯಾದ ಬೆಲೆಯು ಸಿಗದಂತಹ ಪರಿಸ್ಥಿತಿ ಇದ್ದು ಇದರಲ್ಲಿ ಮಧ್ಯವರ್ತಿಗಳು, ದಲ್ಲಾಳಿಗಳು,ವ್ಯಾಪಾರಸ್ಥರು ಲಾಭ ಮಾಡುತ್ತಾರೆ ಅದರೆ ಬೆಳೆದಂತಹ ಉತ್ಪಾದನೆ ಮಾಡಿದಂತಹವರಿಗೆ ಏನು ಸಿಗದಂತಾಗಿದೆ ಅದ್ದರಿಂದ ನೇರ ವಾಗಿ ರೈತರಿಗಾಗಿ, ಗುಡಿಕೈಗಾರಿಕೆಗಳಿಂದ ಉತ್ಪಾದನೆಯಾದಂತಹ ವಸ್ತುಗಳ ಮಾರಾಟಕ್ಕಾಗಿ ಒಂದು ಮಾರಕಟ್ಟೆಯನ್ನು ಮುಂದಿನ ದಿನಗಳಲ್ಲಿ ಪ್ರಾರಂಭಿಸಲಾಗುವುದು ಎಂದ ಅವರು ಕಳೆದ ಬಾರಿ ನಾನು ಶಾಸಕನಾಗಿದ್ದ ವೇಳೆ ತಾಲ್ಲೂಕುಪಂಚಾಯಿತಿ ಪಕ್ಕದಲ್ಲಿ ತೋಟಗಾರಿಕೆ ಬೆಳೆಗಳನ್ನು ಮಾರಾಟ ಮಾಡಲು ಒಂದು ವಾಣಿಜ್ಯ ಸಂಕೀರ್ಣ ಕಟ್ಟಡವನ್ನು ಮಾಡಿದ್ದೇ ಅದರೆ ಅದನ್ನು ಇಂದು ಟೀ ಅಂಗಡಿ ಮಾಡಿದ್ದಾರೆ ಎಂದ ಅವರು ಪ್ರತಿಕುಟುಂಬದಲ್ಲೂ ಒಂದಲ್ಲ ಒಂದು ಕೈ ಕಸುಬುನ್ನು ಇಟ್ಟುಕೊಂಡು ತಮ್ಮ ಮನೆಗಳಲ್ಲಿ ಸಂಘಗಳ ಮೂಲಕ ಸಾಲ ಪಡೆದು ಒಂದು ಕೈಗಾರಿಕೆಗಳನ್ನು ಮಾಡುವ ಮೂಲಕ ಉದ್ಯೋಗದೊಂದಿಗೆ ಲಾಭದಾಯಕವನ್ನಾಗಿ ಈ ಮೂಲಕ ಮಾಡಬೇಕು ಇದರಿಂದ ಆರ್ಥಿವಾಗಿ ಸಬಲರಾಗಬಹುದು ಎಂದರು.
ಈ ಸಂದರ್ಭದಲ್ಲಿ ಕಂಪನಿಯ ಸದಸ್ಯ ಬಸವರಾಜು ಮಾತನಾಡಿ ರೈತರ ಹಾಗೂ ಉತ್ಪಾದಕರಿಂದ ನೇರವಾಗಿ ಮಾರುಕಟ್ಟೆ ಮಾಡುವುದು ಇದರ ಉದ್ದೇಶವಾಗಿದೆ ಇದರಿಂದ ಅವರಿಗೂ ಲಾಭ ಬರುತ್ತದೆ ರೈತರು ಈ ಅವಕಾಶವನ್ನು ಬಳಸಿಕೊಂಡು ಗ್ರಾಮೀಣ ಭಾಗದಲ್ಲಿ ಗುಡಿಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಜನರು ತಮ್ಮ ಜೀವನವನ್ನು ಉತ್ತಮವಾಗಿಸಿಕೊಳ್ಳಿ ಎಂದರು.
ಕಾರ್ಯಕ್ರಮದಲ್ಲಿ ರೈತ ಸೇವಾ ಕೇಂದ್ರದ ಕಿಸಾನ್ ಕಿಟ್ ಕಾರ್ಡ್ಸ್ ನೀಡಲಾಯಿತು.
ಕಾರ್ಯಕ್ರಮದಲ್ಲಿ ರೂಪಾಂತರ ಮಹಿಳಾ ಸಂಘದ ಅಧ್ಯಕ್ಷೆ ರೂಪಾ, ಹಾಗೂ ಕಂಪನಿ ಪದಾಧಿಕಾರಿಗಳಾದ ಬಾಲಕೃಷ್ಣ, ಸುರೇಶ್, ರಾಮಣ್ಣ ಸೇರಿದಂತೆ ಇತರರು

ಪ್ರಧಾನ ಮಂತ್ರಿ ಧನ ಧಾನ್ಯ ಕೃಷಿ ಯೋಜನೆ ಪ್ರಗತಿಯಲ್ಲಿ ತುಮಕೂರು ಪ್ರಥಮ ಸ್ಥಾನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಪ್ರಧಾನ ಮಂತ್ರಿ ಧನ ಧಾನ್ಯ ಕೃಷಿ ಯೋಜನೆಯ ಅನುಷ್ಠಾನದಲ್ಲಿ ತುಮಕೂರು ಜಿಲ್ಲೆ ರಾಜ್ಯದಲ್ಲಿಯೇ ಪ್ರಥಮ ಸ್ಥಾನ ಹಾಗೂ ದೇಶದಲ್ಲಿ 9ನೇ ರ್‍ಯಾಂಕ್ ಪಡೆದಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಜಿಲ್ಲಾ ಪಂಚಾಯತಿ ಕಚೇರಿಯಲ್ಲಿ ಜರುಗಿದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಪ್ರಧಾನ ಮಂತ್ರಿ ಧನ ಧಾನ್ಯ ಕೃಷಿ ಯೋಜನೆಯು ನಮ್ಮ ದೇಶದಲ್ಲಿ ಒಂದು ಪ್ರಮುಖ ಯೋಜನೆಯಾಗಿದ್ದು, 2025 ರಿಂದ ದೇಶದ 100 ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ಕರ್ನಾಟಕ ರಾಜ್ಯದಲ್ಲಿ ಚಿಕ್ಕಬಳ್ಳಾಪುರ, ಚಿತ್ರದುರ್ಗ, ಗದಗ, ಹಾವೇರಿ, ಕೊಪ್ಪಳ ಮತ್ತು ತುಮಕೂರು ಜಿಲ್ಲೆಯಲ್ಲಿ ಅನುಷ್ಠಾನ ಮಾಡಲಾಗುತ್ತಿದೆ ಎಂದು ತಿಳಿಸಿದರು.



ಸದರಿ ಯೋಜನೆಯು 11 ಇಲಾಖೆಗಳ 38 ಕಾರ್ಯಕ್ರಮಗಳನ್ನು ಒಳಗೊಂಡಿದ್ದು, ಕೃಷಿ ಇಲಾಖೆ, ತೋಟಗಾರಿಕೆ, ರೇಷ್ಮೆ, ಪಶು ಸಂಗೋಪನೆ, ಮೀನುಗಾರಿಕೆ, ಸಹಕಾರ, ಕೌಶಲ್ಯಾಭಿವೃದ್ಧಿ, ಭೂ ಮಾಪನ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಲೀಡ್ ಬ್ಯಾಂಕ್, ನಬಾರ್ಡ್, ಕೃಷಿ ವಿಜ್ಞಾನ ಕೇಂದ್ರಗಳನ್ನೊಳಗೊಂಡಿದ್ದು, ಕಾರ್ಯಕ್ರಮಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆಯಲ್ಲಿ ಕಿಎಆಐಇ ಯೋಜನೆಯ ಆಛಿಥ ಠಿಚಿಡಿಜ ನಲ್ಲಿ ಇಂದೀಕರಿಸಲಾಗಿದೆ ಎಂದು ತಿಳಿಸಿದರು.

ಪ್ರಸಕ್ತ ಸಾಲಿನ ಜುಲೈ ಮಾಹೆಯವರೆಗೆ ಎಲ್ಲಾ ಇಲಾಖೆಗಳ ಪ್ರಗತಿಯ ಮಾನದಂಡಗಳ ಆಧಾರದಲ್ಲಿ ತುಮಕೂರು ಜಿಲ್ಲೆಯು ಕರ್ನಾಟಕ ರಾಜ್ಯದಲ್ಲಿ ಪ್ರಥಮ ರ್‍ಯಾಂಕ್ ಹಾಗೂ ದೇಶದಲ್ಲಿ 9ನೇ ರ್‍ಯಾಂಕ್ ಪಡೆದಿರುತ್ತದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದ ಜಿಲ್ಲಾ ನೋಡಲ್ ಅಧಿಕಾರಿ ಡಾ॥ ಏಕರೂಪ್ ಕೌರ್ ಐಎಎಸ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಉಪ ಕಾರ್ಯದರ್ಶಿ ಈಶ್ವರಪ್ಪ ಅವರ ಮಾರ್ಗದರ್ಶನದಲ್ಲಿ ವಿವಿಧ ಇಲಾಖೆಗಳ ಅಧಿಕಾರಿ, ಕೆ.ವಿ.ಕೆ. ವಿಜ್ಞಾನಿಗಳು, ಲೀಡ್ ಬ್ಯಾಂಕ್, ನಬಾರ್ಡ್ ಅಧಿಕಾರಿಗಳ ಸಹಕಾರವು ಈ ಸಾಧನೆಗೆ ಕಾರಣವಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕಿ ಶಾರದಮ್ಮ, ಕೆವಿಕೆ ಮುಖ್ಯಸ್ಥ ಲೋಗಾನಂದನ್ ಸೇರಿದಂತೆ ಮತ್ತಿತರೆ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಸೆ.11ರಂದು ಪರಿಸರ ಗಣಪತಿ ತಯಾರಿಕಾ ಸ್ಪರ್ಧೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಗೌರಿ–ಗಣೇಶ ಹಬ್ಬದ ಅಂಗವಾಗಿ ಜಿಲ್ಲಾ ಬಾಲಭವನ ಸಮಿತಿ ವತಿಯಿಂದ ಸೆಪ್ಟೆಂಬರ್ 11ರಂದು ಬೆಳಗ್ಗೆ 11 ಗಂಟೆಗೆ "ಜೇಡಿ ಮಣ್ಣಿನಿಂದ ಪರಿಸರ ಗಣಪತಿ ತಯಾರಿಕಾ ಸ್ಪರ್ಧೆ" ಯನ್ನು ಏರ್ಪಡಿಸಲಾಗಿದೆ.

ಸ್ಪರ್ಧೆಯಲ್ಲಿ ಭಾಗವಹಿಸಲಿಚ್ಛಿಸುವ ಮಕ್ಕಳ ಪೋಷಕರು ಸೆಪ್ಟೆಂಬರ್ 9ರಂದು ಸಂಜೆ 4 ಗಂಟೆಯೊಳಗೆ ಜಿಲ್ಲಾ ಬಾಲಭವನ ಕಚೇರಿ, ಮಹಾತ್ಮಗಾಂಧಿ ರಸ್ತೆ ತುಮಕೂರು ಕಚೇರಿಯಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ಕಿರಿಯ ಪ್ರಾಥಮಿಕ ಪಾಠ ಶಾಲೆ ಮತ್ತು ಪ್ರೌಢಶಾಲಾ ವಿಭಾಗದಿಂದ 5 ರಿಂದ 16 ವರ್ಷದ ಒಟ್ಟು 150 ಮಕ್ಕಳಿಗೆ ಮಾತ್ರ ಭಾಗವಹಿಸಲು ಅವಕಾಶವಿರುತ್ತದೆ. ಸರ್ಕಾರಿ ಶಾಲೆ/ಸೌಲಭ್ಯ ವಂಚಿತ/ಗ್ರಾಮೀಣ ಮಕ್ಕಳಿಗೆ



ಮೊದಲ ಆದ್ಯತೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 9 9018 90079ನ್ನು ಸಂಪರ್ಕಿಸಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಡಾ: ಸಿದ್ದರಾಮಣ್ಣ ತಿಳಿಸಿದ್ದಾರೆ.

ಬೀದಿ ಬದಿ ವ್ಯಾಪಾರಿಗಳ ಬದುಕಿಗೆ ಹೊಡೆತ ನೀಡುವ ತೆರವು ಕ್ರಮ ತಕ್ಷಣ ನಿಲ್ಲಿಸಿ!

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು ನಗರದಲ್ಲಿ ವರ್ಷಗಳಿಂದ ಬೀದಿ ಬದಿ ವ್ಯಾಪಾರ ನಡೆಸುತ್ತಿರುವ ಬಡ ವ್ಯಾಪಾರಿಗಳನ್ನು ಪರ್ಯಾಯ ವ್ಯವಸ್ಥೆ ಕಲ್ಪಿಸದೆ ಏಕಾಏಕಿ ತೆರವುಗೊಳಿಸುತ್ತಿರುವ ಕ್ರಮವನ್ನು ತಕ್ಷಣ ನಿಲ್ಲಿಸಿ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಸಿಐಟಿಯು ಜಿಲ್ಲಾ ಕಾರ್ಯದರ್ಶಿ ಎನ್.ಕೆ.ಸುಬ್ರಮಣ್ಯ ಆಗ್ರಹಿಸಿದರು
ಅವರುಬೀದಿಬದಿ ವ್ಯಾಪಾರಿಗಳ ಬದುಕಿಗೆ ಹೊಡೆತ ನೀಡುವ ತೆರವು ಕ್ರಮವನ್ನು ತಕ್ಷಣ ನಿಲ್ಲಿಸಬೇಕು ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿ ತುಮಕೂರು ಮಹಾನಗರ ಪಾಲಿಕೆ ಎದುರು ನಡೆಸಿದ ಹೋರಾಟವನ್ನು ಉದ್ದೇಶಿಸಿ ಮಾತನಾಡಿದರು.ಸಾವಿರಾರು ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಬೀದಿ ಬದಿ ವ್ಯಾಪಾರವೇ ಪ್ರಮುಖ ಜೀವನೋಪಾಯವಾಗಿದೆ. ತರಕಾರಿ, ಹಣ್ಣು, ಆಹಾರ ಪದಾರ್ಥ, ಬಟ್ಟೆ ಹಾಗೂ ದಿನನಿತ್ಯದ ಅಗತ್ಯ ವಸ್ತುಗಳನ್ನು ಮಾರಾಟ ಮಾಡುವ ಈ ಸಣ್ಣ ವ್ಯಾಪಾರಿಗಳು ನಗರದ ಆರ್ಥಿಕ ಚಟುವಟಿಕೆಯ ಅವಿಭಾಜ್ಯ ಅಂಗವಾಗಿದ್ದಾರೆ. ನಗರದ ಅಭಿವೃದ್ಧಿ ಅಗತ್ಯ; ಆದರೆ ಬಡವರ ಬದುಕನ್ನು ಬಲಿಕೊಟ್ಟು ಅಭಿವೃದ್ಧಿ ಸಾಧಿಸುವುದು ಸಾಮಾಜಿಕ ನ್ಯಾಯವಲ್ಲ ಎಂದರು.
ಮಹದೇವ್ ಮಾತನಾಡಿ ಬೀದಿಬದಿಗಳಲ್ಲಿ ಲಿಡ್‌ಕರ್ ನೀಡಿರುವ ಚರ್ಮ ಕುಟೀರದಲ್ಲಿ ಚಪ್ಪಲಿ ರಿಪೇರಿ ಮತ್ತು ಪಾಲಿಶ್ ಮಾಡುವ ಕುಶಲಕರ್ಮಿಗಳಿಗೆ ಜನ ಸಂದಣಿ ಇರುವ ಸ್ಥಳದಲ್ಲಿ ಪರ್ಯಾಯ ವ್ಯವಸ್ಥೆ ಕಲ್ಪಿಸಿಕೊಡಬೇಕು ಎಂದು ಒತ್ತಾಯಿಸಿದರು. ಈ ಅನ್ಯಾಯದ ತೆರವು ಕ್ರಮವನ್ನು ವಿರೋಧಿಸಿ ಸೆಪ್ಟೆಂಬರ್ 1ರಂದು ತುಮಕೂರು ಟೌನ್‌ಹಾಲ್‌ನಿಂದ ಮಹಾನಗರ ಪಾಲಿಕೆ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ಪಾಲಿಕೆ ಆಯುಕ್ತರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು. ಆಯುಕ್ತರ ಪರವಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿ ಮನವಿ ಸ್ವೀಕರಿಸಿ ಮತನಾಡಿದ .ನಿಮ್ಮ ಸಮ್ಯಸೆಗಳ ಸಂಬಂದ ಸಭೆಯನ್ನು ಕರೆದು ಇತ್ಯರ್ಥ ಪಡಿಸಲಾಗುವುದು ಎಂದರು
ಸಂಘದ ಮುಖಂಡರಾದ ಲಕ್ಷ್ಮಮ್ಮ ಮಾತನಾಡಿ ಫುಟ್‌ಪಾತ್‌ನಲ್ಲಿ ಸಂಚಾರಕ್ಕೆ ತೊಂದರೆ, ಸ್ವಚ್ಛತೆ ಅಥವಾ ನಗರ ಸೌಂದರ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳಿದ್ದರೆ ಅವುಗಳಿಗೆ ವೈಜ್ಞಾನಿಕ ಪರಿಹಾರ ಕಂಡುಕೊಳ್ಳಬೇಕು. ತೆರವುಗೊಳಿಸುವುದೇ ಏಕೈಕ ಪರಿಹಾರವಲ್ಲ. ವ್ಯಾಪಾರಿಗಳಿಗೆ ಸೂಕ್ತ ಸ್ಥಳ ಗುರುತಿಸಿ, ವ್ಯವಸ್ಥಿತ ವ್ಯಾಪಾರ ವಲಯಗಳನ್ನು ನಿರ್ಮಿಸಿ, ಮೂಲಭೂತ ಸೌಲಭ್ಯ ಕಲ್ಪಿಸುವುದು ಸರ್ಕಾರ ಮತ್ತು ಮಹಾನಗರ ಪಾಲಿಕೆಯ ಜವಾಬ್ದಾರಿಯಾಗಿದೆ. ವರ್ಷ ಗಳಿಂದ ವ್ಯಾಪಾರ ನಡೆಸುತ್ತಿರುವವರನ್ನು ದೂರದ ಪ್ರದೇಶಗಳಿಗೆ ಸ್ಥಳಾಂತರಿಸಿದರೆ ಗ್ರಾಹಕರು ಕಡಿಮೆಯಾಗುತ್ತಾರೆ, ವ್ಯಾಪಾರ ಕುಸಿಯುತ್ತದೆ ಮತ್ತು ಕುಟುಂಬಗಳ ಜೀವನೋಪಾಯವೇ ನಷ್ಟವಾಗುತ್ತದೆ. ಆದ್ದರಿಂದ ಅದೇ ಪ್ರದೇಶದಲ್ಲಿ ಅಥವಾ ಸಮೀಪದಲ್ಲೇ ಪರ್ಯಾಯ ವ್ಯಾಪಾರ ಸ್ಥಳ ಕಲ್ಪಿಸಬೇಕು ಎಂದು ಸಿಐಟಿಯು ಒತ್ತಾಯಿಸಿದೆ.2014ರ ಕಾಯ್ದೆ ಜಾರಿಗೊಳಿಸಿ ಬೀದಿ ಬದಿ ವ್ಯಾಪಾರಿಗಳ ಜೀವನೋಪಾಯ ಮತ್ತು ಹಕ್ಕುಗಳ ರಕ್ಷಣೆಗೆ Street Vendors (Protection of Livelihood and Regulation of Street Vending) Act, 2014 ಕಾನೂನು ಚೌಕಟ್ಟನ್ನು ಒದಗಿಸಿದೆ. ಇದರ ಆಶಯದಂತೆ ಸರ್ವೆ, ಗುರುತಿನ ಚೀಟಿ, ವ್ಯಾಪಾರ ವಲಯಗಳ ಗುರುತಿಸುವಿಕೆ ಮತ್ತು ನಿಯಮಿತ ವ್ಯಾಪಾರ ವ್ಯವಸ್ಥೆಯನ್ನು ಜಾರಿಗೊಳಿಸಬೇಕು. ಸರ್ಕಾರ ಮತ್ತು ತುಮಕೂರು ಮಹಾನಗರ ಪಾಲಿಕೆ ತಕ್ಷಣ ಮಧ್ಯಪ್ರವೇಶಿಸಿ ಸರ್ವೆಗುರುತಿನ ಚೀಟಿ ವ್ಯಾಪಾರ ವಲಯ ಪರ್ಯಾಯ ಸ್ಥಳ ಮೂಲಭೂತ ಸೌಲಭ್ಯ ಒಳಗೊಂಡ ಸಮಗ್ರಯೋಜನೆಯನ್ನು ಜಾರಿಗೊಳಿಸಬೇಕು. ಪರ್ಯಾಯವ್ಯವಸ್ಥೆಕಲ್ಪಿಸದೆ ತೆರವುಕ್ರಮ ಮುಂದುವರಿಸಿದರೆ ಬೀದಿ ಬದಿ ವ್ಯಾಪಾರಿಗಳ ಜೀವನೋಪಾಯದ ರಕ್ಷಣೆಗೆ ಸಿಐಟಿಯು ನೇತೃತ್ವದಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ತುಮಕೂರು ಜಿಲ್ಲಾ ಫುಟ್‌ಪಾತ್ ವ್ಯಾಪಾರಿಗಳ ಸಂಘ ಸಿಐಟಿಯು ಎಚ್ಚರಿಸಿದೆ. ಪ್ರತಿಭಟನೆಯಲ್ಲಿ ಲಕ್ಷ್ಮಿಕಾಂತ್, ರಂಜಿತ, ನಜೀಮಾ, ಆನಂದ, ರವಿ, ನಾಗಣ್ಣ, ಕೃಷ್ಣಮೂರ್ತಿ, ಚರ್ಮ ಕುಟಿರ ಮಹದೇವ, ಆನಂದ, ಕೃಷ್ಣದೇವಮ್ಮ, ಸುದೀರ್,ಇಂತಿಯಾಜಪಾಷ್ ಮುಂತಾದವರು ಭಾಗವಹಿಸಿದ್ದರು.



ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಜಾಬ್ ಕಾರ್ಡ್ ಮೇಳಕ್ಕೆ ಚಾಲನೆ

ಕುಣಿಗಲ್: ಗ್ರಾಮೀಣ ಪ್ರದೇಶದ ಪ್ರತಿಯೊಬ್ಬ ಅರ್ಹ ಕೂಲಿಕಾರರಿಗೂ G RGC ಜಾಬ್ ಕಾರ್ಡ್ ದೊರೆಯುವಂತೆ ಮಾಡುವ ಉದ್ದೇಶದಿಂದ ತಾಲೂಕಿನ ನಿಡಸಾಲೆ ಗ್ರಾಮ ಪಂಚಾಯಿತಿಗಳಲ್ಲಿ ಹಮ್ಮಿಕೊಂಡಿರುವ ಜಾಬ್ ಕಾರ್ಡ್ ಮೇಳಕ್ಕೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವಸಂತ್ ಕುಮಾರ್ ಅವರು ಚಾಲನೆ ನೀಡಿದರು.



ಅವರು ಮಾತನಾಡುತ್ತಾ , ವಿವಿಜಿ–ರಾಮ್‌ಜಿ ಯೋಜನೆಯಡಿ ಅರ್ಹ ಕೂಲಿಕಾರರಿಗೆ ದಿನಕ್ಕೆ 382 ಕೂಲಿ ದೊರೆಯಲಿದ್ದು, ಗ್ರಾಮೀಣ ಜನರು ಕೃಷಿ ಹೊಂಡ, ತೋಟಗಾರಿಕಾ ಅಭಿವೃದ್ಧಿ, ದನದ ಕೊಟ್ಟಿಗೆ, ಮೇಕೆ ಶೆಡ್ ಸೇರಿದಂತೆ ವಿವಿಧ ವೈಯಕ್ತಿಕ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿದೆ. ಅರ್ಹರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು
ತಾಲೂಕು ಜಿಲ್ಲೆಯಲ್ಲಿ ಮಾನವ ದಿನಗಳ ಸೃಜನೆಯಲ್ಲಿ ಪ್ರಥಮ ಸ್ಥಾನದಲ್ಲಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಮಾನವ ದಿನಗಳನ್ನು ಸೃಜಿಸುವ ನಿಟ್ಟಿನಲ್ಲಿ ಗ್ರಾಮೀಣ ಕೂಲಿಕಾರರು ಹೆಚ್ಚಿನ ಸಂಖ್ಯೆಯಲ್ಲಿ ಯೋಜನೆಯಡಿ ಉದ್ಯೋಗ ಪಡೆಯಬೇಕು ಎಂದು ತಿಳಿಸಿದರು.
ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಕಾಂತರಾಜು ಮಾತನಾಡಿ, ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿಯೂ ಹೊಸ ಹಾಗೂ ವೈಯಕ್ತಿಕ ಕಾಮಗಾರಿಗಳಿಗೆ ಅಗತ್ಯ ಅನುಮೋದನೆ ಪಡೆದು ಕೆಲಸ ಹಂಚಿಕೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಜನರಿಗೆ ಆದ್ಯತೆಯ ಮೇರೆಗೆ ಉದ್ಯೋಗ ಕಲ್ಪಿಸಲಾಗುತ್ತಿದೆ ಎಂದು ತಿಳಿಸಿದರು.
ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸ್ಥಳೀಯ ಗ್ರಾಮಸ್ಥರು

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. GMAIL: suryapragathi2021@gmail.com.